ಸಂಪುಟ: 22, ಸಂಚಿಕೆ: 87, ಪುಟಗಳು: 8, ಸೋಮವಾರ, 6 ಜನವರಿ 2025 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3




ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines




**ಸುಭಾಷಿತ**

ಪ್ರಶ್ನಿಸಲು ಧೈರ್ಯ ಬೇಕು. ಹಾಗೆಯೇ ಉತ್ತರವನ್ನು ಅರ್ಥ ಮಾಡಿಕೊಳ್ಳಲು ಸಂಯಮವಿರಬೇಕು.

**ಪಂಚಾಂಗ**

(ಸೋಮವಾರ 6, ಜನವರಿ-2025)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ಹೇಮಂತ ಋತು
- ಪುಷ್ಯ ಮಾಸ, ಶುಕ್ಲ ಪಕ್ಷ,
- ವಾರ: ಸೋಮವಾರ, ತಿಥಿ: ಸಪ್ತಮಿ
- ನಕ್ಷತ್ರ: ಉತ್ತರಭಾದ್ರ,
- ರಾಹುಕಾಲ: 8:11 ರಿಂದ 9:37
- ಗುಳಿಕಕಾಲ: 1:54 ರಿಂದ 3:20
- ಯಮಗಂಡಕಾಲ: 11:03 ರಿಂದ 12:29

## ಸಂಕ್ಷಿಪ್ತ ಸುದ್ದಿ

### ನಡುರಸ್ತೆಯಲ್ಲಿ ವಿದ್ಯಾರ್ಥಿನಿಯ ಕತ್ತು ಹಿಸುಕಿ ಕೊಲೆ ಮಾಡಲು ಯತ್ನಿಸಿದ ಯುವಕ



**ಉತ್ತರ ಪ್ರದೇಶ:** ಯುವಕನೊಬ್ಬ ನಡುರಸ್ತೆಯಲ್ಲಿ ನರ್ಸಿಂಗ್ ವಿದ್ಯಾರ್ಥಿನಿಯ ಕತ್ತು ಹಿಸುಕಿ ಕೊಲೆ ಮಾಡಲು ಯತ್ನಿಸಿರುವ ಘಟನೆ ಉತ್ತರ ಪ್ರದೇಶದ ಅಮ್ರೋಹಾದಲ್ಲಿ ನಡೆದಿದೆ. ಹಾಡಹಗಲೇ ತನ್ನ ಸ್ಕೂಟರ್ ನಲ್ಲಿ ಹೋಗುತ್ತಿದ್ದ ವಿದ್ಯಾರ್ಥಿನಿಯ ಕುತ್ತಿಗೆಗೆ ದುಪಟ್ಟಾ ಸುತ್ತಿ ಕೆಳಗೆ ಬೀಳಿಸಿ ಹತ್ಯೆ ಮಾಡಲು ಯತ್ನಿಸಿದ್ದ, ದಾರಿಯಲ್ಲಿ ಹೋಗುವವರು ಕೂಡಲೇ ಧಾವಿಸಿ ಆಕೆಯನ್ನು ರಕ್ಷಿಸಿದ್ದಾರೆ. ಸಲಾಂಪುರ್ ಗೋಸಾಯಿ ಪ್ರದೇಶದಲ್ಲಿ ಈ ಘಟನೆ ನಡೆದಿದೆ. ಆರೋಪಿ ರಾಹುಲ್ ಸ್ಥಳೀಯ ವೈದ್ಯಕೀಯ ಕಾಲೇಜಿನ ವಿದ್ಯಾರ್ಥಿ ಮೇಲೆ ಹಲ್ಲೆ ನಡೆಸಿದ್ದಾನೆ.

### ಕೆಲಸ ಸರಿ ಮಾಡಿಲ್ಲ ಎಂದಿದ್ದಕ್ಕೆ ಚಾಕುವಿನಿಂದ ಇರಿದು ಕೊಲೆ



**ಅಸ್ಸಾಂ:** ಇತ್ತೀಚಿನ ದಿನಗಳಲ್ಲಿ ಸಣ್ಣ ಪುಟ್ಟ ಮಾತುಗಳೂ ಕೂಡ ಕೊಲೆಯ ಹಂತಕ್ಕೆ ಹೋಗಿಬಿಡುತ್ತವೆ. ಕೇವಲ ಕೆಲಸದ ಗುಣಮಟ್ಟ ಸರಿ ಇಲ್ಲ, ಸರಿಯಾಗಿ ಕೆಲಸ ಮಾಡಿಲ್ಲ ಎಂದಿದ್ದಕ್ಕೆ ಸಹೋದ್ಯೋಗಿಯನ್ನು ಕೊಲೆ ಮಾಡಿರುವ ಘಟನೆ ಗುರುಗ್ರಾಮದಲ್ಲಿ ನಡೆದಿದೆ. ಆರೋಪಿ ಅಸ್ಸಾಂ ಮೂಲದ ಅರ್ಜುನ್ ಶವತಾಲ್ (22) ಎಂಬಾತನನ್ನು ಬಂಧಿಸಲಾಗಿದ್ದು, ಅಪರಾಧಕ್ಕೆ ಬಳಸಿದ ಚಾಕುವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಪುಟ 2

# ಬೆಂಗಳೂರು, ಮಗುವಿನಲ್ಲಿ ಎಚ್‌ಎಂಪಿವಿ ವೈರಸ್ ಪತ್ತೆ

**ಬೆಂಗಳೂರು:** ಬೆಂಗಳೂರಿನಲ್ಲಿ 8 ತಿಂಗಳ ಮಗುವಿನಲ್ಲಿ ಎಚ್ ಎಂಪಿವಿ ವೈರಸ್ ದೃಢಪಟ್ಟಿದೆ. ಮಗುವಿಗೆ ಜ್ವರ ಬಂದ ಕಾರಣ ನಗರದ ಖಾಸಗಿ ಆಸ್ಪತ್ರೆಯಲ್ಲಿ ಅಡ್ಮಿಟ್ ಮಾಡಲಾಗಿತ್ತು. ರಕ್ತ ಪರೀಕ್ಷೆ ಮಾಡಿಸಿದಾಗ HMPV ವೈರಸ್ ಇರುವುದು ಪತ್ತೆಯಾಗಿದೆ. ಆದರೆ, ಈ ಬಗ್ಗೆ ಆತಂಕ ಪಡುವ ಅಗತ್ಯವಿಲ್ಲ ಎಂದು ಆರೋಗ್ಯ ಇಲಾಖೆ ಪ್ರಧಾನ ಕಾರ್ಯದರ್ಶಿ ಹರ್ಷಗುಪ್ತ ಮಾಹಿತಿ ನೀಡಿದ್ದಾರೆ.

ಎಚ್ ಎಂಪಿವಿ ವೈರಸ್ ಭಾರತದಲ್ಲೂ ಇದೆ. ಆದರೆ, ಅದು ಮ್ಯೂಟೇಷನ್ ಆಗಿದೆಯಾ ಎಂಬ ಬಗ್ಗೆ ಇನ್ನೂ ಸ್ಪಷ್ಟನೆ ಇಲ್ಲ. ನಮಗೆ ಚೀನಾದಲ್ಲಿ ಮ್ಯುಟೇಟ್ ಆಗಿರುವ ವೈರಸ್ ಹೇಗಿದೆ ಎಂದು ತಿಳಿದಿಲ್ಲ. ಹೀಗಾಗಿ ಇಲ್ಲಿ ಪತ್ತೆಯಾಗಿರುವುದು ಸಾಮಾನ್ಯ HMPV ವೈರಸ್ಸೇ ಅಥವಾ ಚೀನಾದ ತಳಿಯಾ ಎಂಬ ಗೊಂದಲ ಇದೆ. ಭಾರತದಲ್ಲೂ ಸಾಮಾನ್ಯ HMPV ವೈರಸ್ ಶೇ 0.78 ರಷ್ಟು ಕಾಣಿಸುತ್ತದೆ ಎಂದು ಅವರು ತಿಳಿಸಿದ್ದಾರೆ.

ಸದ್ಯ ಸೋಂಕು ಪತ್ತೆಯಾಗಿರುವ ಮಗುವಿಗೆ ಮತ್ತು ಕುಟುಂಬದವರಿಗೆ ಟ್ರಾವೆಲ್ ಹಿಸ್ಟರಿ ಇಲ್ಲ. ಈ ಹಿನ್ನೆಲೆಯ ಬಗ್ಗೆ ಆರೋಗ್ಯ ಇಲಾಖೆ ಕೂಡಾ ಪರಿಶೀಲನೆ ನಡೆಸುತ್ತಿದೆ. ಯಾರೂ ಆತಂಕ ಪಡುವ ಅಗತ್ಯವಿಲ್ಲ ಎಂದು ಹರ್ಷಗುಪ್ತ ತಿಳಿಸಿದ್ದಾರೆ.



**ಕೇಂದ್ರಕ್ಕೆ ಮಾಹಿತಿ:** ಮಗುವಿನಲ್ಲಿ ವೈರಸ್ ಪತ್ತೆಯಾದ ಬಗ್ಗೆ ಕೇಂದ್ರ ಆರೋಗ್ಯ ಇಲಾಖೆಗೆ ರಾಜ್ಯ ಆರೋಗ್ಯ ಇಲಾಖೆ ಮಾಹಿತಿ ನೀಡಿದೆ. ಕೇಂದ್ರ ಆರೋಗ್ಯ ಇಲಾಖೆ ಅಧಿಕಾರಿಗಳ ಜತೆ ನಿರಂತರ ಸಂಪರ್ಕದಲ್ಲಿದ್ದೇವೆ ಎಂದೂಆರೋಗ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಸೂಕ್ತ ಮುನ್ನೆಚ್ಚರಿಕೆ ವಹಿಸಿ ಎಂದು ಕೇಂದ್ರ ಆರೋಗ್ಯ ಇಲಾಖೆ ರಾಜ್ಯಕ್ಕೆ ಸೂಚಿಸಿದೆ.

**ಏನಿದು HMPV ವೈರಸ್:** ಸದ್ಯ ಚೀನಾದಲ್ಲಿ ಆತಂಕಕ್ಕೆ ಕಾರಣವಾಗಿದೆ ಎನ್ನಲಾಗಿರುವ ಹ್ಯೂಮನ್ ಮೆಟಾಪ್ನ್ಯೂಮೋ ವೈರಸ್ ಅಥವಾ ಎಚ್ ಎಂಪಿವಿ ಹೊಸದೇನಲ್ಲ, ಇದನ್ನು ಮೊದಲು 2001 ರಲ್ಲಿ ಕಂಡುಹಿಡಿಯಲಾಯಿತು ಎಂದು ಯುಎಸ್ ಸೆಂಟರ್ಸ್ ಫಾರ್ ಡಿಸೀಸ್ ಕಂಟ್ರೋಲ್ ಅಂಡ್ ಪ್ರಿವೆನ್ಷನ್ ಹೇಳಿದೆ. ಆದಾಗ್ಯೂ, ಕೆಲವು ಸೆರೋಲಾಜಿಕ್ ಪುರಾವೆಗಳು ವೈರಸ್ 1958 ರಿಂದಲೇ ವ್ಯಾಪಕವಾಗಿ ಹರಡಿತ್ತು ಎಂಬುದನ್ನು ನಿರೂಪಿಸಿರುವುದಾಗಿ ತಜ್ಞರು ಹೇಳಿದ್ದಾರೆ.

**ಕೊರೊನಾ ವೈರಸ್ ಗಿಂತ ಭಿನ್ನವೇ :** ಕೊರೊನಾವೈರಸ್ ಅಥವಾ COVID-19 ಒಂದು ಸಾಂಕ್ರಾಮಿಕ ಕಾಯಿಲೆಯಾಗಿದೆ. ಇದು SARS-CoV-2 ವೈರಸ್ ನಿಂದ ಉಂಟಾಗುತ್ತದೆ. ಎಚ್ ಎಂಪಿವಿ ವೈರಸ್ ಮತ್ತು ಕೊರೊನಾ ವೈರಸ್ ಕೆಲವು ರೀತಿಯಲ್ಲಿ ಹೋಲಿಕೆಯನ್ನು ಒಳಗೊಂಡಿವೆ. ಉದಾಹರಣೆಗೆ; ಎರಡೂ ವೈರಸ್‌ಗಳು ಎಲ್ಲಾ ವಯಸ್ಸಿನ ಜನರಲ್ಲಿ ಉಸಿರಾಟದ ಕಾಯಿಲೆಗೆ ಕಾರಣವಾಗುತ್ತವೆ. ಚಿಕ್ಕ ಮಕ್ಕಳು, ಹಿರಿಯ ವಯಸ್ಕರು ಮತ್ತು ದುರ್ಬಲ ರೋಗನಿರೋಧಕ ಶಕ್ತಿ ಹೊಂದಿರುವ ಜನರು ಹೆಚ್ಚು ಅಪಾಯಕ್ಕೆ ಒಳಗಾಗುತ್ತಾರೆ.

ಪುಟ 2

## ಅಮಿತ್ ಶಾ ಹೇಳಿಕೆ ಖಂಡಿಸಿ ಪ್ರತಿಭಟನೆಗೆ ಕರೆ

# ಬಸ್ ಸಂಚಾರ ಬಂದ್

**ಕೊಪ್ಪಳ:** ಡಾ. ಬಿ.ಆರ್. ಅಂಬೇಡ್ಕರ್ ಅವರ ಬಗ್ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ ಎಂದು, ಅವರ ರಾಜೀನಾಮೆ ಪಡೆದು, ಗಡಿಪಾರು ಮಾಡಬೇಕು ಎಂದು ಆಗ್ರಹಿಸಿ ವಿವಿದ ದಲಿತ ಹಾಗೂ ಪ್ರಗತಿಪರ ಸಂಘಟನೆಗಳು ಇಂದು ಕೊಪ್ಪಳ ಬಂದ್‌ಗೆ ಕರೆ ಕೊಟ್ಟಿವೆ.

ಈ ಹಿನ್ನೆಲೆಯಲ್ಲಿ ಮುಂಜಾನೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೂ ಕೊಪ್ಪಳದಲ್ಲಿ ಬಸ್ ಸಂಚಾರ ಬಂದ್ ಆಗುವ ಸಾಧ್ಯತೆ ಇದೆ. ಇನ್ನುಳಿದಂತೆ ಆಟೋ ಸಂಚಾರ ಇರುವುದಿಲ್ಲ ಹಾಗಾಗಿ ಇಂದು ಖಾಸಗಿ ಶಿಕ್ಷಣ ಸಂಸ್ಥೆಗಳ ಶಾಲಾ ಕಾಲೇಜುಗಳಿಗೆ ರಜೆ ಘೋಷಣೆ ಮಾಡಲಾಗಿದೆ.

**ಅಮಿತ್ ಶಾ ಗಡಿಪಾರಿಗೆ ಆಗ್ರಹ:** ಬೈಕ್, ಆಟೋ ರ್ಯಾಲಿ ನಡೆಸುವ ಮೂಲಕ ಬೃಹತ್ ಮೆರವಣಿಗೆ ಆಯೋಜನೆ ಮಾಡಲಾಗಿದೆ. ಸಂಸತ್ತಿನಲ್ಲಿ ಗೃಹಸಚಿವ ಅಮಿತ್ ಷಾ ಹೇಳಿಕೆಗೆ ಆಕ್ರೋಶ ವ್ಯಕ್ತಪಡಿಸಿರುವ ಸಂಘಟನೆಗಳು ಅಮಿತ್ ಶಾರನ್ನು ಗಡಿಪಾರು ಮಾಡಬೇಕೆಂದು ಆಗ್ರಹಿಸಿವೆ.



ಸುಮಾರು 500 ಜನರ ಭದ್ರತಾ ಸಿಬ್ಬಂದಿಯನ್ನು ನಿಯೋಜನೆ

ಕೊಪ್ಪಳ ಬಂದ್ ಹಿನ್ನೆಲೆ ಬಿಗಿ ಪೊಲೀಸ್ ಭದ್ರತೆ ಒದಗಿಸಲಾಗಿದೆ. ಸುಮಾರು 500 ಜನರ ಭದ್ರತಾ ಸಿಬ್ಬಂದಿಯನ್ನು ನಿಯೋಜನೆ ಮಾಡಲಾಗಿದೆ. ಬೆಳಗ್ಗೆ ಹೋಗುವ ಬಸ್ ಗಳು ಓಡಾಟ ಆರಂಭಿಸಿವೆ. ಸ್ವಲ್ಪ ಸಮಯದ ಬಳಿಕ ಬಸ್ ಸೇವೆ ಬಂದ್ ಮಾಡಿಸುವ ಸಾಧ್ಯತೆ ಇದೆ. ಓಡಾಟ ನಡೆಸುತ್ತಿರುವ ಆಟೋಗಳಿಗೆ ಸಂಚಾರ ಬಂದ್ ಮಾಡುವ ಮೂಲಕ ಬಂದ್ ಗೆ ಸಹಕರಿಸುವಂತೆ ಮನವಿ ಮಾಡಲಾಗಿದೆ.

ಸಂಸತ್ತಿನ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಅಮಿತ್ ಶಾ ತಮ್ಮ ಭಾಷಣದ ವೇಳೆ, ಅಂಬೇಡ್ಕರ್, ಅಂಬೇಡ್ಕರ್ ಎಂದು ನಾಮಸ್ಮರಣೆ ಮಾಡುವುದು ಒಂದು ಫ್ಯಾಷನ್ ಆಗಿದೆ. ಇಷ್ಟು ಬಾರಿ ದೇವರ ನಾಮಸ್ಮರಣೆ ಮಾಡಿದರೆ ಏಳು ಜನ್ಮಗಳಿಗೆ ಸ್ವರ್ಗ ಸಿಗುತ್ತಿತ್ತು ಎಂದು ಹೇಳಿದ್ದರು.

## ಇಂದು ನಾ ಡಿಸೋಜ ಅಂತ್ಯಕ್ರಿಯೆ



**ಮಂಗಳೂರು:** ಕನ್ನಡದ ಹಿರಿಯ ಸಾಹಿತಿ ಡಾ ನಾ ಡಿಸೋಜ ಭಾನುವಾರ ರಾತ್ರಿ 7.50ಕ್ಕೆ ಮಂಗಳೂರಿನ ಫಾದರ್ ಮುಲ್ಲರ್ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದು, ಇಂದು ಅವರ ಪಾರ್ಥಿವ ಶರೀರವನ್ನು ಶಿವಮೊಗ್ಗ ಜಿಲ್ಲೆಯ ಸಾಗರದಲ್ಲಿರುವ ಅವರ ಸ್ವಗೃಹಕ್ಕೆ ಕೊಂಡೊಯ್ಯಲಾಗುತ್ತಿದೆ. ಇಂದು ಮಧ್ಯಾಹ್ನದಿಂದ ಮಂಗಳವಾರ ಮಧ್ಯಾಹ್ನದ ವರೆಗೂ ಸಾರ್ವಜನಿಕರ ಅಂತಿಮ ದರ್ಶನಕ್ಕೆ ಅವಕಾಶ ಕಲ್ಪಿಸಲಾಗುವುದು ಎಂದು ಅವರು ಪುತ್ರ ನವೀನ್ ತಿಳಿಸಿದ್ದಾರೆ.

ಏತನ್ಮಧ್ಯೆ, ಡಿಸೋಜಾ ನಿಧನಕ್ಕೆ ಸಿಎಂ ಸಿದ್ದರಾಮಯ್ಯ ಸಂತಾಪ ಸೂಚಿಸಿದ್ದಾರೆ. ನಾಡಿನ ಹಿರಿಯ ಸಾಹಿತಿ ನಾ.ಡಿಸೋಜಾ ಅವರ ನಿಧನದಿಂದ ದುಃಖಿತನಾಗಿದ್ದೇನೆ. ಸಾಹಿತ್ಯ ಕೃಷಿಯ ಜೊತೆಯಲ್ಲಿ ಪರಿಸರ ರಕ್ಷಣೆಯ ಹೋರಾಟದಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದ ನಾ.ಡಿಸೋಜಾ ಅವರು ಜನಪರ ಕಾಳಜಿಯ ಲೇಖಕ. ನಾ.ಡಿಸೋಜಾ ಅವರ ಕುಟುಂಬ ಮತ್ತು ಅಭಿಮಾನಿಗಳ ದುಃಖದಲ್ಲಿ ನಾನೂ ಭಾಗಿಯಾಗಿದ್ದೇನೆ ಎಂದು ಅವರು ಎಕ್ಸ್ ಸಂದೇಶದಲ್ಲಿ ಉಲ್ಲೇಖಿಸಿದ್ದಾರೆ.

## ಸುಮಲತಾ ಬಳಸುತ್ತಿದ್ದ ಕಾರು ನಿರಾಕರಿಸಿದರು ಕುಮಾರಸ್ವಾಮಿ

# ಚಲುವರಾಯಸ್ವಾಮಿ ಹೊಸ ಆರೋಪ

**ಮಂಡ್ಯ:** ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಕರ್ನಾಟಕ ಪ್ರವಾಸದ ವೇಳೆ ರಾಜ್ಯ ಸರ್ಕಾರ ಕಾರು ನೀಡದೆ ಶಿಷ್ಟಾಚಾರ ಉಲ್ಲಂಘಿಸಿದೆ ಎಂಬ ಆರೋಪಕ್ಕೆ ಇದೀಗ ಹೊಸ ತಿರುವು ದೊರೆತಿದೆ. ಮಾಜಿ ಸಂಸದೆ ಸುಮಲತಾ ಉಪಯೋಗಿಸುತ್ತಿದ್ದ ಕಾರು ಬಳಸಲು ಕುಮಾರಸ್ವಾಮಿ ನಿರಾಕರಿಸಿದರೇ ಎಂಬ ಪ್ರಶ್ನೆಯನ್ನೂ ಹುಟ್ಟುಹಾಕಿದೆ.



ಪುಟ 2

## ಕರ್ನಾಟಕ, ಕೇರಳದಿಂದ ಪಿಎಫ್‌ಐ ಚಟುವಟಿಕೆಗಳಿಗೆ ದುಬೈ ದುಡ್ಡು ಹಂಚಿಕೆ

# ಆರೋಪಿ ಬಂಧಿಸಿದ ಎನ್‌ಐಎ

**ಬೆಂಗಳೂರು:** ನಿಷೇಧಿತ ಪಿಎಫ್‌ಐ ಉಗ್ರ ಸಂಘಟನೆಯ ಕೃತ್ಯಗಳಿಗೆ ದುಬೈನಿಂದ ಬರುತ್ತಿದ್ದ ಹಣವನ್ನು ಕರ್ನಾಟಕ ಹಾಗೂ ಕೇರಳದಲ್ಲಿನ ತಂಡಗಳ ಮೂಲಕ ಹಂಚುತ್ತಿದ್ದ ಬಿಹಾರ ಮೂಲದ ವ್ಯಕ್ತಿಯನ್ನು ದೆಹಲಿಯಲ್ಲಿ ರಾಷ್ಟ್ರೀಯ ತನಿಖಾ ದಳ (ಎನ್‌ಐಎ) ಬಂಧಿಸಿದೆ. ಬಿಹಾರದ ಪೂರ್ವ ಚಂಪಾರಣ್ ಜಿಲ್ಲೆಯ ಮೊಹಮ್ಮದ್ ಸಜ್ಜದ್ ಆಲಂ ಎಂಬಾತ ಬಂಧಿತ ವ್ಯಕ್ತಿ. ಈತ ದುಬೈನಿಂದ ದೆಹಲಿಯ ಇಂದಿರಾಗಾಂಧಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿಯುತ್ತಿದ್ದಂತೆಯೇ ಬಂಧಿಸಲಾಗಿದೆ.

ಪಿಎಫ್‌ಐ ತರಬೇತಿ ಪಡೆದ ಕೇಡರ್ ಆಲಂ ವಿರುದ್ಧ ಬಂಧನ ವಿಶೇಷ ಎನ್‌ಐಎ ನ್ಯಾಯಾಲಯ ವಾರಂಟ್ ಹೊರಡಿಸಿತ್ತು. ಅವರ ವಿರುದ್ಧ ಲುಕ್‌ಔಟ್ ಸುತ್ತೋಲೆ (ಎಲ್‌ಒಸಿ) ಕೂಡ ಹೊರಡಿಸಲಾಗಿತ್ತು ಎಂದು ಎನ್‌ಐಎ ತಿಳಿಸಿದೆ.



ಪುಟ 2

## ಪಿಎಸ್ ಸಿ ಅಭ್ಯರ್ಥಿಗಳಿಗಾಗಿ ಉಪವಾಸ ಸತ್ಯಾಗ್ರಹ

# ಕಿಶೋರ್ ಬಂಧನ

**ಪಾಟ್ನಾ:** ಬಿಪಿಎಸ್‌ಸಿ ಅಭ್ಯರ್ಥಿಗಳ ಬೇಡಿಕೆಗಳ ಈಡೇರಿಕೆಗಾಗಿ ಆಮರಣಾಂತ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದ ಜನ್ ಸುರಾಜ್ ಮುಖ್ಯಸ್ಥ ಪ್ರಶಾಂತ್ ಕಿಶೋರ್ ರನ್ನು ಪೊಲೀಸರು ಇಂದು ಬಂಧಿಸಿದ್ದಾರೆ. ಪೊಲೀಸರು ಅವರನ್ನು ವಶಕ್ಕೆ ಪಡೆದುಕೊಂಡು ಪಾಟ್ನಾದ ಏಮ್ಸ್ ಆಸ್ಪತ್ರೆಗೆ ದಾಖಲಿಸಿದ್ದಾರೆ.



ಪ್ರಶಾಂತ್ ಕಿಶೋರ್ ಅವರನ್ನು ಪೊಲೀಸರು ಬಲವಂತವಾಗಿ ಕರೆದೊಯ್ದಿದ್ದಾರೆ ಎಂದು ಪಿಕೆ ತಂಡ ಆರೋಪಿಸಿದೆ, ನಂತರ ಪ್ರತಿಭಟನಾಕಾರರು ಏಮ್ಸ್ ಹೊರಗೆ ಗದ್ದಲವನ್ನು ಸೃಷ್ಟಿಸಿದರು.

ಜನ್ಸುರಾಜ್ ಮುಖ್ಯಸ್ಥ ಪ್ರಶಾಂತ್ ಕಿಶೋರ್ ಸತತ ನಾಲ್ಕು ದಿನಗಳ ಕಾಲ ಆಮರಣ ಉಪವಾಸ ನಡೆಸಿದ್ದರು.

ಪುಟ 2

## ಅಧಿಕಾರದುದ್ದಕ್ಕೂ ಬಿಜೆಪಿ ಮಾಡಿದ್ದು ಕೇವಲ ಕರ್ನಾಟಕದ ಲೂಟಿ

# ಕಾಂಗ್ರೆಸ್ ವಾಗ್ದಾಳಿ

**ಬೆಂಗಳೂರು:** ರೈಲಿಗೆ ತಲೆಕೊಟ್ಟು ಆತ್ಮಹತ್ಯೆ ಮಾಡಿಕೊಂಡ ಸಚಿನ್ ಪ್ರಕರಣ ರಾಜಕೀಯ ವಲಯದಲ್ಲಿ ಗದ್ದಲ ಎಬ್ಬಿಸಿದೆ. ಇನ್ನೊಂದೆಡೆ ಬಸ್ ಟಿಕೆಟ್ ದರ ಏರಿಕೆ ಕರ್ನಾಕದಾದ್ಯಂತ ಪ್ರಯಾಣಿಕರ ಆಕ್ರೋಶಕ್ಕೆ ಕಾರಣವಾಗಿದೆ. ಇದೆಲ್ಲದರ ಮಧ್ಯೆ ಬಿಜೆಪಿ ಮತ್ತು ಕಾಂಗ್ರೆಸ್ ನಡುವೆ ಟ್ವೀಟ್ ವಾರ್ ಶುರುವಾಗಿದೆ. ಅಧಿಕಾರದುದ್ದಕ್ಕೂ ಬಿಜೆಪಿ ಮಾಡಿದ್ದು, ಕೇವಲ ರಾಜ್ಯದ ಲೂಟಿ. ಬಿಜೆಪಿ ಕಾಲದಲ್ಲಿ ನಡೆದಿದೆ ಎನ್ನಲಾದ ಹಗರಣಗಳನ್ನು ಉಲ್ಲೇಖಿಸಿ ಕಾಂಗ್ರೆಸ್ ಕಿಡಿಕಾರಿದೆ.

ಈ ಬಗ್ಗೆ ಟ್ವೀಟ್ ಮಾಡಿರುವ ಕಾಂಗ್ರೆಸ್ , ಅಧಿಕಾರದುದ್ದಕ್ಕೂ ಬಿಜೆಪಿ ಮಾಡಿದ್ದು ಕೇವಲ ರಾಜ್ಯದ ಲೂಟಿ, ಈಗ ಜನಪರ ಕಾಂಗ್ರೆಸ್ ಸರ್ಕಾರದ ಬಗ್ಗೆ ಟೀಕಿಸಲು ವಿಷಯಗಳೇ ಇಲ್ಲದೆ, ತಮ್ಮ ಅವಧಿಯ



ಅಕ್ರಮ, ಅನಾಚಾರಗಳು ಬೆತ್ತಲಾಗುತ್ತವೆ ಎಂಬ ಆತಂಕದಲ್ಲಿ ವೈಯಕ್ತಿಕವಾಗಿ ಕಾಂಗ್ರೆಸ್ ನಾಯಕರ, ಸಚಿವರ ತೇಜೋವಧೆಗೆ ಇಳಿದು ಕ್ಷುಲ್ಲಕ ರಾಜಕಾರಣ ಮಾಡುತ್ತಿದೆ, ಗ್ಯಾರಂಟಿ ಯೋಜನೆಗಳ ವಿರುದ್ಧ ವಿಷ ಕಾರುತ್ತಿದೆ. ಭ್ರಷ್ಟಾಚಾರದ ಪಿತಾಮಹರಾದ ಬಿಜೆಪಿ ನಾಯಕರು ಅವರ ಘನ ಕಾರ್ಯಗಳ ಬಗ್ಗೆ ಕೇಳಿದರೆ ಮಾತ್ರ ಬೆನ್ನು ತಿರುಗಿಸಿ ಓಡುತ್ತಾರೆ ಎಂದು ವಾಗ್ದಾಳಿ ಮಾಡಲಾಗಿದೆ.

ಪುಟ 2

## ಕೆನಡಾ ಪ್ರಧಾನಿ ಜಸ್ಟಿನ್ ಟ್ರುಡೊ

# ಶೀಘ್ರ ರಾಜೀನಾಮೆ ಸಾಧ್ಯತೆ

**ಕೆನಡಾ:** ಕೆನಡಾದ ಪ್ರಧಾನಿ ಜಸ್ಟಿನ್ ಟ್ರುಡೊ ಅವರು ತಮ್ಮ ಲಿಬರಲ್ ಪಕ್ಷದೊಳಗೆ ಭಿನ್ನಾಭಿಪ್ರಾಯಗಳನ್ನು ಎದುರಿಸುತ್ತಿರುವ ಕಾರಣ ಈ ವಾರ ತಮ್ಮ ರಾಜೀನಾಮೆಯನ್ನು ಘೋಷಿಸುವ ಸಾಧ್ಯತೆಯಿದೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ಬುಧವಾರದಂದು ರಾಷ್ಟ್ರೀಯ ಲಿಬರಲ್ ಪಕ್ಷದ ಕಾಕಸ್‌ಗೆ ಮುಂಚಿತವಾಗಿ ಈ ಪ್ರಕಟಣೆ ಬರಬಹುದು ಎಂದು ಅಂದಾಜಿಸಲಾಗಿದೆ.

ಲಿಬರಲ್ ಪಕ್ಷವು ಹೊಸ ನಾಯಕನನ್ನು ಹುಡುಕುವವರೆಗೆ ಟ್ರುಡೊ ಹಂಗಾಮಿ ಪ್ರಧಾನಿಯಾಗಿ ಉಳಿಯುತ್ತಾರೆಯೇ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ವಾಸ್ತವವಾಗಿ, ಟ್ರೂಡೊ 2015 ರಲ್ಲಿ ಪ್ರಚಂಡ ವಿಜಯವನ್ನು



ಗೆಲ್ಲುವ ಮೂಲಕ ಅಧಿಕಾರಕ್ಕೆ ಬಂದರು. ಅದರ ನಂತರ, 2019 ಮತ್ತು 2021 ರಲ್ಲೂ ಅವರು ತಮ್ಮ ಪಕ್ಷದ ಲಿಬರಲ್ಸ್ ಅನ್ನು ವಿಜಯದತ್ತ ಮುನ್ನಡೆಸಿದರು.

ಈಗ ಟ್ರುಡೊ ನೇತೃತ್ವದಲ್ಲಿ ಕೆನಡಾದಲ್ಲಿ ತಮ್ಮ ಸೋಲು ಖಚಿತ ಎಂಬ ಭಾವನೆ ಲಿಬರಲ್ ಪಕ್ಷಕ್ಕೆ ಶುರುವಾಗಿದೆ. ಆದ್ದರಿಂದ, ಈಗ ಟ್ರೂಡೊ ಪ್ರಧಾನಿ ಹುದ್ದೆಯನ್ನು ಕಳೆದುಕೊಳ್ಳುವ ಅಪಾಯ ಎದುರಾಗಿದೆ.

ಸಮೀಕ್ಷೆಗಳ ಪ್ರಕಾರ, ಪ್ರಸ್ತುತ ಅವರು ತಮ್ಮ ಪ್ರಮುಖ ಪ್ರತಿಸ್ಪರ್ಧಿ ಕನ್ಸರ್ವೇಟಿವ್ ಪಕ್ಷದ ಪಿಯರೆ ಪೊಯಿಲಿವ್ರೆಗಿಂತ 20 ಪಾಯಿಂಟ್ ಗಳಿಂದ ಹಿಂದುಳಿದಿದ್ದಾರೆ. ರಾಷ್ಟ್ರೀಯ ಕಾಕಸ್ ಸಭೆಯಲ್ಲಿ ಟ್ರುಡೊ ಬಂಡಾಯ ಎದುರಿಸಬೇಕಾಗಬಹುದು ಎಂದು ಪಕ್ಷಕ್ಕೆ ಸಂಬಂಧಿಸಿದ ಮೂಲಗಳು ತಿಳಿಸಿವೆ.

ತಕ್ಷಣವೇ ಹುದ್ದೆಗೆ ರಾಜೀನಾಮೆ ನೀಡುತ್ತಾರೆಯೇ ಅಥವಾ ಹೊಸ ನಾಯಕರ ಆಯ್ಕೆಯವರೆಗೆ ಈ ಹುದ್ದೆಯಲ್ಲಿ ಉಳಿಯುತ್ತಾರೆಯೇ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಡೊನಾಲ್ಡ್ ಟ್ರಂಪ್ ಅಮೆರಿಕದ ಅಧ್ಯಕ್ಷರಾಗಿ ಆಯ್ಕೆಯಾದ ನಂತರ, ಅವರ ಮೇಲಿನ ಒತ್ತಡವು

ಪುಟ 2

## ಮೈಸೂರು ಕಡೆಗೆ ಪರ್ಯಾಯ

# ರಸ್ತೆ ನಿರ್ಮಾಣಕ್ಕೆ ಯೋಜನೆ



**ಬೆಂಗಳೂರು:** ಬೆಂಗಳೂರಿನ ಜೀವನದಿಯಾಗಿದ್ದ ವೃಷಭಾವತಿ ನದಿಗೆ ಮರುಜೀವ ಕೊಡಲು ಬಿಬಿಎಂಪಿ ಸಜ್ಜಾಗಿದೆ. 28 ಕಿಲೋಮೀಟರ್ ಉದ್ದದ ವೃಷಭಾವತಿ ನದಿ ಮಾರ್ಗದ ರಾಜಕಾಲುವೆಯಲ್ಲಿ ತ್ಯಾಜ್ಯ ಸಂಗ್ರಹ ತಡೆಯುವುದರ ಜೊತೆಗೆ ಚಿಂತನೆ ನಡೆದಿದೆ.

» **ವೃಷಭಾವತಿ ರಾಜಕಾಲುವೆ ಮೇಲೆ ತಲೆಎತ್ತಲಿದೆ ರಸ್ತೆ**

ವೃಷಭಾವತಿ ರಾಜಕಾಲುವೆ ಮೇಲೆ ಮೈಸೂರು ಕಡೆಗೆ ತೆರಳಲು ರಸ್ತೆ ನಿರ್ಮಾಣ ಮಾಡಲು ಸಿದ್ಧತೆ ನಡೆದಿದೆ. ಸದ್ಯ ಪಾಲಿಕೆಯ ಈ ಯೋಜನೆಗೆ ಸಕಲ ಸಿದ್ಧತೆಗಳು ನಡೆಸಿದ್ದು, ಕೆಂಗೇರಿಯಿಂದ ಮೈಸೂರು ಕಡೆಗೆ ರಸ್ತೆ ನಿರ್ಮಿಸಲು

ಪುಟ 2

# ಆಂಧ್ರ, ತಮಿಳುನಾಡಿನಲ್ಲಿ ನಮಗಿಂತಲೂ ಹೆಚ್ಚಿನ ದರ ಇದೆ

**ಹಾವೇರಿ:** ಪಕ್ಕದ ಆಂಧ್ರ, ತಮಿಳುನಾಡಿನಲ್ಲೂ ನಮಗಿಂತ ದರ ಹೆಚ್ಚಿದೆ. ನಮ್ಮದೇ ಕಡಿಮೆ ಇದೆ ಎಂದು ಬಸ್ ಟಿಕೆಟ್ ದರ ಏರಿಕೆಯನ್ನು ಸಚಿವ ಶಿವಾನಂದ ಪಾಟೀಲ್ ಸಮರ್ಥಿಸಿಕೊಂಡಿದ್ದಾರೆ. ಈ ಕುರಿತು ಹಾವೇರಿಯಲ್ಲಿ ಮಾತನಾಡಿದ ಅವರು, ಬಿಜೆಪಿ ಅವರಿಗೆ ಹೋರಾಟ ಮಾಡೋದು ಬಿಟ್ಟರೆ ಏನು ಕೆಲಸ ಇದೆ ಹೇಳಿ? ಒಂದು ಸಲವಾದರೂ ಅಭಿವೃದ್ಧಿ ಬಗ್ಗೆ ಮಾತಾನಾಡುತ್ತಾರಾ? ಶಕ್ತಿ ಯೋಜನೆಯಲ್ಲಿ ಜನರನ್ನು ಓಡಾಡಿಸುತ್ತಿದ್ದೇವೆ ಅಂದರೆ ಅಟ್ ಲೀಸ್ಟ್ ನೋ ಪ್ರಾಫಿಟ್ ನೋ ಲಾಸ್ ನಲ್ಲಿ ಆದರೂ ಉಳಿಸಬೇಕು ಎಂಬ ಉದ್ದೇಶ ಅಷ್ಟೇ. ಹೆಣ್ಣು ಮಕ್ಕಳಿಗೆ, ಬಡವರಿಗೆ ಏನು ಕೊಡಬೇಕೋ ಅದನ್ನು ಆದಷ್ಟು ಕೊಟ್ಟಿದ್ದೇವೆ ಎಂದರು. ದುಡಿಯುವ ಗಂಡಮಕ್ಕಳಿಗೆ 15% ಭಾರ ಆಗಬಹುದು. ನಾನು ಇಲ್ಲ ಅಂತ ಹೇಳಲ್ಲ. ಪ್ರತಿ ನಿತ್ಯ ಓಡಾಡುತ್ತಿರೋದು ಹೆಣ್ಣ ಮಕ್ಕಳೇ ಇದ್ದಾರೆ. ಗಂಡುಮಕ್ಕಳು ಓಡಾಡಲ್ಲ, ನೀವು ಉಲ್ಟಾ ಹೇಳುತ್ತಿದ್ದೀರಿ ಎಂದರು. ಕಾಂಗ್ರೆಸ್‌ನಲ್ಲಿ ಪುನಃ ಅಧಿಕಾರ ಹಂಚಿಕೆ ವಿಚಾರದ ಬಗ್ಗೆ ಪ್ರತಿಕ್ರಿಯಿಸಿ, ನಮ್ಮಲ್ಲಿ ಯಾವುದೇ ಭಿನ್ನಾಭಿಪ್ರಾಯ ಇಲ್ಲ. ಯಾರು ಸಿಎಂ ಇರಬೇಕು, ಡಿಸಿಎಂ ಇರಬೇಕು ಎಂಬುದನ್ನು ವರಿಷ್ಟರು ತೀರ್ಮಾನ ಮಾಡಬೇಕು. ಈ ಬಗ್ಗೆ ಸಿಎಲ್‌ಪಿನಲ್ಲಿ ನಿರ್ಣಯ ಆಗುತ್ತದೆ ಎಂದು ತಿಳಿಸಿದರು.



# ನಡುರಸ್ತೆಯಲ್ಲೇ ಎಎಸ್‌ಐ ಮೇಲೆ ಹಲ್ಲೆ : ಆರೋಪಿ ಅರೆಸ್ಟ್

**ಮಂಡ್ಯ:** ವಿಚಾರಣೆಗೆ ಕರೆದ ಎಎಸ್‌ಐ ಮೇಲೆ ನಡುರಸ್ತೆಯಲ್ಲೇ ಹಲ್ಲೆಗೆ ಯತ್ನಿಸಿ ರಂಪಾಟ ನಡೆಸಿದ ಆರೋಪಿಯನ್ನು ಪೊಲೀಸರು ಬಂಧಿಸಿದ ಘಟನೆ ಮಂಡ್ಯ ಜಿಲ್ಲೆಯ ನಾಗಮಂಗಲದಲ್ಲಿ ನಡೆದಿದೆ.

ನಾಗಮಂಗಲ ಗ್ರಾಮಾಂತರ ಎಎಸ್‌ಐ ರಾಜು ಮೇಲೆ ಮಜ್ಜನಕೊಪ್ಪಲು ಪೂಜಾರಿ ಕೃಷ್ಣ ಹಲ್ಲೆಗೆ ಯತ್ನಿಸಿ ದರ್ಪ ತೋರಿದ್ದಾನೆ. ಆರೋಪಿ ಕೃಷ್ಣನ ವಿರುದ್ಧ ಆತನ ತಾಯಿ ಠಾಣೆಗೆ ದೂರು ನೀಡಿದ್ದರು. ಹಣಕ್ಕೆ ಬೇಡಿಕೆ ಇಟ್ಟು ನಿತ್ಯ ಕಿರುಕುಳ ನೀಡುತ್ತಿದ್ದಾನೆ ಎಂದು ದೂರು ಸಲ್ಲಿಸಲಾಗಿತ್ತು. ದೂರಿನ ಹಿನ್ನೆಲೆ ಕೃಷ್ಣನನ್ನು ಠಾಣೆಗೆ ಕರೆತರಲು ಎಎಸ್‌ಐ ರಾಜು ತೆರಳಿದ್ದರು. ನಾಗಮಂಗಲದ ಕೋರ್ಟ್ ಬಳಿ ನಿಂತಿದ್ದ ಕೃಷ್ಣನನ್ನು ಎಎಸ್‌ಐ ರಾಜು ಠಾಣೆಗೆ ಕರೆದಿದ್ದರು. ಠಾಣೆಗೆ ಬರಲು ಒಪ್ಪದಿದ್ದಾಗ ಕೃಷ್ಣನ ಕಾಲರ್ ಹಿಡಿದು ಬಲವಂತವಾಗಿ ಆಟೋಗೆ ಹತ್ತಿಸಲು ಎಎಸ್‌ಐ ಯತ್ನಿಸಿದ್ದಾರೆ. ಈ ವೇಳೆ ಎಎಸ್‌ಐ ರಾಜುವನ್ನು ಕೃಷ್ಣ ತಳ್ಳಿದ್ದಾನೆ. ತಳ್ಳಾಡಿದಾಗ ರಾಜು ಕೆಳಗೆ ಬಿದ್ದಿದ್ದಾರೆ. ಬಳಿಕ ಕೃಷ್ಣನನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದಾರೆ. ಈ ಎಲ್ಲಾ ದೃಶ್ಯವನ್ನು ಸ್ಥಳೀಯರು ಮೊಬೈಲ್‌ನಲ್ಲಿ ಸೆರೆ ಹಿಡಿದಿದ್ದಾರೆ.



# ಪ್ರಯಾಣ ದರ ಏರಿಕೆ; ಟಿಕೆಟ್ ತೆಗೆದುಕೊಳ್ಳದೇ ಬಸ್‌ನಲ್ಲಿ ಪ್ರಯಾಣಿಸಿ ವಾಟಾಳ್ ಪ್ರತಿಭಟನೆ

**ರಾಮನಗರ:** ಸಾರಿಗೆ ಬಸ್ ಪ್ರಯಾಣ ದರ ಹೆಚ್ಚಳ ಹಿನ್ನೆಲೆ ದರ ಹೆಚ್ಚಳ ಖಂಡಿಸಿ ರಾಮನಗರದಲ್ಲಿ ಕನ್ನಡ ಪರ ಹೋರಾಟಗಾರ ವಾಟಾಳ್ ನಾಗರಾಜ್ ಪ್ರತಿಭಟನೆ ನಡೆಸಿದ್ದಾರೆ. ರಾಮನಗರ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಬಸ್ ಏರಿ ಕುಳಿತು ಪ್ರತಿಭಟನೆ ನಡೆಸಿ ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ಪುರಷರಿಗೂ ಬಸ್ ಪ್ರಯಾಣ ಉಚಿತ ಮಾಡುವಂತೆ ಸರ್ಕಾರಕ್ಕೆ ಆಗ್ರಹಿಸಿದ್ದಾರೆ.

ಸರ್ಕಾರ ರಾಜ್ಯ ಜನರ ಬಳಿ ಹಗಲು ದರೋಡೆ ಮಾಡುತ್ತಿದೆ. ಪುರುಷರ ಬಳಿ ದುಪ್ಪಟ್ಟು ಹಣ ವಸೂಲಿ ಮಾಡಿ ಮಹಿಳೆಯರಿಗೆ ಉಚಿತ ಕೊಡುತ್ತಿದೆ. ಪುರುಷರಿಗೆ ಬಸ್ ಪ್ರಯಾಣ ದರ ಹೆಚ್ಚಳ ಮಾಡಿರುವುದು ಸರಿಯಲ್ಲ. ಕೂಡಲೇ ಸರ್ಕಾರ ದರ ಏರಿಕೆಯನ್ನು ಕೈಬಿಡಬೇಕು. ಇಲ್ಲ ಪುರುಷರಿಗೂ ಉಚಿತ ಬಸ್ ಪಯಣ ಎಂದು ಬಜೆಟ್‌ನಲ್ಲಿ ಘೋಷಣೆ ಮಾಡುವಂತೆ ವಾಟಾಳ್ ನಾಗರಾಜ್ ಒತ್ತಾಯ ಮಾಡಿದರು. ಅಲ್ಲದೇ ಟಿಕೆಟ್ ಖರೀದಿಸದೇ ಬಸ್‌ನಲ್ಲಿ ಪ್ರಯಾಣ ಮಾಡಿ ಸರ್ಕಾರದ ವಿರುದ್ಧ ಕಿಡಿಕಾರಿದರು.



# ಕರ್ನಾಟಕದ ಗಂಡಸರು ಮುಂದಿನ ಚುನಾವಣೆಯಲ್ಲಿ 'ಕೈ'ಗೆ ಮತ ಹಾಕಬಾರದು



**ವಿಜಯಪುರ:** ಕರ್ನಾಟಕ ಗಂಡಸರು ಮುಂದಿನ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಮತ ಹಾಕಬಾರದು ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಕಿಡಿಕಾರಿದ್ದಾರೆ.

ಜಿಲ್ಲೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಸ್ ಟಿಕೆಟ್ ದರ 15% ಏರಿಕೆ ವಿಚಾರವಾಗಿ, ಹೆಣ್ಣುಮಕ್ಕಳಿಗೆ ಉಚಿತ ಕೊಟ್ಟು ಗಂಡಸರಿಗೆ ಹೆಚ್ಚಿನ ದುಡ್ಡು ಹಾಕಿದ್ದಾರೆ. ಗಂಡಸರು ಏನು ಪಾಪ ಮಾಡಿದ್ದಾರೆ? ಇದು ಹೆಣ್ಣು ಮಕ್ಕಳಿಗೂ ಅನ್ಯಾಯವಾಗುತ್ತದೆ. ಮಕ್ಕಳು ಮನೆಯ ಯಜಮಾನರಿಗೂ ಅನ್ಯಾಯವಾಗುತ್ತದೆ. ಇವರ ರಕ್ಷಣೆ ಮಾಡಬೇಕೆಂದರೆ ಹೆಣ್ಣು ಮಕ್ಕಳೂ ಸಹ ಕಾಂಗ್ರೆಸ್‌ಗೆ ಮತ ಹಾಕಬಾರದೆಂದು ಎಂದು ವಿರೋಧ ವ್ಯಕ್ತಪಡಿಸಿದ್ದಾರೆ. ಕಲಬುರಗಿ ಪ್ರತಿಭಟನೆಯಲ್ಲಿ ವಿಜಯೇಂದ್ರ ಭಾಗಿ ಆಗದ ವಿಚಾರವಾಗಿ ಮಾತನಾಡಿ, ವಿಜಯೇಂದ್ರ ಅವರ ನೇತೃತ್ವದಲ್ಲಿ ಎಲ್ಲೆಡೆ ಪ್ರತಿಭಟನೆ ಎಂದು ಹೇಳಿಕೊಂಡಿದ್ದರು. ಪಾಪಾ ವಿಜಯೇಂದ್ರ ಅವರಿಗೆ ಏನು ಕೆಲಸ ಇತ್ತು ಗೊತ್ತಿಲ್ಲ. ನಿನ್ನೆ ಮೂರು ಕಡೆ ಹೋರಾಟ ಆಗಿದೆ. ಒಂದು ವಕ್ಫ್ ವಿರುದ್ಧ, ಪ್ರಿಯಾಂಕ್ ಖರ್ಗೆ ವಿರುದ್ಧ ಹೋರಾಟ, ಇನ್ನೊಂದು ಬಾಣಂತಿಯರ ಸಾವು ಹೋರಾಟ. ಆ ಪೈಕಿ ವಿಜಯೇಂದ್ರ ಅವರು ಬಾಣಂತಿಯರ ಸಾವಿನ ವಿರುದ್ಧದ ಹೋರಾಟದಲ್ಲಿ ಭಾಗಿಯಾಗಿದ್ದಾರೆ. ಇದರಿಂದ ನಮ್ಮಲ್ಲಿ ಸಾಮೂಹಿಕ ನಾಯಕತ್ವ ಹೇಗಿದೆ ಎನ್ನುವುದು ಗೊತ್ತಾಗುತ್ತದೆ. ಅವರು ಅಲ್ಲಿ ಮಾಡಿದ್ದಾರೆ, ನಾವು ಇಲ್ಲಿ ಮಾಡಿದ್ದೇವೆ ಅಷ್ಟೇ ಎಂದು ಕಾಲೆಳದರು.

ಆರ್.ಅಶೋಕ್ ಹಾಗೂ ವಿಜಯೇಂದ್ರ ಮಧ್ಯೆ ಹೊಂದಾಣಿಕೆ ಕೊರತೆ ವಿಚಾರವಾಗಿ, ಹಾಗೇನಿಲ್ಲ, ಆರ್.ಅಶೋಕ್ ಎಲ್ಲರನ್ನೂ ಒಟ್ಟಿಗೆ ತೆಗೆದುಕೊಂಡು ಹೋಗ್ತಾರೆ. ಬೆಳಗಾವಿ ಅಧಿವೇಶನದ ವೇಳೆ ನಮ್ಮ ಹಿರಿಯರ ಸಲಹೆ ಪಡೆದು ಚರ್ಚೆ ಮಾಡಿದ್ದಾರೆ. ಎಲ್ಲರಗೂ ಅವಕಾಶ ಕೊಟ್ಟಿದ್ದಾರೆ. ಅವರ ಬಗ್ಗೆ ನಮ್ಮದೇನು ಆರೋಪಗಳಿಲ್ಲ.

ಬಿಜೆಪಿ ರಾಜ್ಯಾಧ್ಯಕ್ಷ ಚುನಾವಣೆ ವಿಚಾರವಾಗಿ, ಚುನಾವಣೆ ಪ್ರಕ್ರಿಯೆ ಇದ್ದೇ ಇರುತ್ತದೆ. ಪ್ರಹ್ಲಾದ್ ಜೋಶಿ ಅವರು ಹೇಳಿದ್ದು ಸರಿಯಿದೆ. ಅವರು ಹೇಳಿದ್ರಲ್ಲಿ ತಪ್ಪೇನಿಲ್ಲ. ಇನ್ನು ಮುಂದೆ ಬರೋದು ರೆಗ್ಯುಲರ್ ಚುನಾಯಿತ ಅಧ್ಯಕ್ಷರು. ಅದು ಯಾರು ಆಗುತ್ತಾರೆ? ಯಾರು ಆಗಬೇಕು? ಎಂದು ರಾಜ್ಯ ಘಟಕ ಕೇಂದ್ರ ಹೈಕಮಾಂಡ್‌ಗೆ ಅಧಿಕಾರಿ ಕೊಟ್ಟಿದೆ. ಕೇಂದ್ರದ ಹೈಕಮಾಂಡ್ ಯಾರಿಗೆ ಅಧ್ಯಕ್ಷರನ್ನ ಮಾಡಬೇಕು ಎಂದು ಇಚ್ಛಿಸುತ್ತದೆ ಅವರನ್ನು ಮಾಡ್ತಾರೆ. ಚುನಾವಣೆ ಆಗೋದಿಲ್ಲ,ಸಹಮತ ಮಾಡಿಕೊಂಡು ರಾಜ್ಯಾಧ್ಯಕ್ಷ ಆಯ್ಕೆ ಮಾಡುತ್ತಾರೆ ಎಂದರು.

# ಫೆ.4ರಂದು ಬಸವನ ಬಾಗೇವಾಡಿಯಲ್ಲಿ ಕ್ರಾಂತಿವೀರ ಬ್ರಿಗೇಡ್ ಉದ್ಘಾಟನೆ: ಈಶ್ವರಪ್ಪ

**ವಿಜಯಪುರ:** ಫೆಬ್ರವರಿ 4 ರಂದು ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿಯಲ್ಲಿ ಕ್ರಾಂತಿವೀರ ಬ್ರಿಗೇಡ್ ಉದ್ಘಾಟನೆ ನಡೆಯಲಿದೆ. 1,008 ಸಾದು ಸಂತರ ಪಾದ ಪೂಜೆ ಮೂಲಕ ಬ್ರಿಗೇಡ್ ಉದ್ಘಾಟನೆ ನಡೆಯಲಿದೆ ಎಂದು ಮಾಜಿ ಡಿಸಿಎಂ ಕೆಎಸ್ ಈಶ್ವರಪ್ಪ ಹೇಳಿದ್ದಾರೆ.

ಈ ಕುರಿತು ವಿಜಯಪುರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, 1 ಲಕ್ಷ ಜನ ಸೇರಿಸಿ ಕಾರ್ಯಕ್ರಮ ಮಾಡುತ್ತೇವೆ. ಇದಕ್ಕಾಗಿ ಜನವರಿ 12ರಿಂದ ರಾಜ್ಯಾದ್ಯಂತ ಪ್ರವಾಸ ಮಾಡುತ್ತೇವೆ. ಪ್ರವಾಸ ಮಾಡಿ ಬ್ರಿಗೇಡ್ ಬಗ್ಗೆ ಜಾಗೃತಿ ಮೂಡಿಸುತ್ತೇವೆ. ಬ್ರಿಗೇಡ್ ಅನ್ನು ಕನ್ನೇರಿ ಮಠದ ಶ್ರೀಗಳು ಹಾಗೂ ಕಾಗಿನೆಲೆ ಮಹಾ ಸಂಸ್ಥಾನದ ಕನಕ ಗುರುಪೀಠದ ತಿಂಥಣಿ ಶಾಖಾ ಮಠದ ಸಿದ್ದರಾಮಾನಂದಪುರಿ ಸ್ವಾಮೀಜಿ ಉದ್ಘಾಟನೆ ಮಾಡುತ್ತಾರೆ. ರಾಜ್ಯದ ವಿವಿಧ ಭಾಗಗಳಿಂದ ಒಂದು ಲಕ್ಷ ಜನ ಸೇರುವ ಸಾಧ್ಯತೆ ಇದೆ ಎಂದರು. ಹಿಂದೂ ಸಮಾಜದ ಪರವಾಗಿ ಬ್ರಿಗೇಡ್ ಹೋರಾಟ ಮಾಡಲಿದೆ. ಹಿಂದುಳಿದ ವರ್ಗದ ಸ್ವಾಮೀಜಿಗಳ ಪರ ಬ್ರಿಗೇಡ್ ಕೆಲಸ ಮಾಡಲಿದೆ. ನನ್ನ ಜೀವನದಲ್ಲಿ ನಾನು ರಾಜಕಾರಣದ ಜೊತೆ ಜೊತೆಗೆ ಸಾಧು ಸಂತರ ಸೇವೆ ಮಾಡಿದ್ದೇನೆ. ಬ್ರಿಗೇಡ್ ಸ್ಥಾಪನೆ ಮಾಡೋದಕ್ಕೆ ಮುಖ್ಯ ಉದ್ದೇಶ ಹಿಂದುಳಿದ ಮಠಗಳ ಅಭಿವೃದ್ಧಿ. ಹಿಂದೂಗಳಿಗೆ ಆಗುತ್ತಿರುವ ಅನ್ಯಾಯದ ವಿರುದ್ಧ ನಮ್ಮ ಹೋರಾಟ ಇರಲಿದೆ ಎಂದು ಹೇಳಿದರು.



ರಾಜಕಾರಣದ ಜೊತೆಗೆ ಧಾರ್ಮಿಕ ಕಾರ್ಯದಲ್ಲೂ ನಾನು ಭಾಗಿಯಾಗುತ್ತಿದ್ದೇನೆ. ಈ ಹಿಂದೆ ಮಠ, ಮಂದಿರಗಳಿಗೆ ಹಣ ನೀಡುವಂತೆ ಮಾಡಿದ್ದು ನಾನೇ. ಹೀಗಾಗಿ ನಾನು ಧಾರ್ಮಿಕ ಕೆಲಸ ಮಾಡುತ್ತಿದ್ದೇನೆ ಎಂದರು. ಪ್ರಿಯಾಂಕ್ ಖರ್ಗೆ ವಿರುದ್ಧ ಬಿಜೆಪಿ ಹೋರಾಟ ವಿಚಾರಕ್ಕೆ ಪ್ರತಿಕ್ರಿಯಿಸಿ ನನ್ನ ವಿರುದ್ಧ ಆರೋಪ ಬಂದಾಗ ನಾನು ರಾಜೀನಾಮೆ ನೀಡಿದ್ದೇನೆ.ನಾನು ಆರ್‌ಎಸ್‌ಎಸ್‌ನಿಂದ ಬೆಳೆದು ಬಂದವನು. ಆರೋಪ ಬಂದ ತಕ್ಷಣವೇ ರಾಜೀನಾಮೆ ನೀಡಿದ್ದೇನೆ. ಕೆಲವರು ನನ್ನ ವಿರುದ್ಧ ರಾಜಕೀಯ ಮಾಡಿದರು. ಅವರು ಈಗ ಅನುಭವಿಸುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ನನ್ನ ವಿರುದ್ಧ ಕೆಲವರು ಕೆಲಸ ಮಾಡಿದ್ದರು, ಅವರಿಗೆ ದೇವರೇ ಉತ್ತರ ನೀಡುತ್ತಿದ್ದಾನೆ. ಮುಂದಿನ ದಿನಗಳಲ್ಲಿ ಅವರಿಗೆ ದೇವರು ಒಳ್ಳೆದು ಮಾಡುತ್ತಾರೆ. ಇನ್ನು ನನ್ನ ವಿರುದ್ಧ ಕೆಲಸ ಮಾಡಿದವರು ಯಾರು, ಯಾವ ಪಕ್ಷದವರು ಅನ್ನೋದನ್ನ ಸಮಯ ಬಂದಾಗ ಗೊತ್ತಾಗುತ್ತೆ ಎಂದು ಕಿಡಿಕಾರಿದರು.

# ಪ್ರಿಯಕರನ ಜೊತೆಯಲ್ಲಿದ್ದ 8 ತಿಂಗಳ ಗರ್ಭಿಣಿ ಅನುಮಾನಾಸ್ಪದ ಸಾವು

**ಚಿಕ್ಕಬಳ್ಳಾಪುರ:** ಪ್ರಿಯಕರನ ಜೊತೆಯಲ್ಲಿದ್ದ 8 ತಿಂಗಳ ಗರ್ಭಿಣಿ ಅನುಮಾನಾಸ್ಪದವಾಗಿ ಸಾವನ್ನಪ್ಪಿರುವ ಘಟನೆ ಚಿಕ್ಕಬಳ್ಳಾಪುರ ತಾಲೂಕಿನ ಗುಂತಪನಹಳ್ಳಿ ಗ್ರಾಮದ ಬಳಿ ನಡೆದಿದೆ.

ಚಿಕ್ಕಬಳ್ಳಾಪುರದ ಅಂಬೇಡ್ಕರ್ ನಗರದ ನಿವಾಸಿ ಅನುಷಾ (28) ಮೃತ ಗರ್ಭಿಣಿ ಮಹಿಳೆ. ಹೊಸಕೋಟೆ ಮೂಲದ ವ್ಯಕ್ತಿಯೊಂದಿಗೆ 08 ವರ್ಷಗಳ ಹಿಂದೆ ಮದುವೆ ಮಾಡಿಕೊಡಲಾಗಿತ್ತು. ಒಂದು ಹೆಣ್ಣು ಮಗು ಸಹ ಇತ್ತು. ಆದರೆ ಗಂಡನಿಗೆ ಪ್ಯಾರಾಲಿಸಿಸ್ ಆದ ನಂತರ ಗಂಡನನ್ನು ತೊರದು ತವರು ಮನೆಗೆ ಬಂದು ವಾಸವಾಗಿದ್ದಳು. ಆಗ ಕೂಲಿ ಮಾಡುತ್ತಿದ್ದ ಅನುಷಾಳಿಗೆ ಗುಂತಪನಹಳ್ಳಿ ಗ್ರಾಮದ ಪವನ್ ಪರಿಚಯವಾಗಿ ಇಬ್ಬರ ನಡುವೆ ದೈಹಿಕ ಸಂಪರ್ಕ ಬೆಳೆದು ಗರ್ಭಿಣಿ ಸಹ ಆಗಿದ್ದಾಳೆ. ಇದರಿಂದ ತನ್ನನ್ನ ಮದುವೆಯಾಗುವಂತೆ ಅನುಷಾ ಒತ್ತಾಯಿಸಿ ಪವನ್ ಮನೆಯವರಿಗೆ ವಿಷಯ ತಿಳಿಸಿದ್ದಾಳೆ. ಬೇರೆ ಬೇರೆ ಜಾತಿ ಎರಡನೇ ಮದುವೆ ಅಂತ ಪವನ್ ಮನೆಯವರು ಇಬ್ಬರಿಗೂ ಬೈದು ಮನೆಗೆ ಕರೆದುಕೊಂಡಿಲ್ಲ. 15 ದಿನಗಳ ಹಿಂದೆ ಸಹ ಪವನ್ ಊಟದ ಜೊತೆ ಇಲಿ ಪಾಷಾಣ ತಿನ್ನಿಸಿ ಕೊಲೆ ಮಾಡಲು ಯತ್ನಿಸಿದ್ದ ಎಂದು ಆಕೆ ಆರೋಪಿಸಿದ್ದಳು. ಪೊಲೀಸ್ ಠಾಣೆಗೆ ಪವನ್ ವಿರುದ್ಧ ದೂರು ನೀಡಿದ್ದಳು. ತದನಂತರ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿ ಬಂದು ಇಬ್ಬರು ಸಹ ಜೊತೆಯಾಗಿದ್ದಾರೆ. ಕಳೆದ ರಾತ್ರಿ ಗುಂತಪನಹಳ್ಳಿ ಗ್ರಾಮದ ಬಳಿ ಹೊಂಗೆ ಮರದಡಿ ಮದ್ಯಪಾನ ಮಾಡಿ ಮಲಗಿದ್ದರಂತೆ. ಬೆಳಗ್ಗೆ ಎದ್ದು ನೋಡಿದಾಗ ಆಕೆ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಪ್ರಿಯಕರ ಪವನ್ ಪೊಲೀಸರಿಗೆ ಮಾಹಿತಿ ನೀಡಿದ್ದಾನೆ. ಇನ್ನೂ ಪೊಲೀಸರು ಪ್ರಿಯಕರನನ್ನು ವಶಕ್ಕೆ ಪಡೆದು ವಿಚಾರಣೆ ಮುಂದುವರೆಸಿದ್ದಾರೆ. ಚಿಕ್ಕಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

# ಇದು ಮೋಸದ ಸರ್ಕಾರ: ಬಸ್ ಟಿಕೆಟ್ ದರ ಹೆಚ್ಚಳಕ್ಕೆ ಸಾರ್ವಜನಿಕರು ಆಕ್ರೋಶ

**ಬೆಂಗಳೂರು:** ಸರ್ಕಾರಿ ಬಸ್ ಟಿಕೆಟ್ ದರ ಹೆಚ್ಚಳಕ್ಕೆ ಸಾರ್ವಜನಿಕರು ಆಕ್ರೋಶ ಹೊರಹಾಕಿದ್ದಾರೆ. ಸರ್ಕಾರ ಹೀಗೆ ಎಲ್ಲದಕ್ಕೂ ದರ ಹೆಚ್ಚಿಸಿದರೆ, ಬದುಕುವುದು ಹೇಗೆ ಎಂದು ಪ್ರಶ್ನಿಸಿದ್ದಾರೆ. ಮಹಿಳೆಯರು ಕೂಡ ಪುರುಷರ ಪರ ನಿಂತು ಸರ್ಕಾರಕ್ಕೆ ಚಾಟಿ ಬೀಸಿದ್ದಾರೆ. ನಮಗೆ ಫ್ರೀ ಟಿಕೆಟ್ ಬೇಡವೇ ಬೇಡ ಎಂಬ ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆ.







ಮಹಿಳೆಯರಿಗೆ ಫ್ರೀ ಬಸ್ ಟಿಕೆಟ್ ಕೊಡುವ ಅವಶ್ಯಕತೆಯೇ ಇರಲಿಲ್ಲ. ನಿತ್ಯ ಪ್ರಯಾಣಕ್ಕೆ ತುಂಬಾ ಕಷ್ಟ ಆಗ್ತಿದೆ. ಬಸ್ ವ್ಯವಸ್ಥೆ ಕೂಡ ಕಡಿಮೆ ಆಗಿ, ತುಂಬಾ ರಷ್ ಆಗ್ತಿದೆ. ಕಾಲೇಜು, ಆಫೀಸ್‌ಗೆ ಹೋಗುವವರಿಗೆ ತುಂಬಾ ಸಮಸ್ಯೆ ಆಗ್ತಿದೆ ಎಂದು ಮಹಿಳೆಯೊಬ್ಬರು ಟಿಕೆಟ್ ದರ ಏರಿಕೆಗೆ ಬೇಸರ ಹೊರಹಾಕಿದ್ದಾರೆ. ಮಹಿಳೆಯರಿಗೆ ಫ್ರೀ ಇದ್ದರೂ, ಬೇರೆ ರೀತಿಯಲ್ಲಿ ನಮಗೆ ತೆರಿಗೆ ಹೊರೆ ಹೆಚ್ಚಾಗಿದೆ ಎಂದು ಅಸಮಾಧಾನ ಹೊರಹಾಕಿದ್ದಾರೆ.

ಹೆಣ್ಣುಮಕ್ಕಳಿಗೆ ಆ ಭಾಗ್ಯ ಕೊಡ್ತೀವಿ, ಈ ಭಾಗ್ಯ ಕೊಡ್ತೀವಿ ಅಂತಾ ಸರ್ಕಾರದವರು ಎಲ್ಲಾ ಮೋಸ ಮಾಡ್ತಿದ್ದಾರೆ. ಒಂದು ಕಡೆಯಿಂದ ಕೊಟ್ಟು, ಇನ್ನೊಂದು ಕಡೆ ಕೊಟ್ಟಂಗೆ ಮಾಡ್ತಾರೆ. ಹೆಣ್ಣುಮಕ್ಕಳೇನು ಹೊರಗಿನವರಾ? ನಮ್ಮ ಕುಟುಂಬದಲ್ಲೇ ಇರುತ್ತಾರೆ. ಹಾಗಿದ್ಮೇಲೆ, ನಮ್ಮ ಕುಟುಂಬದ ನಾಶವೇ ಇದು. ಇವರು ಮೋಸ ಮಾಡ್ತಾರೆ. ಇದು ಮೋಸದ ಸರ್ಕಾರ ಅಂತಾ ನಮಗೆ ಮೊದಲೇ ಗೊತ್ತಿತ್ತು ಎಂದು ಪ್ರಯಾಣಿಕರೊಬ್ಬರು ಸರ್ಕಾರದ ವಿರುದ್ಧ ಗುಡುಗಿದ್ದಾರೆ.

ಹೆಣ್ಣುಮಕ್ಕಳಿಗೆ ಬಸ್ ಫ್ರೀ, ವಿದ್ಯುತ್ ಫ್ರೀ ಅಂತೀರಾ. ಆದರೆ, ಬೇರೆ ಎಲ್ಲದರ ರೇಟ್ ಜಾಸ್ತಿ ಮಾಡ್ತೀರಾ. ಬಡವರ ದುಡ್ಡನ್ನು ಸರ್ಕಾರ ಕೊಳ್ಳೆ ಹೊಡೀತಿದೆ. ಸರ್ಕಾರವೇ ಮೋಸ. ಬಿಜೆಪಿ, ಕಾಂಗ್ರೆಸ್ ಯಾವುದು ಬಂದರೂ ಅಷ್ಟೆ. ಎಲ್ಲಾ ವೇಸ್ಟ್. ಹೆಣ್ಣುಮಕ್ಕಳಿಗೆ ಬಸ್ ಫ್ರೀ ಅಂತಾರೆ. ಆದರೆ, ಗಂಡಸರಿಗೆ ರಾತ್ರೋರಾತ್ರಿ ದರ ಏರಿಸಿದ್ದಾರೆ. ಇದು ಮೋಸ. ಬಡವರಿಗೆ ತುಂಬಾ ಕಷ್ಟ ಆಗ್ತಿದೆ. ಸರ್ಕಾರ ಈ ರೀತಿ ಮಾಡಬಾರದು ಎಂದು ಮಹಿಳಾ ಪ್ರಯಾಣಿಕರೇ ಆಕ್ರೋಶ ಹೊರಹಾಕಿದ್ದಾರೆ.

ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ನಾಲ್ಕೂ ನಿಗಮಗಳ ಬಸ್ ಪ್ರಯಾಣ ದರವನ್ನು ಸರ್ಕಾರ ಹೆಚ್ಚಳ ಮಾಡಿದೆ. ಶೇ.15 ರಷ್ಟು ಪ್ರಯಾಣ ದರ ಹೆಚ್ಚಿಸಿ ಆದೇಶ ಹೊರಡಿಸಿದೆ.

## ಎಚ್‌ಎಂಪಿವಿ ವೈರಸ್ ಪತ್ತೆ

ಸದ್ಯ ಎಚ್ ಎಂಪಿವಿ ವೈರಸ್ ಹರಡುವಿಕೆ ತಡೆಗೆ ಯಾವುದೇ ಲಸಿಕೆ ಇಲ್ಲ. ಭಾರತದಲ್ಲಿ ಸದ್ಯ ಯಾವುದೇ ರೀತಿಯಲ್ಲಿ ಆತಂಕ ಪಡಬೇಕಾದ ಅಗತ್ಯ ಇಲ್ಲ ಎಂದು ಕೇಂದ್ರ ಆರೋಗ್ಯ ಸಚಿವಾಲಯ ಕೂಡ ಹೇಳಿದೆ.

## ಕಿಶೋರ್ ಬಂಧನ

ಪಾಟ್ನಾದ ಗಾಂಧಿ ಮೈದಾನದಿಂದ ಮುಂಜಾನೆ ಪೊಲೀಸರು ಪ್ರಶಾಂತ್ ಕಿಶೋರ್ ಅವರನ್ನು ವಶಕ್ಕೆ ಪಡೆದಿದ್ದಾರೆ. ಇದಾದ ಬಳಿಕ ಅವರನ್ನು ಚಿಕಿತ್ಸೆಗಾಗಿ ಏಮ್ಸ್‌ಗೆ ಕರೆದೊಯ್ಯಲಾಯಿತು. ಜನವರಿ 2 ರಂದು ಸಂಜೆ 5 ಗಂಟೆಯಿಂದ ಪಾಟ್ನಾದ ಗಾಂಧಿ ಮೈದಾನದಲ್ಲಿ ಪಿಕೆ ಆಮರಣಾಂತ ಉಪವಾಸ ಕುಳಿತಿದ್ದರು. ನಿಯಮಿತ ತಪಾಸಣೆಯ ವೇಳೆ ವೈದ್ಯರು ಚಿಕಿತ್ಸೆ ನೀಡದೇ ಇದ್ದರೆ ಅವರ ಸ್ಥಿತಿ ಇನ್ನಷ್ಟು ಹದಗೆಡಬಹುದು ಎಂದು ಎಚ್ಚರಿಸಿದ್ದಾರೆ.

ಬಿಹಾರ ಲೋಕಸೇವಾ ಆಯೋಗದ (ಬಿಪಿಎಸ್‌ಸಿ) 70ನೇ ಪೂರ್ವಭಾವಿ ಪರೀಕ್ಷೆಯನ್ನು ರದ್ದುಗೊಳಿಸುವಂತೆ ಒತ್ತಾಯಿಸಿ ಪ್ರಶಾಂತ್ ಕಿಶೋರ್ ಪಾಟ್ನಾದ ಗಾಂಧಿ ಮೈದಾನದಲ್ಲಿ ಆಮರಣಾಂತ ಉಪವಾಸ ನಡೆಸುತ್ತಿದ್ದರು. ಬಿಹಾರದಲ್ಲಿ ಯುವ ಸತ್ಯಾಗ್ರಹ ಸಮಿತಿ ಎಂಬ ಹೊಸ ಸಂಘಟನೆಯನ್ನು ರಚಿಸಲಾಗಿದೆ. ಕಳೆದ ವರ್ಷ ಡಿಸೆಂಬರ್ 13 ರಂದು ನಡೆದ ಜಂಟಿ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ, ರಾಜ್ಯ ರಾಜಧಾನಿ ಪಾಟ್ನಾದ ಬಾಪು ಭವನದ ಪರೀಕ್ಷಾ ಕೇಂದ್ರದಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ ಎಂಬ ವದಂತಿ ಹರಡಿತ್ತು.

ನೂರಾರು ಅಭ್ಯರ್ಥಿಗಳು ಪರೀಕ್ಷೆಯನ್ನು ಬಹಿಷ್ಕರಿಸಿದ್ದರು. ಇದಾದ ಬಳಿಕ ಮತ್ತೆ ಬಾಪು ಪರೀಕ್ಷಾ ಸಂಕೀರ್ಣದಲ್ಲಿ ಪರೀಕ್ಷೆ ನಡೆಸಲು ಬಿಪಿಎಸ್‌ಸಿ ಆದೇಶಿಸಿದೆ. ಇದಕ್ಕೆ ಸಂಬಂಧಿಸಿದಂತೆ ಪಾಟ್ನಾದ ಹಲವು ಕೇಂದ್ರಗಳಲ್ಲಿ ಮರು ಪರೀಕ್ಷೆಯನ್ನೂ ಆಯೋಜಿಸಲಾಗಿತ್ತು. ಮತ್ತೊಂದೆಡೆ, ಹೆಚ್ಚಿನ ಸಂಖ್ಯೆಯ ಅಭ್ಯರ್ಥಿಗಳು ಸಂಪೂರ್ಣ ಪರೀಕ್ಷೆಯನ್ನು ರದ್ದುಗೊಳಿಸುವಂತೆ ಒತ್ತಾಯಿಸುತ್ತಿದ್ದಾರೆ.

## ಬಂಧಿಸಿದ ಎನ್‌ಐಎ

**ಎನ್‌ಐಎ ಹೇಳಿದ್ದೇನು?:** ಆರೋಪಿಯು ದುಬೈನಿಂದ ಬಿಹಾರದ ಪಿಎಫ್‌ಐ ಕಾರ್ಯಕರ್ತರಿಗೆ ಬರುತ್ತಿದ್ದ ದುಡ್ಡನ್ನು ಕರ್ನಾಟಕ ಮತ್ತು ಕೇರಳ ಮೂಲದ ತಂಡಗಳ ಮೂಲಕ ಅಕ್ರಮವಾಗಿ ರವಾನಿಸುತ್ತಿದ್ದ. ನಿಷೇಧಿತ ಸಂಘಟನೆಯ ಅಪರಾಧ ಮತ್ತು ಕಾನೂನುಬಾಹಿರ ಚಟುವಟಿಕೆಗಳನ್ನು ಉತ್ತೇಜಿಸಲು ಹಣವನ್ನು ಬಳಸಲಾಗಿತ್ತು ಎಂದು ಎನ್‌ಐಎ ಪ್ರಕಟಣೆ ತಿಳಿಸಿದೆ.

ಪಿಎಫ್‌ಐ ಕಾರ್ಯಕರ್ತರು ಕಾನೂನುಬಾಹಿರ ಮತ್ತು ದೇಶ ವಿರೋಧಿ ಚಟುವಟಿಕೆಗಳಲ್ಲಿ ತೊಡಗಿಕೊಂಡಿರುವ ಬಗ್ಗೆ 2022 ರ ಜುಲೈನಲ್ಲಿ ಬಿಹಾರದ ಫುಲ್ವಾರಿ ಷರೀಫ್ ಪೊಲೀಸರು ಪ್ರಕರಣ ದಾಖಲಿಸಿದ್ದರು. ನಂತರ ಪ್ರಕರಣದ ತನಿಖೆಯನ್ನು ಎನ್ ಐಎಗೆ ವಹಿಸಲಾಗಿತ್ತು.

ದೇಶದಲ್ಲಿ ಶಾಂತಿ ಮತ್ತು ಸೌಹಾರ್ದತೆ ಕಾಪಾಡಲು ಪೂರ್ವಾಗ್ರಹ ಪೀಡಿತ ಚಟುವಟಿಕೆಗಳ ಮೂಲಕ ವಿವಿಧ ಧರ್ಮಗಳು ಮತ್ತು ಗುಂಪುಗಳ ಸದಸ್ಯರ ನಡುವೆ ಭಯೋತ್ಪಾದನೆಯ ವಾತಾವರಣವನ್ನು ಸೃಷ್ಟಿಸಲು ಮತ್ತು ಧಾರ್ಮಿಕ ದ್ವೇಷವನ್ನು ಹರಡಲು ನಿಷೇಧಿತ ಪಿಎಫ್ ಐ ಸಂಘಟನೆಯ ಕಾರ್ಯಕರ್ತರು ಸಂಚು ರೂಪಿಸಿದ್ದಾರೆ ಎಂದು ಎನ್ ಐಎ ಪ್ರಕಟಣೆ ತಿಳಿಸಿದೆ.

ಸಾರ್ವಜನಿಕ ಶಾಂತಿಗೆ ಭಂಗ ತರುವ, ಭಾರತದ ವಿರುದ್ಧ ಜನಾಭಿಪ್ರಾಯ ಉಂಟುಮಾಡುವ ಉದ್ದೇಶದಿಂದ ಮತ್ತು ಭಾರತವನ್ನು 2047ರ ವೇಳೆಗೆ ಇಸ್ಲಾಂ ರಾಷ್ಟ್ರ ಮಾಡುವ ಗುರಿಯೊಂದಿಗೆ ನಿಷೇಧಿತ ಸಂಘಟನೆ ಕಾರ್ಯಾಚರಿಸುತ್ತಿರುವ ಆರೋಪದೊಂದಿಗೆ ಚಾರ್ಜ್ ಶೀಟ್ ಸಲ್ಲಿಸಲಾಗಿತ್ತು. ಪ್ರಕರಣದಲ್ಲಿ 17 ಮಂದಿ ಆರೋಪಿಗಳನ್ನು ಬಂಧಿಸಲಾಗಿತ್ತು. ಇದೀಗ 18ನೇ ಆರೋಪಿಯಾಗಿ ಮೊಹಮ್ಮದ್ ಸಜ್ಜದ್ ಆಲಂನನ್ನು ಬಂಧಿಸಲಾಗಿದೆ.

## ಹೊಸ ಆರೋಪ

**ಚಲುವರಾಯಸ್ವಾಮಿ ಹೇಳಿದ್ದೇನು?:** ಸರ್ಕಾರ ನನಗೆ ಕಾರು ನೀಡಿಲ್ಲ ಎಂಬ ಹೆಚ್ ಡಿ ಕುಮಾರಸ್ವಾಮಿ ಆರೋಪಕ್ಕೆ ಸಚಿವ ಚಲುವರಾಯಸ್ವಾಮಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಮಂಡ್ಯ ತಾಲೂಕಿನ ಕೆರಗೋಡು ಗ್ರಾಮದಲ್ಲಿ ಮಾತನಾಡಿದ ಅವರು, 'ಸರ್ಕಾರ ನನಗೆ ಕಾರು ನೀಡಿಲ್ಲ ಎಂದು ಕೇಂದ್ರ ಸಚಿವರು ಹೇಳಿದ್ದಾರೆ. ಆದರೆ, ಸುಮಲತಾ ಉಪಯೋಗಿಸುತ್ತಿದ್ದ ಕಾರು ಬಳಸುವುದಿಲ್ಲ ಎಂದು ಯಾಕೆ ಹೇಳಿದರು' ಎಂದು ಪ್ರಶ್ನಿಸಿದ್ದಾರೆ.

## ಮೊದಲನೇ ಪುಟದಿಂದ...

ಹೊಸ ಸಂಸದರಿಗೆ ಮೊದಲು ಹಳೆಯ ಕಾರು ನೀಡುವುದು ವಾಡಿಕೆ. ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ಪಡೆದು ಹೊಸ ಕಾರು ಖರೀದಿಸಿ ಕೊಡುತ್ತೇವೆ. ಹಿಂದೆ ನಮಗೂ ಅಂಬರೀಶ್ ಬಳಸುತ್ತಿದ್ದ ಕಾರು ಕೊಟ್ಟಿದ್ದರು. ಸಚಿವನಾದಾಗಲೂ 6 ತಿಂಗಳು ಹಳೆಯ ಕಾರನ್ನೇ ಬಳಸಿದ್ದೆ. ಇಂತಹ ಸಣ್ಣ ಹೇಳಿಕೆ, ಆರೋಪ ಮಾಡುವುದು ಅವರ ಘನತೆಗೆ ತರವಲ್ಲ ಎಂದು ಚಲುವರಾಯಸ್ವಾಮಿ ಹೇಳಿದ್ದಾರೆ.

**ಏನು ಹೇಳಿದ್ದರು ಕುಮಾರಸ್ವಾಮಿ:** ಕಳೆದ ವಾರ ರಾಜ್ಯ ಪ್ರವಾಸದ ವೇಳೆ, ರಾಜ್ಯ ಸರ್ಕಾರ ಕಾರು ಒದಗಿಸಿಲ್ಲ ಎಂದು ಕುಮಾರಸ್ವಾಮಿ ಆರೋಪಿಸಿದ್ದರು. ಅಲ್ಲದೆ, ಕೇಂದ್ರ ಸರ್ಕಾರದ ವಾಹನದಲ್ಲೇ ಮಂಡ್ಯ, ಮೈಸೂರು ಜಿಲ್ಲೆ ಪ್ರವಾಸ ಮಾಡಿದ್ದರು. ರಾಜ್ಯ ಸರ್ಕಾರ ನನಗೆ ಈವರೆಗೂ ಕಾರು ಕೊಟ್ಟಿಲ್ಲ. ಹೀಗಾಗಿ, ನಮ್ಮ ಕೇಂದ್ರ ಸರ್ಕಾರದ ವಾಹನ ಬಳಕೆ ಮಾಡುತ್ತಿದ್ದೇನೆ. ಬೃಹತ್ ಕೈಗಾರಿಕಾ ಇಲಾಖೆಯ ವಾಹನ ತರಿಸಿಕೊಂಡಿದ್ದೇನೆ ಎಂದು ಕುಮಾರಸ್ವಾಮಿ ಹೇಳಿದ್ದರು.

ಇದು ರಾಜಕೀಯ ಜಟಾಪಟಿಗೆ ಕಾರಣವಾಗಿತ್ತು. ಕೇಂದ್ರ ಸಚಿವರಿಗೆ ಕಾರು ನೀಡದೇ ಇರುವ ಬಗ್ಗೆ ಟೀಕೆಗಳೂ ವ್ಯಕ್ತವಾಗಿದ್ದವು. ಇದರ ಬೆನ್ನಲ್ಲೇ ಸಚಿವ ಚಲುವರಾಯಸ್ವಾಮಿ ಪ್ರತಿಕ್ರಿಯಿಸಿ, ಕುಮಾರಸ್ವಾಮಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ನಿರ್ಮಾಣಕ್ಕೆ ಯೋಜನೆ

**ಬೆಂಗಳೂರು ಟ್ರಾಫಿಕ್‌ಗೆ ಕಡಿವಾಣ ಹಾಕಲು ಯೋಜನೆ:** ರಾಜಧಾನಿ ಬೆಂಗಳೂರಿನ ಟ್ರಾಫಿಕ್ ಗೆ ಲಗಾಮು ಹಾಕುವುದಕ್ಕಾಗಿ ಬಿಬಿಎಂಪಿ ಹೊಸ ಯೋಜನೆ ಮಾಡಲು ಹೊರಟಿದೆ. ಹಿಂದೆ ಬೆಂಗಳೂರಿನ ಪ್ರಮುಖ ನದಿಗಳಲ್ಲಿ ಒಂದಾಗಿದ್ದ ವೃಷಭಾವತಿ ನದಿಮಾರ್ಗದಲ್ಲಿ ಸ್ವಚ್ಛತೆ ಕಾಪಾಡುವುದಕ್ಕೂ ಸಜ್ಜಾಗಿರುವ ಪಾಲಿಕೆ, ಸಮಗ್ರ ಯೋಜನೆ ಮೂಲಕ ವೃಷಭಾವತಿ ನದಿ ಮಾರ್ಗದ ರಾಜಕಾಲುವೆಗಳನ್ನು ನಿರ್ವಹಣೆ ಮಾಡಲು ಹೊರಟಿದೆ.

ಇತ್ತ ಕೆಂಗೇರಿ ಬಳಿ ಇರುವ ರಾಜಕಾಲುವೆ ಮೇಲೆ ಹೊಸದಾಗಿ ಮೈಸೂರು ಕಡೆಗೆ ರಸ್ತೆ ನಿರ್ಮಾಣ ಮಾಡಲು ಹೊರಟಿರುವ ಬಿಬಿಎಂಪಿ, ಆ ಮೂಲಕ ಮೈಸೂರು ರಸ್ತೆ ಕಡೆಗಿನ ಸಂಚಾರ ಸುಗಮಗೊಳಿಸಲು ಮುಂದಾಗಿದೆ.

**ಒತ್ತುವರಿ ತೆರವಿಗೂ ಸಜ್ಜಾದ ಪಾಲಿಕೆ:** ವೃಷಭಾವತಿ ನದಿಪಾತ್ರದಲ್ಲಿರುವ ರಾಜಕಾಲುವೆಗಳ ಬಳಿ ಒತ್ತುವರಿ ತೆರವಿಗೂ ಸಜ್ಜಾಗಿರೋ ಬಿಬಿಎಂಪಿ, ಎಲ್ಲೆಲ್ಲೆ ಒತ್ತುವರಿಯಾಗಿದೆ ಎಂಬುದನ್ನು ಗುರುತಿಸಿ ತೆರವು ಮಾಡುವುದಕ್ಕೂ ಯೋಜನೆ ರೂಪಿಸಲು ಹೊರಟಿದೆ. ಸದ್ಯ ಈ ಬಗ್ಗೆ ಎಲ್ಲಾ ವಲಯದ ವಲಯ ಆಯುಕ್ತರ ಜೊತೆ ಚರ್ಚಿಸಿರುವ ಬಿಬಿಎಂಪಿಯ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್, ವೃಷಭಾವತಿ ಪಾತ್ರದಲ್ಲಿ ರಸ್ತೆ ನಿರ್ಮಿಸುವುದರಿಂದ ಟ್ರಾಫಿಕ್ ಕಿರಿಕಿರಿಗೆ ಮುಕ್ತಿ ಸಿಗುತ್ತದೆ. ಜೊತೆಗೆ ರಾಜಕಾಲುವೆಗಳ ಒತ್ತುವರಿ ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಕೂಡ ಚಿಂತನೆ ನಡೆದಿದೆ ಎಂದಿದ್ದಾರೆ.

ಕೆಂಗೇರಿ ಬಳಿ ಹರಿಯುತ್ತಿರುವ ವೃಷಭಾವತಿ ನದಿ ಮಾರ್ಗದ ಬೃಹತ್ ರಾಜಕಾಲುವೆಯಲ್ಲಿ ಈಗಾಗಲೇ ಸ್ವಚ್ಛತಾಕಾರ್ಯ ಶುರುವಾಗಿದೆ. ಯಾವ್ಯಾವ ಅಪಾರ್ಟ್ ಮೆಂಟ್ ಗಳಿಂದ ರಾಜಕಾಲುವೆಗೆ ನೀರು ಹರಿಯುತ್ತದೆ, ಕಸ ಎಲ್ಲಿಂದ ಸೇರ್ಪಡೆಯಾಗುತ್ತದೆ ಎಂಬ ಅಂಶಗಳನ್ನ ಗುರುತಿಸುವ ಕೆಲಸ ನಡೆಯುತ್ತಿದೆ. ಈ ಮೂಲಕ ರಾಜಕಾಲುವೆಯ ಸ್ವಚ್ಛತೆ ಕಾಪಾಡುವುದರ ಜೊತೆಗೆ ಹೊಸ ರಸ್ತೆ ನಿರ್ಮಾಣವಾದರೆ ರಾಜಧಾನಿಯ ವಾಹನ ದಟ್ಟನೆಗೆ ಪರಿಹಾರ ಸಿಗುವ ನಿರೀಕ್ಷೆ ಕೂಡ ಪಾಲಿಕೆ ಮುಂದಿದೆ. ಸದ್ಯ ಬ್ರ್ಯಾಂಡ್ ಬೆಂಗಳೂರಿನ ರಾಜಕಾಲುವೆ ಮೇಲೆ ಮಾಡಲು ಹೊರಟಿರುವ ಪ್ರಯೋಗ ಎಷ್ಟರಮಟ್ಟಿಗೆ ಫಲ ನೀಡುತ್ತದೆ ಎಂಬುದನ್ನು ಕಾದುನೋಡಬೇಕಿದೆ.

## ರಾಜೀನಾಮೆ ಸಾಧ್ಯತೆ

ಸಾಕಷ್ಟು ಹೆಚ್ಚಾಯಿತು.

ಟ್ರಂಪ್ ಅವರನ್ನು ನಿರಂತರವಾಗಿ ಟಾರ್ಗೆಟ್ ಮಾಡುತ್ತಿದ್ದರು. ಈಗ ಟ್ರುಡೊಗೆ ಕ್ಷಣಗಣನೆ ಆರಂಭವಾಗಿದೆ ಎಂದು ಟ್ರಂಪ್ ವಿಜಯದ ನಂತರ ಎಲಾನ್ ಮಸ್ಕ್ ಕೂಡ ಹೇಳಿದ್ದರು.

ಪ್ರಸ್ತುತ ಲಿಬರಲ್ ಪಕ್ಷವು ಕೆನಡಾ ಸಂಸತ್ತಿನ ಹೌಸ್ ಆಫ್ ಕಾಮನ್ಸ್‌ನಲ್ಲಿ 153 ಸಂಸದರನ್ನು ಹೊಂದಿದೆ. ಕೆನಡಾದ ಹೌಸ್ ಆಫ್ ಕಾಮನ್ಸ್‌ನಲ್ಲಿ 338 ಸ್ಥಾನಗಳಿವೆ. ಇದರಲ್ಲಿ ಬಹುಮತವು 170 ಆಗಿದೆ. ಕೆಲವು ತಿಂಗಳ ಹಿಂದೆ, ಟ್ರೂಡೊ ಸರ್ಕಾರದ ಮಿತ್ರ ಪಕ್ಷವಾದ ನ್ಯೂ ಡೆಮಾಕ್ರಟಿಕ್ ಪಾರ್ಟಿ (ಎನ್‌ಡಿಪಿ) ತನ್ನ ಬೆಂಬಲವನ್ನು ಹಿಂಪಡೆದಿತ್ತು. ಎನ್‌ಡಿಪಿ ಖಲಿಸ್ತಾನಿ ಪರ ಕೆನಡಾದ ಸಿಖ್ ಸಂಸದ ಜಗ್ಮೀತ್ ಸಿಂಗ್ ಅವರ ಪಕ್ಷವಾಗಿದೆ.

ಮೈತ್ರಿ ಮುರಿದುಹೋದ ಕಾರಣ, ಟ್ರೂಡೊ ಸರ್ಕಾರವು ಅಲ್ಪಮತಕ್ಕೆ ಇಳಿಯಿತು. ಆದಾಗ್ಯೂ, ಅಕ್ಟೋಬರ್ 1 ರಂದು ನಡೆದ ಬಹುಮತದ ಪರೀಕ್ಷೆಯಲ್ಲಿ, ಟ್ರುಡೊ ಅವರ ಲಿಬರಲ್ ಪಕ್ಷವು ಮತ್ತೊಂದು ಪಕ್ಷದ ಬೆಂಬಲವನ್ನು ಪಡೆದುಕೊಂಡಿತ್ತು.

## ಕಾಂಗ್ರೆಸ್ ವಾಗ್ದಾಳಿ

**ಕಾಂಗ್ರೆಸ್ ಟ್ವೀಟ್**

- **ಹೆಣದ ಮೇಲೆ ಹಣ ಲೂಟಿ ಮಾಡಿದ ಸಾವಿರಾರು ಕೋಟಿ ಕೋವಿಡ್ ಹಗರಣ**
- **ನೂರಾರು ಕೋಟಿ ರೂ. ಕೊಳ್ಳೆ ಹೊಡೆದ ಪಿಎಸ್‌ಐ ನೇಮಕಾತಿ ಅಕ್ರಮ**
- **ಬೋವಿ ನಿಗಮದಲ್ಲಿ 87 ಕೋಟಿ ರೂ ಹಗರಣ**
- **ದೇವರಾಜ್ ಅರಸ್ ಟ್ರಕ್ ಟರ್ಮಿನಲ್ ನಲ್ಲಿ 50 ಕೋಟಿಗೂ ಹೆಚ್ಚು ಅಕ್ರಮ**
- **ಗಂಗಾ ಕಲ್ಯಾಣದಲ್ಲಿ ಯೋಜನೆಯಲ್ಲಿ 430 ಕೋಟಿಗೂ ಹೆಚ್ಚು ಅಕ್ರಮ**
- **ಕಿಯೋನಿಕ್ಸ್ ನಲ್ಲಿ 400 ಕೋಟಿ ರೂ. ಹಗರಣ**
- **ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಹಗರಣ**
- **ಬಿಟ್ ಕಾಯಿನ್ ಹಗರಣ**
- **ಮೊಟ್ಟೆ, ಚಿಕ್ಕಿ, ಸ್ವೆಟರ್ ಹಗರಣ**
- KSDL **ಹಗರಣ. ಪಟ್ಟಿ ದೊಡ್ಡದಿದೆ. ಭ್ರಷ್ಟಾಚಾರಕ್ಕೆ ಮತ್ತೊಂದು ಹೆಸರೇ ಬಿಜೆಪಿ!**

ಇನ್ನು ಪ್ರಧಾನಿ ಮೋದಿ ಸರ್ಕಾರದ ಆಡಳಿತದಲ್ಲಿ ದೇಶದ ಪ್ರಗತಿ ನಿಂತ ನೀರಾಗಿದೆ. ಪ್ರತಿಗಾಮಿ ನೀತಿಗಳು ದೇಶದ ಅರ್ಥ ವ್ಯವಸ್ಥೆ ತಲೆಕೆಳಗಾಗುವಂತೆ ಮಾಡುತ್ತಿದೆ. ಈ ಎಲ್ಲದರ ಪರಿಣಾಮ ಪ್ರವಾಸೋದ್ಯಮ ಕ್ಷೇತ್ರವನ್ನೂ ಕಾಡುತ್ತಿದೆ. ವಿದೇಶಿ ಪ್ರವಾಸಿಗರ ಸಂಖ್ಯೆಯಲ್ಲಿ ಗಣನೀಯ ಕುಸಿತ ಪ್ರವಾಸೋದ್ಯಮಕ್ಕೆ ದೊಡ್ಡ ಹೊಡೆತ ನೀಡಿದೆ.

ಇನ್ಕ್ರೆಡಿಬಲ್ ಇಂಡಿಯಾ ಘೋಷಣೆ ದೇಶದ ಪ್ರವಾಸೋದ್ಯಮ ಕ್ಷೇತ್ರವನ್ನು ಹೊಸ ದಿಕ್ಕಿನೆಡೆಗೆ ಕೊಂಡೊಯ್ಯಬೇಕಿತ್ತು. ಆದರೆ ವಾಸ್ತವದಲ್ಲಿ ಅದು ಕೇವಲ ಪ್ರಚಾರದ ಸರಕಾಗಿಯಷ್ಟೇ ಬಳಕೆಯಾಗಿದೆ ಎಂದು ಹರಿಹಾಯ್ದಿದೆ.

## ಯುವಕ

ಆತ ವಿದ್ಯಾರ್ಥಿನಿಯನ್ನು ಪ್ರೀತಿಸುತ್ತಿದ್ದ, ಆದರೆ ಆಕೆಗೆ ಇಷ್ಟವಿರಲಿಲ್ಲ, ಆಕೆ ಬೇರೊಬ್ಬ ಹುಡುಗನೊಂದಿಗೆ ಮಾತನಾಡಿದ್ದಕ್ಕೆ ಕೋಪಗೊಂಡ ಆತ ಆಕೆಯನ್ನು ಹತ್ಯೆ ಮಾಡಲು ಯತ್ನಿಸಿದ್ದಾನೆ. ಮೊದಲು ಆಕೆಯೊಂದಿಗೆ ಮಾತನಾಡಲು ಪ್ರಯತ್ನಿಸಿದ್ದ. ನಂತರ ಇದ್ದಕ್ಕಿದ್ದಂತೆ ದುಪಟ್ಟಾದಿಂದ ಕತ್ತು ಹಿಸುಕಿ ಕೊಲೆ ಮಾಡಲು ಮುಂದಾಗಿದ್ದ.

## ಕೊಲೆ

ಸೆಕ್ಟರ್ 53ರ ಗೆಸ್ಟ್ ಹೌಸ್ ನಲ್ಲಿ ವ್ಯಕ್ತಿಯೊಬ್ಬನನ್ನು ಚಾಕುವಿನಿಂದ ಇರಿದು ಕೊಂದಿರುವ ಬಗ್ಗೆ ಮಾಹಿತಿ ಲಭಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಪೊಲೀಸ್ ತಂಡವು ಸ್ಥಳಕ್ಕೆ ಧಾವಿಸಿದ್ದು, ಶ್ವಾನದಳ ಮತ್ತು ವಿಧಿವಿಜ್ಞಾನ ತಜ್ಞರು ಘಟನಾ ಸ್ಥಳಕ್ಕೆ ಧಾವಿಸಿದ್ದಾರೆ.

ಮೃತರು ಬಿಹಾರ ಮೂಲದ ದಿಲೀಪ್ ಕುಮಾರ್ ಅತಿಥಿ ಗೃಹದಲ್ಲಿ ಹೌಸ್ ಕೀಪಿಂಗ್ ಸಿಬ್ಬಂದಿಯಾಗಿ ಕೆಲಸ ಮಾಡುತ್ತಿದ್ದರು ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಮೃತರ ಸಹೋದರ ನೀಡಿದ ದೂರಿನ ಆಧಾರದ ಮೇಲೆ ಎಫ್ ಐಆರ್ ದಾಖಲಿಸಲಾಗಿದ್ದು, ಆರೋಪಿಯನ್ನು ಬಂಧಿಸಲಾಗಿದೆ ಎಂದು ಅವರು ಹೇಳಿದರು.

ವಿಚಾರಣೆಯ ಸಮಯದಲ್ಲಿ, ಶವತಾಲ್ ಅವರು ಕುಮಾರ್ ವಿರುದ್ಧ ಕೋಪ ಹೊಂದಿದ್ದರು, ಏಕೆಂದರೆ ಅವರು ಕೆಲಸದ ಗುಣಮಟ್ಟದ ಬಗ್ಗೆ ಅವರನ್ನು ನಿರಂತರವಾಗಿ ನಿಂದಿಸುತ್ತಿದ್ದರು ಮತ್ತು ಅವರಿಗೆ ಬೆದರಿಕೆ ಹಾಕುತ್ತಿದ್ದ ಎಂದು ಹೇಳಿದ್ದಾರೆ.

ಸತತವಾಗಿ ಬೈಯುತ್ತಿದ್ದರಿಂದ ಕೋಪಗೊಂಡ ಆತ ಅಡುಗೆ ಮನೆಯಿಂದ ಚಾಕುವನ್ನು ತೆಗೆದುಕೊಂಡು ದಿಲೀಪ್ ರನ್ನು ಇರಿದು ಕೊಂದಿದ್ದಾಗಿ ಆರೋಪಿ ಪೊಲೀಸರಿಗೆ ತಿಳಿಸಿದ್ದಾನೆ ಎಂದು ಅಧಿಕಾರಿ ತಿಳಿಸಿದ್ದಾರೆ. ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

### ವೀಕೆಂಡ್‌ನಲ್ಲಿ ಟ್ರಾಫಿಕ್ ಪೊಲೀಸರಿಂದ ಕೇಸ್‌ಗಳ ಸುರಿಮಳೆ!

# ಒಂದೇ ದಿನದಲ್ಲಿ ಬರೋಬ್ಬರಿ 2240 ಕೇಸ್ ದಾಖಲು!

**ಬೆಂಗಳೂರು:** ವೀಕೆಂಡ್‌ನಲ್ಲಿ ಮಸ್ತ್ ಮಜಾ ಮಾಡಲು ಜಾಲಿ ರೈಡ್ ಹೊರಟವರಿಗೆ ಶಾಕ್ ಕಾದಿತ್ತು. ಹೌದು, ಸಂಚಾರಿ ಪೊಲೀಸರು ನಿನ್ನೆ ನಗರದಾದ್ಯಂತ ವಿಶೇಷ ಕಾರ್ಯಾಚರಣೆ ನಡೆಸಿ ವಾಹನಗಳ ತಪಾಸಣೆ ನಡೆಸಿದರು.

**ಟ್ರಾಫಿಕ್ ಪೊಲೀಸರಿಂದ ಕೇಸ್‌ಗಳ ಸುರಿಮಳೆ:** ಸಂಚಾರಿ ನಿಯಮ ಉಲ್ಲಂಘಟನೆ ಮಾಡಿದವರ ಮೇಲೆ ಟ್ರಾಫಿಕ್ ಪೊಲೀಸರು ಕೇಸ್‌ಗಳ ಸುರಿಮಳೆಗೈದಿದ್ದಾರೆ. ಓನ್ ವೇ ಚಾಲನೆ, ನೋ ಎಂಟ್ರಿ, ನೋ ಪಾರ್ಕಿಂಗ್, ರಾಂಗ್ ಪಾರ್ಕಿಂಗ್, ಫುಟ್ ಪಾತ್ ಪಾರ್ಕಿಂಗ್, ಫುಟ್ ಪಾತ್ ರೈಡಿಂಗ್, ಟ್ರಿಪಲ್ ರೈಡಿಂಗ್ ವಿರುದ್ಧ ಪೊಲೀಸರು ಕೇಸ್‌ಗಳನ್ನ ಹಾಕಿದ್ದಾರೆ.



**ಒಂದೇ ದಿನದಲ್ಲಿ ಬರೋಬ್ಬರಿ 2240 ಕೇಸ್ ದಾಖಲು:** ಸಂಚಾರ ನಿಯಮಗಳ ಉಲ್ಲಂಘನೆ ಮಾಡಿದ ವಾಹನ ಸವಾರರು ಹಾಗೂ ಚಾಲಕರ ವಿರುದ್ಧ ಒಂದೇ ದಿನದಲ್ಲಿ ಬರೋಬ್ಬರಿ 2240 ಕೇಸ್ ದಾಖಲು ಕೇಸ್‌ಗಳನ್ನು ದಾಖಲು ಮಾಡಿದ್ದಾರೆ. ಸುಮಾರು 12 ಲಕ್ಷ ದಂಡ ಸಂಗ್ರಹಿಸಿದ್ದಾರೆ.

# ವಿಜಯಪುರ ನಗರದಲ್ಲಿ ಚಿರತೆ ಪ್ರತ್ಯಕ್ಷ

**ವಿಜಯಪುರ:** ನಗರದ ಸಿಂದಗಿ ಬೈಪಾಸ್ ಬಳಿಯ ಸುತ್ತಮುತ್ತಲಿನ ಪ್ರದೇಶದಲ್ಲಿ ಚಿರತೆ ಓಡಾಟ ನಡೆಸಿದ್ದು, ಜನರಲ್ಲಿ ಆತಂಕ ಮನೆಮಾಡಿದೆ.

ನಗರದ ಮುನೇಶ್ವರಬಾಗ್ ಪ್ರದೇಶದಲ್ಲಿ ಚಿರತೆ ಓಡಾಡಿರುವ ದೃಶ್ಯಗಳು ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿವೆ. ಸ್ಥಳಕ್ಕೆ ಅರಣ್ಯಾಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಭಾಗದ ಜನರು ಸುರಕ್ಷಿತ ಕ್ರಮ ತೆಗೆದುಕೊಳ್ಳುವಂತೆ ಅರಣ್ಯಾಧಿಕಾರಿಗಳು ಸೂಚನೆ ನೀಡಿದ್ದಾರೆ.

ಚಿರತೆ ಸೆರೆ ಹಿಡಿಯಲು ಅರಣ್ಯಾಧಿಕಾರಿಗಳು ಮುಂದಾಗಿದ್ದಾರೆ. ನಗರದ ಸಿಂದಗಿ ನಾಕಾ, ಮುನೇಶ್ವರಭಾಗ್ ಪ್ರದೇಶದ ಜನರಲ್ಲಿ ಆತಂಕ ಹೆಚ್ಚಾಗಿದ್ದು, ಚಿರತೆ ಓಡಾಟದಿಂದ ಮನೆ ಬಿಟ್ಟು ಜನರು ಹೊರ ಬರುತ್ತಿಲ್ಲ, ಆದಷ್ಟು ಬೇಗ ಚಿರತೆಯನ್ನು ಸೆರೆ ಹಿಡಿಯಬೇಕೆಂದು ಜನರು ಒತ್ತಾಯಿಸಿದ್ದಾರೆ.



# ಜಿಲ್ಲಾ ಪೊಲೀಸ್ ಇಲಾಖೆಯ ಎಕ್ಸ್ ಖಾತೆ ಹ್ಯಾಕ್

**ಚಿತ್ರದುರ್ಗ:** ಪೊಲೀಸ್ ಇಲಾಖೆಯ ಎಕ್ಸ್ ಖಾತೆಯನ್ನೇ ಖದೀಮರು ಹ್ಯಾಕ್ ಮಾಡಿರುವ ಘಟನೆ ಚಿತ್ರದುರ್ಗದಲ್ಲಿ ಬೆಳಕಿಗೆ ಬಂದಿದೆ.

ಜಿಲ್ಲಾ ಪೊಲೀಸ್ ಅಕೌಂಟ್ ಹ್ಯಾಕ್ ಮಾಡಿರುವ ಖದೀಮರು, ಬಿಟ್ ಕಾಯಿನ್ ಬಗ್ಗೆ ಜಾಹೀರಾತು ಪ್ರಕಟಿಸಿದ್ದಾರೆ. ಹೀಗಾಗಿ ಅಲರ್ಟ್ ಆದ ಪೊಲೀಸ್ ಇಲಾಖೆ, ಖಾತೆಯನ್ನು ಸ್ಥಗಿತಗೊಳಿಸಿ ಪರಿಶೀಲನೆ ನಡೆಸಿದೆ. ಈ ಸಂಬಂಧ ಸೈಬರ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದೆ.



ಪರಿಶೀಲನೆ ಬಳಿಕ ಪುನಃ ಎಕ್ಸ್ ಖಾತೆಯನ್ನು ಸಕ್ರಿಯಗೊಳಿಸಿದ್ದು, ಎಕ್ಸ್ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಹ್ಯಾಕ್ ಮಾಹಿತಿಯನ್ನು ಜನರ ಜಾಗೃತಿಗಾಗಿ ಶೇರ್ ಮಾಡಿದೆ.

ಇನ್ನು ಸೈಬರ್ ಕ್ರೈಂಬಗ್ಗೆ ಜಿಲ್ಲೆಯಾದ್ಯಂತ ವಿಶೇಷ ಜಾಗೃತಿ ಮೂಡಿಸುತ್ತಿರುವ ಚಿತ್ರದುರ್ಗ ಎಸ್ಪಿ ರಂಜಿತ್ ಬಂಡಾರು ನಿರಂತರವಾಗಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ.

ಸಾಮಾಜಿಕ ಜಾಲಾ ತಾಣ ಸೇರಿದಂತೆ ಶಾಲಾ ಕಾಲೇಜುಗಳಲ್ಲೂ ಅಪರಾಧ ತಡೆ ಹಾಗೂ ಸೈಬರ್ ಕ್ರೈಂ ಬಗ್ಗೆ ಜಾಗೃತಿ ಕಾರ್ಯಾಗಾರಗಳನ್ನು ನಡೆಸುತ್ತಿದ್ದಾರೆ. ಇದರ ಬೆನ್ನಲ್ಲೇ ಈ ರೀತಿ ಪೊಲೀಸ್ ಇಲಾಖೆಯ ಎಕ್ಸ್ ಖಾತೆಯನ್ನು ಹ್ಯಾಕ್ ಮಾಡಿರೋದು ದುರಂತವೇ ಸರಿ.

# ಕನ್ನಡಿಗರ ವರ್ತಮಾನದ ಸಂಕಷ್ಟಕ್ಕೆ ಗಡಿ ರೇಖೆಗಳಿಲ್ಲ; ಡಾ.ಪುರುಷೋತ್ತಮ ಬಿಳಿಮಲೆ

**ಹೈದರಾಬಾದ್** : ಸಂಘಟಿತ ಹೋರಾಟ ಇಂದಿನ ದಿನಮಾನದ ಜರೂರು ಹೊರನಾಡು ಗಡಿನಾಡಿನ ಕನ್ನಡಿಗರ ಹಿತಕಾಯಲು ಯಾರೂ ಇಲ್ಲವೆನ್ನುವ ಅನಾಥಪ್ರಜ್ಞೆ ಸರಿಯಲ್ಲ. ಭಾಷೆಯ ಕುರಿತಂತೆ ಹೆಮ್ಮೆಯನ್ನು ಹೊಂದಿರುವ ಕನ್ನಡಿಗರು ಒಳನಾಡಿನಲ್ಲಿಯೂ ಸಂಕಷ್ಟದಲ್ಲಿದ್ದು, ಕನ್ನಡದ ಸಮಸ್ಯೆಗಳನ್ನು ಎಲ್ಲ ಕನ್ನಡಿಗರು ಸಂಘಟಿತರಾಗಿ ಪರಿಹರಿಸಿಕೊಳ್ಳಬೇಕಾದ ಸಂದರ್ಭ ಇದಾಗಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ.ಪುರುಷೋತ್ತಮ ಬಿಳಿಮಲೆ ಅಭಿಪ್ರಾಯ ವ್ಯಕ್ತಪಡಿಸಿದರು. ಹೊರರಾಜ್ಯದಲ್ಲಿ ನಿಜವಾದ ಕನ್ನಡ ಉಳಿಯುತ್ತಿದೆ. ಹಾಗೂ ಕನ್ನಡ ಭಾಷೆಯನ್ನು ದೇವರಿಗೆ ಕಲಿಸಿದವರು ವಚನಕಾರರು ಎಂದು ಕನ್ನಡ ಭಾಷೆಯ ಬಗ್ಗೆ ಹೆಮ್ಮೆಯ ವಿಷಯ ಎಂದು ಡಾ ಪುರುಷೋತ್ತಮ ಬಿಳಿಮಲೆ ನುಡಿದರು. ನಾವು ವೇಗವಾಗಿ ಬೆಳೆಯುತ್ತಿರುವ ಸಂದರ್ಭಗಳಲ್ಲಿ ನಾವು ಹಿಂದಿನ ನೆನಪುಗಳ ಮಾಡಿಕೊಳ್ಳುವ ಇದು ಸಂದರ್ಭ ಹೀಗಾಗಿ ನಮ್ಮ ಕನ್ನಡ ಭಾಷೆಯ ಬೆಳವಣಿಗೆಯ ವೇಗವನ್ನು 3.7 ಪ್ರತಿಶತ ಇರುವುದು ಕಳವಳಕಾರಿ ವಿಷಯವಾಗಿದೆ ಎಂದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಶನಿವಾರ ಹೈದರಾಬಾದಿನ ಉಸ್ಮಾನಿಯ ವಿಶ್ವವಿದ್ಯಾಲಯದ ಸಿಲ್ವರ್ ಜೂಬಿಲಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ 2023-24ನೇ ಸಾಲಿನ ಕನ್ನಡ ಮಾಧ್ಯಮ ಪ್ರಶಸ್ತಿ ಸಮಾರಂಭದಲ್ಲಿ ಮಾತನಾಡಿದ

### ಆಂಗ್ಲ ಭಾಷೆ ವ್ಯಾಮೋಹ ಬೇಡ

**ಕನ್ನಡದ ಪ್ರಾಚೀನತೆಗೆ ಮತ್ತು ಅದರ ಶ್ರೀಮಂತಿಕೆಗೆ ಯಾವುದೇ ಸಾಟಿಯಲ್ಲದ ಇಂಗ್ಲಿಷ್ ಭಾಷೆಯನ್ನು ಓಲೈಸುವ ವಾತಾವರಣ ಎಲ್ಲ ಕಡೆ ಸೃಷ್ಟಿಯಾಗಿರುವುದು ದುರದೃಷ್ಟಕರವೆಂದ ಸಾಹಿತಿ ಡಾ.ಬೈರಮಂಗಲ ರಾಮೇಗೌಡ, ಎಲ್ಲ ಭಾಷೆಗಳಿಗೆ ಕಂಟಕಪ್ರಾಯವಾಗಿರುವ ಇಂಗ್ಲಿಷ್ ಅನ್ನು ಸಮರ್ಥವಾಗಿ ಎದುರಿಸುವ ನಿಟ್ಟಿನಲ್ಲಿ ಈ ಕಾರ್ಯಕ್ರಮ ವಿಶೇಷ ಮಹತ್ವ ಹೊಂದಿದೆ. ಕನ್ನಡ ಭಾಷೆಯ ಜೀವಂತಿಕೆಯನ್ನು ಉಳಿಸುವ ಮೂಲಕ ಮುಂದಿನ ಪೀಳಿಗೆಗೆ ಅದನ್ನು ದಾಟಿಸುವ ನಿಟ್ಟಿನಲ್ಲಿ ಇಂತಹ ಕಾರ್ಯಕ್ರಮಗಳು ಸಹಕಾರಿಯಾಗುತ್ತದೆ ಎಂದರು.**

ಅವರು, ರಾಜ್ಯ ಸರ್ಕಾರ ದೇಶದ ಯಾವುದೇ ಭಾಗದಲ್ಲಿ ವಾಸಿಸುತ್ತಿರುವ ಕನ್ನಡಿಗರ ಹಿತಕಾಯಲು ಸಿದ್ಧವಿದ್ದು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ತನ್ನ ಸಂಪರ್ಕಕೊಂಡಿಯ ಕೆಲಸವನ್ನು ಮುಂದುವರೆಸಲಿದೆ ಎಂದರು.

ರಾಜ್ಯದಲ್ಲಿ ಏಳು ಸಾವಿರ ಏಕೋಪಾಧ್ಯಾಯ ಶಾಲೆಗಳು, ಐವತ್ತೈದು ಸಾವಿರ ಶಿಕ್ಷಕರ ಖಾಲಿ ಹುದ್ದೆಗಳು, ಆಂಗ್ಲ ಮಾಧ್ಯಮ ಶಾಲೆಗಳಾಗಿ ಪರಿವರ್ತಿತವಾಗುತ್ತಿರುವ ಸರ್ಕಾರಿ ಕನ್ನಡ ಶಾಲೆಗಳನ್ನು ಗಮನಿಸಿದಲ್ಲಿ ಕನ್ನಡದ ಮುಂದಿನ ದಿನಗಳ ಸ್ಥಿತಿ ಕಳವಳಕಾರಿ ಎಂದು ಆತಂಕ ವ್ಯಕ್ತಪಡಿಸಿದ ಡಾ.ಬಿಳಿಮಲೆ, ಇದು ಪ್ರವಾಹದ ವಿರುದ್ಧ ಈಜುವ ಕೆಲಸವಾಗಿದ್ದು, ಸಂಘಟಿತ ಹೋರಾಟವೇ ಪರಿಣಾಮಕಾರಿಯಾದ ಫಲಿತಾಂಶವನ್ನು ಒದಗಿಸಲು ಸಾಧ್ಯವೆಂದರು.

ದೇಶದ ಯಾವುದೇ ಮೂಲೆಯಲ್ಲಿ ವಾಸಿಸುತ್ತಿರುವ ಕನ್ನಡಿಗ ವಿದ್ಯಾರ್ಥಿಗಳಿಗೆ ಹಿಂದುಳಿದ ವರ್ಗಗಳ ವಸತಿನಿಲಯಗಳಲ್ಲಿ ಉಚಿತ ಪ್ರವೇಶ ಕರ್ನಾಟಕದಲ್ಲಿ ತಮ್ಮ ವ್ಯಾಸಂಗವನ್ನು ಮುಂದುವರೆಸ ಬಯಸುವ ಗಡಿನಾಡು, ಹೊರನಾಡು ವಿದ್ಯಾರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆಯ ಹಿಂದುಳಿದ ವರ್ಗಗಳ ವಿದ್ಯಾರ್ಥಿ ವಸತಿ ನಿಲಯಗಳಲ್ಲಿ ಯಾವುದೇ ನಿರ್ಬಂಧಗಳನ್ನು ಹೇರದೆ ಅವಕಾಶ ಕಲ್ಪಿಸಿಕೊಡಲು ಈಗಾಗಲೇ ರಾಜ್ಯ ಸರ್ಕಾರವು ತೀರ್ಮಾನಿಸಿದೆ ಎಂಬ ಮಾಹಿತಿಯನ್ನು ಹಂಚಿಕೊಂಡ ಡಾ.ಬಿಳಿಮಲೆ, ಈ ಕುರಿತಂತೆ ಸಮಾಜ ಕಲ್ಯಾಣ ಸಚಿವರಾದ ಡಾ.ಎಚ್.ಸಿ.ಮಹದೇವಪ್ಪನವರು ತಮಗೆ ಸ್ಪಷ್ಟ ಭರವಸೆಯನ್ನು ನೀಡಿದ್ದು, ಮುಂಬರುವ ಶೈಕ್ಷಣಿಕ ಸಾಲಿನಲ್ಲಿ ಇದು ಅನುಷ್ಠಾನಗೊಳ್ಳಲಿದೆ ಎಂದರು. ಮುಖ್ಯ ಅತಿಥಿಯಾಗಿ ಮಕ್ಕಳಿಗೆ ಉದ್ದೇಶಿಸಿ ಮಾತನಾಡಿದ ಹೈದರಾಬಾದ್ ನ ಕೇಂದ್ರೀಯ ಪತ್ತೇದಾರಿ ತರಬೇತಿ ಸಂಸ್ಥೆಯ ನಿರ್ದೇಶಕ ಶ್ರೀ ರಾಜಶೇಖರ .ಎನ್ (ಭಾ.ಪೋ.ಸೇ.) ರವರು, ಕನ್ನಡ ಮಾಧ್ಯಮದಲ್ಲಿ ಓದಿದರೆ ಉನ್ನತ ವ್ಯಾಸಂಗವಾಗಲಿ, ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಉತ್ತೀರ್ಣವಾಗಲಿ ಸಾಧ್ಯವಿಲ್ಲವೆನ್ನುವ ನಂಬಿಕೆಯನ್ನು ಮಕ್ಕಳು ಮತ್ತು ಪೋಷಕರು ಬಿಡಬೇಕು. ಕನ್ನಡದ ಮೂಲಕವೂ ಯಶಸ್ಸು ಸಾಧ್ಯವೆನ್ನುವುದಕ್ಕೆ ಮಾದರಿಯಾಗಿ ತಾನೇ ಇದ್ದೇನೆಂದರು.

ಹಾಗೆ ಕನ್ನಡ ಮಾಧ್ಯಮದಲ್ಲಿ ಓದುತ್ತಿರುವ ವಿದ್ಯಾರ್ಥಿಗಳಲ್ಲಿ ಧೈರ್ಯ ಸಾಹಸ ಒಳಗೊಂಡಿರುತ್ತದೆ. ಯಾವುದೇ ಪರಿಸ್ಥಿತಿಯನ್ನು ಎದುರಿಸುವ ಎದೆಗಾರಿಕೆ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಮಾತ್ರ ಇರುವುದು.. ಹೀಗಾಗಿ ವಿದ್ಯಾರ್ಥಿಗಳು ದಿನನಿತ್ಯದಲ್ಲಿ ಒಂದು ಶಿಕ್ಷಣ ಮಾಡುವುದು. ಪ್ರತಿನಿತ್ಯ ದಿನಪತ್ರಿಕೆ ಓದುವುದು. ಟಿವಿಯಲ್ಲಿ ಪ್ರಸಾರವಾಗುವ ವರದಿಯನ್ನು ನೋಡುವುದರಿಂದ ನೀವು ಯಾವುದೇ ಸ್ಪರ್ಧಾತ್ಮಕ ಪರೀಕ್ಷೆ ಬರೆದು ಉದ್ಯೋಗ ಪಡೆದುಕೊಳ್ಳಬಹುದು ಹೀಗಾಗಿ ಕೀಳರಿಮೆಯನ್ನು ಮನಸ್ಸಿನಿಂದ ತೆಗೆದು ಹಾಕಿ ನಿರಂತರವಾಗಿ ಅಧ್ಯಯನ ಮಾಡಿ ಎಂದು ಕಿವಿ ಮಾತು ಹೇಳಿದರು.

ಇದೇ ಸಂದರ್ಭದಲ್ಲಿ ಎಸ್.ಎಸ್.ಸಿ ಹಾಗೂ ಎಚ್.ಎಸ್.ಸಿ ತರಗತಿಗಳನ್ನು ಕನ್ನಡ ಮಾಧ್ಯಮದಲ್ಲಿ ಅಭ್ಯಸಿಸಿ ಅತಿಹೆಚ್ಚು ಅಂಕಗಳಿಸಿದ ಆಂಧ್ರ ಪ್ರದೇಶ ರಾಜ್ಯದ 52 ಹಾಗೂ ತೆಲಂಗಾಣ ರಾಜ್ಯದ 17 ವಿದ್ಯಾರ್ಥಿಗಳು ಸೇರಿ 69 ವಿದ್ಯಾರ್ಥಿಗಳಿಗೆ ನಗದು ಪ್ರಶಸ್ತಿ ನೀಡಿ ಪ್ರೋತ್ಸಾಹಿಸಲಾಯಿತು.

## ಗಾಂಜಾ ಗಿಡ ಬೆಳೆದಿದ್ದ ವ್ಯಕ್ತಿ ಸೆರೆ

**ಹನೂರು:** ಜೋಳದ ಬೆಳೆಯ ಮಧ್ಯೆ ಗಾಂಜಾ ಗಿಡ ಬೆಳೆದಿದ್ದ ವ್ಯಕ್ತಿಯೋರ್ವನನ್ನು ರಾಮಾಪುರ ಠಾಣೆ ಪೊಲೀಸರು ಬಂಧಿಸಿದ್ದಾರೆ. ಹನೂರು ತಾಲ್ಲೂಕಿನ ದೊಡ್ಡಾಲತ್ತೂರು ಗ್ರಾಮದ ಸೆಲ್ವನ್ (52) ಬಂಧಿತ ಆರೋಪಿ, ತಾಲ್ಲೂಕಿನ ದೊಡ್ಡಾಲತ್ತೂರು ಗ್ರಾಮದ ಸೆಲ್ವನ್ ಇದೇ ಗ್ರಾಮದ ನಟೇಶ್ ಎಂಬವರಿಗೆ ಸೇರಿದ ಜಮೀನನ್ನು ವ್ಯವಸಾಯದ ಉದ್ದೇಶಕ್ಕಾಗಿ ಪಡೆದು ಜೋಳದ ಫಸಲಿನ ಮಧ್ಯೆ ಗಾಂಜಾ ಬೆಳೆದಿರುವ ಬಗ್ಗೆ ದೊರೆತ ಖಚಿತ ಮಾಹಿತಿ ಮೇರೆಗೆ ಪೊಲೀಸರು ದಾಳಿ ನಡೆಸಿದಾಗ ಸುಮಾರು 1.30 ಲಕ್ಷ ರೂ. ಮೌಲ್ಯದ 80 ಗಾಂಜಾ ಗಿಡಗಳನ್ನು (26.480 ಗ್ರಾಂ) ಬೆಳೆದಿರುವುದು ಗಮನಕ್ಕೆ ಬಂದಿದೆ. ತಕ್ಷಣ ಆರೋಪಿಯನ್ನು ವಶಕ್ಕೆ ಪಡೆದು ಮುಂದಿನ ಕ್ರಮ ಕೈಗೊಂಡಿದ್ದಾರೆ. ಈ ಸಂಬಂಧ ರಾಮಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ದಾಳಿಯಲ್ಲಿ ಲಿಯಾಖತ್ ಅಲಿಖಾನ್, ರಾಜು, ಮಂಜು, ಗಿರೀಶ್, ದಯಾನಂದ್ ಪವರ್, ಪರಶುರಾಮ್ ಇನ್ನಿತರರು ಪಾಲ್ಗೊಂಡಿದ್ದರು.



## ಪೋಷಕರ ಕನಸು ಸಾಕಾರಕ್ಕೆ ವಿದ್ಯಾರ್ಥಿಗಳು ಮುಂದಾಗಲಿ

**ಕೋಲಾರ:** ಮಕ್ಕಳ ಉನ್ನತಿಯೇ ಪೋಷಕರ ಕನಸಾಗಿದ್ದು ಇದನ್ನು ಸಾಕಾರಗೊಳಿಸಲು ವಿದ್ಯಾರ್ಥಿಗಳು ಮುಂದಾಗಬೇಕೆಂದು ನವೋದಯ ವಿದ್ಯಾಸಂಸ್ಥೆ ಮುಖ್ಯಸ್ಥ ಕುರುಬೂರು ಶಂಕರೇಗೌಡ ಹೇಳಿದರು.

ವಿಕ್ರಂ ಅಕಾಡೆಮಿಯಿಂದ ನಗರದ ಮದರ್ ಥೆರೇಸಾ ಪಿಯು ಕಾಲೇಜಿನಲ್ಲಿ ನಡೆದ ಪ್ರತಿಭಾ ಪರೀಕ್ಷೆಯ ವಿಜೇತರಿಗೆ ಬಹುಮಾನ ವಿತರಿಸಿ ಮಾತನಾಡಿ, ಮಕ್ಕಳು ನಡೆದುಬಂದ ಹಾದಿಯನ್ನು ಗುರ್ತಿಸಿ ಸಮಾಜದ ಋಣ ತೀರಿಸಲು ಮುಂದಾಗಬೇಕೆಂದರು. ವಿದ್ಯಾರ್ಥಿಗಳು ಕಲಿಕೆ ಮತ್ತು ಗ್ರಹಣ ಶಕ್ತಿಯನ್ನು ಹೆಚ್ಚಿಸಿಕೊಂಡು ಸಾಧನೆಯ ಹಾದಿಯಲ್ಲಿ ಮುನ್ನಡೆಯಬೇಕು. ವಿಕ್ರಂ ಅಕಾಡಮಿ ಜತೆಗೆ ಹೆಜ್ಜೆ ಹಾಕುವ ಮೂಲಕ ರ್‍ಯಾಂಕ್ ಪಡೆದುಕೊಂಡು ಗುರಿ ಸಾಧಿಸಲು ಮುಂದಾಗಬೇಕು. ವಿದ್ಯಾರ್ಥಿಗಳು ದೊಡ್ಡ ಕನಸನ್ನು ಕಂಡು ನನಸಾಗಿಸಿಕೊಂಡು ಉನ್ನತ ಹುದ್ದೆ ಪಡೆಯಬೇಕೆಂದು ಶಂಕರೇಗೌಡ ನುಡಿದರು. ದೇವರಾಯಸಮುದ್ರ ಮೊರಾರ್ಜಿ ದೇಸಾಯಿ ಶಾಲೆ ಪ್ರಿನ್ಸಿಪಾಲ್ ಅಬ್ದುಲ್ ನವೀದ್ ಮಾತನಾಡಿ, ವಿದ್ಯಾರ್ಥಿಗಳು ಆಂತರಿಕ ಅಭಿಪ್ರೇರಣೆ ಬೆಳೆಸಿಕೊಂಡು ಜೀವನದ ಪಾಠದೊಂದಿಗೆ ಪೋಷಕರ ಕಷ್ಟ ಕಡಿಮೆ ಮಾಡಲು ಮುಂದಾಗಬೇಕು. ಕ್ಷುಲ್ಲಕ ಕಾರಣಗಳಿಗಾಗಿ ಆತ್ಮಹತ್ಯೆ ಮಾಡಿಕೊಳ್ಳುವ ಸೂಕ್ಷ್ಮತೆಯನ್ನು ಬೆಳೆಸಿಕೊಳ್ಳದೆ ಜೀವನ ಹೇಗೆ ಬರುತ್ತದೆಯೋ ಅದನ್ನು ಯಥಾವತ್ತಾಗಿ ಸ್ವೀಕರಿಸುವ ಎದೆಗಾರಿಕೆ ಹೊಂದಬೇಕೆಂದು ತಿಳಿಸಿದರು. ಕ್ಯಾಸಂಬಳ್ಳಿ ಸಿಆರ್‌ಸಿ ರಾಮಚಂದ್ರ ಮಾತನಾಡಿ, ಮಕ್ಕಳಲ್ಲಿನ ಪ್ರತಿಭೆಯನ್ನು ಹೊರತೆಗೆಯುವುದು ಶಿಕ್ಷಕರ ಕಾಯಕವಾಗಿದ್ದು ಇದಕ್ಕೆ ಪೂರಕವಾಗಿ ವಿದ್ಯಾರ್ಥಿಗಳು ಸಮಯಹರಣ ಮಾಡದೆ ಉಪಾಧ್ಯಾಯರ ಕ್ರಮದಂತೆ ಅಧ್ಯಯನ ಮುನ್ನಡೆಸಬೇಕೆಂದರು. ವಿಕ್ರಂ ಅಕಾಡೆಮಿ ಮುಖ್ಯಸ್ಥ ಕೃಷ್ಣಾರೆಡ್ಡಿ, ಖಜಾಂಚಿ ಡಾ.ವಿಕ್ರಂ, ಮುಖಂಡ ಬೇತಮಂಗಲ ಚಲಪತಿ, ರಘುಪತಿ, ಫ್ಯಾಕಲ್ಟಿ ರಾಜಕುಮಾರ್, ಕನ್ನಡ ಉಪನ್ಯಾಸಕ ಗಂಗಾಧರ್ ಇದ್ದರು. ಫೋಟೋ ಕ್ಯಾಪ್ಷನ್: ಕೋಲಾರದ ಮದರ್‌ಥೆರೆಸಾ ಕಾಲೇಜಿನಲ್ಲಿ ನಡೆದ ವಿಕ್ರಂ ಅಕಾಡೆಮಿ ಪ್ರತಿಭಾ ಪರೀಕ್ಷೆ ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಪ್ರತಿಭಾ ಪರೀಕ್ಷೆ ಪ್ರತಿಭೆಗಳು ಪ್ರತಿಭಾ ಪರೀಕ್ಷೆಯಲ್ಲಿ ಜ್ಞಾನಪ್ರಕಾಶ್ ಶಾಲೆ ನಿಕಿಲ್(ಪ್ರಥಮ), ಸುಜಲ ಶಾಲೆ ಪ್ರಾರ್ಥನಾ(ದ್ವಿತೀಯ),ಸಬರಮತಿ ಶಾಲೆ ಸುದೀಪ್ (ತೃತೀಯ), ನರಸಾಪುರ ಸೂರ್ಯ ವಿದ್ಯಾಲಯದ ಹರಿಪ್ರಿಯ ಹಾಗೂ ನವೋದಯ ಶಾಲೆಯ ಸಾಂಘವಿ ಸಮಾಧಾನಕರ ಬಹುಮಾನ ಪಡೆದುಕೊಂಡರು.



# ಅನುಧಾನ ಬಳಕೆ ಶೇ.100 ಆಗಬೇಕು-ಹೆಚ್. ಡಿ.ಕೆ
# ಫಲಾನುಭವಿಗಳ ಆಯ್ಕೆ ಪಾರದರ್ಶಕ

**ಮೈಸೂರು:** ಕೇಂದ್ರ ಸರ್ಕಾರ ಜನರ ಕಲ್ಯಾಣಕ್ಕಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದು ಈ ಕೇಂದ್ರ ಪುರಸ್ಕೃತ ಯೋಜನೆಗಳ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಈ ಯೋಜನೆಗಳ ಅನುದಾನವನ್ನು ಶೇ 100 ಬಳಕೆ ಆಗುವ ನಿಟ್ಟಿನಲ್ಲಿ ಅಧಿಕಾರಿಗಳು ಕಾರ್ಯ ನಿರ್ವಹಿಸಬೇಕು ಎಂದು ಉಕ್ಕು ಮತ್ತು ಬೃಹತ್ ಕೈಗಾರಿಕೆ ಕೇಂದ್ರ ಸಚಿವರಾದ ಹೆಚ್ ಡಿ ಕುಮಾರಸ್ವಾಮಿ ಅವರು ತಿಳಿಸಿದರು.



ಇಂದು ಜಿಲ್ಲಾ ಪಂಚಾಯತ್‌ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಅಭಿವೃದ್ಧಿ ಹಾಗೂ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಏರ್ ಪೋರ್ಟ್ ಅಥಾರಿಟಿ ಆಫ್ ಇಂಡಿಯಾ ಅವರಿಗೆ ವಿಮಾನ ನಿಲ್ದಾಣವನ್ನು ಮೇಲ್ದರ್ಜೆಗೆ ಏರಿಸಲು ಅಗತ್ಯವಿದ್ದ ಭೂಮಿಯನ್ನು ವಶಕ್ಕೆ ಪಡೆದು ಕೆ.ಐ.ಡಿ.ಬಿ ಅವರು ಒದಗಿಸಬೇಕು. ನಾಗನಹಳ್ಳಿ ರೈಲ್ವೆ ನಿಲ್ದಾಣವನ್ನು ಮೇಲ್ದರ್ಜೆಗೆ ಏರಿಸಲು ಅಗತ್ಯವಿರುವ ಭೂಮಿ ಪಡೆಯುವ ಕಾರ್ಯವನ್ನು ಪೂರ್ಣಗೊಳಿಸುವಂತೆ ರೈಲ್ವೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಲ ಜೀವನ್ ಮಿಷನ್ ಯೋಜನೆಯು ಪ್ರತಿ ಮನೆ ಮನೆಗೂ ನಲ್ಲಿಯ ಮೂಲಕ ನೀರನ್ನು ನೀಡುವ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿದ್ದು ಎಲ್ಲಾ ಹಳ್ಳಿಗಳಿಗೂ ನೀರು ಒದಗಿಸಿ. ಕುಡಿಯುವ ನೀರಿನ ಗುಣಮಟ್ಟವನ್ನು ನಿಯಮಿತವಾಗಿ ಪರೀಕ್ಷೆ ಮಾಡಬೇಕು. ಅಮೃತ್ ಯೋಜನೆಯಡಿ ನಗರ ಪ್ರದೇಶಗಳಲ್ಲಿ ಶುದ್ಧ ಕುಡಿಯುವ ನೀರಿನ ಪೂರೈಕೆಗೆ ಅನುಧಾನ ಬಿಡುಗಡೆ ಆಗಿದ್ದು ನಿಗದಿತ ಅವಧಿಯೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸಿ ನೀರಿನ ಪೂರೈಕೆ ಮಾಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಪ್ರಧಾನಮಂತ್ರಿ ಮುದ್ರಾ ಯೋಜನೆಯಡಿ ಉತ್ಪಾದನೆ, ವ್ಯಾಪಾರ ಸೇವೆ ಹಾಗೂ ಕೃಷಿಗೆ 10 ಲಕ್ಷದವರೆಗೆ ಸಾಲ ನೀಡಲಾಗುತ್ತಿದೆ. ಇದರಲ್ಲಿ ಜಿಲ್ಲೆಗೆ ಈ ವರ್ಷ 2902 ಕೋಟಿ ಸಾಲ ನೀಡಲಾಗಿರುವ ಕುರಿತು ಲೀಡ್ ಬ್ಯಾಂಕ್ ಮ್ಯಾನೇಜರ್ ಇಂದ ಮಾಹಿತಿ ಪಡೆದ ಅವರು ಈ ಯೋಜನೆ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿದೆ ಎಂದರು.

ರೈತರು ದೇಶದ ಬೆನ್ನೆಲುಬು. ಅತಿಯಾದ ಮಳೆಯಿಂದ ಆದ ಬೆಳೆ ಹಾನಿಗೆ ಪರಿಹಾರವನ್ನು ಅರ್ಹರಿಗೆ ವಿತರಣೆ ಮಾಡಬೇಕು. ಪ್ರಧಾನ ಮಂತ್ರಿ ಪಸಲ್ ಭೀಮಾ ಯೋಜನೆಯಡಿ ಬೆಳೆ ವಿಮೆ ಮಾಡಿಸಲು ರೈತರಿಗೆ ಉತ್ತೇಜನ ನೀಡಬೇಕು. ಇದರಿಂದ ಬೆಳೆ ನಷ್ಟ ಉಂಟಾದರೆ ಬೆಳೆ ಪರಿಹಾರ ಪಡೆಯಲು ಸಾಧ್ಯವಾಗುತ್ತದೆ. ಹತ್ತಿ ಬೆಳೆಗೆ ಉತ್ತಮ ತಳಿಯ ಬಿತ್ತನೆ ಬೀಜ ಬಂದಿದ್ದು, ರಾಯಚೂರು ಭಾಗದಲ್ಲಿ ಬಿತ್ತನೆ ಆಗುತ್ತಿದೆ. ಇದರಿಂದ ಶೇಕಡಾ 50% ಉತ್ಪಾದನೆ ಹೆಚ್ಚಾಗುತ್ತದೆ. ಈ ಬಗ್ಗೆ ಅಧ್ಯಯನ ಮಾಡಿ ಹೆಚ್.ಡಿ ಕೋಟೆ ಭಾಗದ ಜನರಿಗೆ ಮಾಹಿತಿ ನೀಡುವಂತೆ ಕೃಷಿ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು. ಜಾನುವಾರುಗಳಿಗೆ ನಿಗದಿತ ಅವಧಿಯಲ್ಲಿ ಕಾಲುಬಾಯಿ, ಚಪ್ಪೆ ರೋಗದ ಲಸಿಕೆ ನೀಡಬೇಕು. ಮೇವು ಕಿಟ್‌ಗಳ ವಿತರಣೆ ಮಾಡುವ ಮೂಲಕ ಜಾನುವಾರು ಮೇವು. ಕೊರತೆ ಆಗದಂತೆ ನೋಡಿಕೊಳ್ಳಬೇಕು. ಬೇರೆ ರಾಜ್ಯಗಳಿಗೆ ಹೋಲಿಕೆ ಮಾಡಿದರೆ ಕರ್ನಾಟಕ ರಾಜ್ಯದಲ್ಲಿ ಅರಣ್ಯ ಪ್ರದೇಶ ಕಡಿಮೆ ಆಗುತ್ತಿದೆ ಎಂದು ಸರ್ವೆಗಳು ಹೇಳುತ್ತಿವೆ. ಆದರೆ ಸಾಮಾಜಿಕ ಅರಣ್ಯ ಇಲಾಖೆ ವತಿಯಿಂದ ಪ್ರತಿ ವ?ರ್ 1 ಕೋಟಿಯಷ್ಟು ಗಿಡಗಳನ್ನು ನೀಡುತ್ತಾ ಇದ್ದಾರೆ ಆದರೆ ಇವುಗಳ ಪೋ?ಣೆ ಆಗಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪ್ರಮುಖವಾಗಿ ನಿರುದ್ಯೋಗ ಸಮಸ್ಯೆ ಕಾಡುತ್ತಿದೆ. ಅಂತಹ ಯುವಕರಿಗೆ ಕೇಂದ್ರ ಸರ್ಕಾರದ ಹಲವು ಯೋಜನೆಗಳ ಮೂಲಕ ಸೌಲಭ್ಯ ಗಳನ್ನು ಕಲ್ಪಿಸಿ ಸ್ವಯಂ ಉದ್ಯೋಗ ಮಾಡಲು ಅಧಿಕಾರಿಗಳು ಅವಕಾಶ ಕಲ್ಪಿಸಬೇಕು ಎಂದರು.

ಚಾಮರಾಜನಗರ ಲೋಕಸಭಾ ಕ್ಷೇತ್ರದ ಸಂಸದರಾದ ಸುನೀಲ್ ಬೋಸ್ ಅವರು ಮಾತನಾಡಿ ಚಾಮರಾಜನಗರ ದಿಂದ ಮೈಸೂರು ರೈಲ್ವೆ ಮಾರ್ಗವನ್ನು ಮೇಲ್ದರ್ಜೆ ಗೆ ಏರಿಸಿ ವಿದ್ಯುದೀಕರಣ ಮಾಡಲು ಅಗತ್ಯವಾದ ಎನ್ ಓ ಸಿ ಯನ್ನು ಪಡೆದು ಕಾರ್ಯ ನಿರ್ವಹಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಹೆಚ್ .ಡಿ ಕೋಟೆಯಿಂದ ಬಾವಲಿ ರಸ್ತೆಯಲ್ಲಿ ವಾಹನ ದಟ್ಟಣೆ ಹೆಚ್ಚು ಇದ್ದು ಈಗಿರುವ ಎಸ್ ಹೆಚ್ ರಸ್ತೆಯನ್ನು ಎನ್. ಹೆಚ್ ರಸ್ತೆ ದರ್ಜೆಗೆ ಏರಿಸಲು ಪ್ರಸ್ತಾವನೆ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಮೃತ್ ಯೋಜನೆಯಡಿ ಪೈಪ್ ಲೈನ್ ಕಾಮಗಾರಿಗಳನ್ನು ವೈಜ್ಞಾನಿಕವಾಗಿ ಮಾಡಬೇಕು. ಕೆಲವು ಕಡೆ ಪೈಪ್ ಲೈನ್ ಮೇಲೆ ಮಾಡಿರುತ್ತಾರೆ. ಕೆಲವು ಕಡೆ ಪೈಪ್ ಲೈನ್ ಗುಂಡಿಗಳನ್ನು ಸರಿಯಾಗಿ ಮುಚ್ಚಿರುವುದಿಲ್ಲ ಎಂದು ಸಾರ್ವಜನಿಕರಿಂದ ದೂರುಗಳು ಬರುತ್ತಿವೆ. ಟೆಂಡರ್ ಪಡೆದವರು 5 ವರ್ಷ ಅದರ ಮೆಂಟೇನ್ಸ್ ಮಾಡಬೇಕು ಈ ಕುರಿತು ಅಧಿಕಾರಿಗಳು ಪರಿಶೀಲನೆ ನಡೆಸಬೇಕು.

ಹುಣಸೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ ಡಿ ಹರೀಶ್ ಗೌಡ ಅವರು ಮಾತನಾಡಿ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಫಲಾನುಭವಿಗಳ ಆಯ್ಕೆ ಮಾಡಿ ಅಪ್ರೂವ್ ಆಗಿದ್ದರೂ ಸಹ ಬ್ಯಾಂಕ್ ಗಳು ಸಾಲ ನೀಡುತ್ತಿಲ್ಲ. ಲೀಡ್ ಬ್ಯಾಂಕ್ ಮ್ಯಾನೇಜರ್ ಈ ನಿಟ್ಟಿನಲ್ಲಿ ಪರಿಶೀಲಿಸಿ ಸಾಲ ನೀಡುವಂತೆ ಕ್ರಮವಹಿಸಬೇಕು ಎಂದರು.

ಜಿಲ್ಲಾಧಿಕಾರಿಗಳಾದ ಜಿ ಲಕ್ಷ್ಮೀಕಾಂತ ರೆಡ್ಡಿ ಅವರು ಮಾತನಾಡಿ ಏರ್ಪೋರ್ಟ್ ಅಥಾರಿಟಿ ಅವರು 500 ಕೋಟಿಗಳ ವೆಚ್ಚದಲ್ಲಿ ಏರ್ಪೋರ್ಟ್ ಬೈಪಾಸ್ ರಸ್ತೆ ನಿರ್ಮಿಸಲು ನ್ಯಾಶನಲ್ ಹೈವೇ ಅಥಾರಿಟಿ ಅವರಿಗೆ ನೀಡಲು ಇದ್ದಾರೆ. ಆದರೆ ಇದರ ವೆಚ್ಚ 800 ಕೋಟಿ ಆಗುವುದಾಗಿ ವರದಿ ನೀಡಿರುತ್ತಾರೆ. ಏರ್ ಪೋರ್ಟ್ ಆಫ್ ಅಥಾರಿಟಿ ಇಂಡಿಯಾ ಅವರಿಗೆ ಅಗತ್ಯವಿದ್ದ ಭೂಮಿಯಲ್ಲಿ ಈಗಾಗಲೇ 150 ಎಕರೆ ಕೆ.ಐ.ಡಿ.ಬಿ ವಶಕ್ಕೆ ಪಡೆದಿದ್ದು ಉಳಿದ 40 ಎಕರೆ ಪಡೆಯಲು ಪ್ರಗತಿ ಹಂತದಲ್ಲಿ ಇದೆ. ಸಭೆಯಲ್ಲಿ ಮೈಸೂರು ಕೊಡಗು ಲೋಕಸಭಾ ಕ್ಷೇತ್ರದ ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ ಹರೀಶ್ ಗೌಡ, ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀವತ್ಸ, ಜಿಲ್ಲಾಧಿಕಾರಿಗಳಾದ ಜಿ ಲಕ್ಷ್ಮೀಕಾಂತ ರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಕೆ ಎಂ ಗಾಯತ್ರಿ, ಮೈಸೂರು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು

## ಕಿವುಡ-ಮೂಗ ಬಾಲಕನಿಗೆ ದೃಷ್ಟಿ: ನಗರದ ವೈದ್ಯ ದಂಪತಿ ಹೊಸ ವರ್ಷದ ಉಡುಗೊರೆ

**ಮೈಸೂರು:** ಕಣ್ಣಿನ ಸಮಸ್ಯೆಯಿಂದ ಬಳಲುತ್ತಿದ್ದ 14 ವರ್ಷದ ಕಿವುಡ ಮತ್ತು ಮೂಗ ಬಾಲಕನ ದೃಷ್ಟಿ ಪುನರ್ ಸ್ಥಾಪಿಸುವ ಮೂಲಕ ನಗರದ ಶಸ್ತ್ರಚಿಕಿತ್ಸಕ ದಂಪತಿ ಆತನಿಗೆ ನಿಜವಾದ ಹೊಸ ವರ್ಷದ ಉಡುಗೊರೆಯನ್ನು ನೀಡಿದ್ದಾರೆ. ಸಂಕೀರ್ಣ ಶಸ್ತ್ರಚಿಕಿತ್ಸೆಯ ಮೂಲಕ ಆ ಬಾಲಕ ಇದೀಗ ಬಲಗಣ್ಣಿನ



ದೃಷ್ಟಿಯನ್ನು ಮರಳಿ ಪಡೆದಿದ್ದಾನೆ. ನಗರದ ಉಷಾ ಕಿರಣ್ ಕಣ್ಣಿನ ಆಸ್ಪತ್ರೆಯ ಡಾ.ಕೆ.ವಿ.ರವಿಶಂಕರ್ ಮತ್ತು ಡಾ.ಉಮಾ ರವಿಶಂಕರ್ ದಂಪತಿ ಅವರು ಈ ಸಂಕೀರ್ಣ ಶಸ್ತ್ರಚಿಕಿತ್ಸೆ ನಡೆಸಿದ್ದಾರೆ. ಹುಟ್ಟಿನಿಂದಲೇ ಬಲಗಣ್ಣಿನ ಕಣ್ಣಿನ ಪೊರೆಯ ಸಮಸ್ಯೆ ಎದುರಿಸುತ್ತಿದ್ದ ಬಡ ಕುಟುಂಬದ ಮನು ಎಂಬ ಹುಡುಗ ಕಡಿಮೆ ಬುದ್ಧಿಮತ್ತೆಯ ಸಮಸ್ಯೆ ಕೂಡಾ ಎದುರಿಸುತ್ತಿದ್ದಾನೆ. ಆತನ ಕಣ್ಣಿನ ಕಾರ್ನಿಯದಲ್ಲಿ ಹರಿತವಾದ ಗಾಯ ಕೂಡಾ ಇದ್ದು, ಬಲಗಣ್ಣು ವೇಗವಾಗಿ ಅದುರುವ ಸವಾಲು ಕೂಡಾ ಆತ ಎದುರಿಸುತ್ತಿದ್ದ. ಪ್ರಾಥಮಿಕ ಹಿಂಭಾಗದ ಕ್ಯಾಪ್ಸುಲೋಟಮಿಯೊಂದಿಗೆ ಮಡಚಬಹುದಾದ IOL implantation , ಜೊತೆ , ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆ ಮತ್ತು ಮುಂಭಾಗದ ವಿಟ್ರೆಕ್ಟಮಿ ಮೂಲಕ ಆತನ ಕಣ್ಣಿನ ದೃಷ್ಟಿ ಸಮಸ್ಯೆ ಸರಿಪಡಿಸಲಾಗಿದೆ ಎಂದು ಡಾ. ರವಿಶಂಕರ್ ತಿಳಿಸಿದರು. ನಗರದ ಶ್ರೀಮತಿ ಚಿತ್ರಾ ವೆಂಕಟ್ರಮಣಿ ಅವರು ಈ ಶಸ್ತ್ರಚಿಕಿತ್ಸೆಯ ಹೆಚ್ಚಿನ ವೆಚ್ಚವನ್ನು ಭರಿಸಿದ್ದಾರೆ ಎಂದು ಡಾ. ರವಿಶಂಕರ್ ವಿವರಿಸಿದರು.

## ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ನ 44ನೇ ಪ್ರಾಂತ ಸಮ್ಮೇಳನ

**ಶಿವಮೊಗ್ಗ:** ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ನ 44ನೇ ಪ್ರಾಂತ ಸಮ್ಮೇಳನ 2025 ನೇ ಜನವರಿ 31 ಫೆಬ್ರವರಿ 1,2 ರಂದು ಶಿವಮೊಗ್ಗ ನಗರದ ಅಲ್ಲಮಪ್ರಭು ಮೈದಾನದಲ್ಲಿ ( ಫ್ರೀಡಂ ಪಾರ್ಕ್ ) ಜರುಗಲಿದೆ. ಈ 44ನೇ ಪ್ರಾಂತ ಸಮ್ಮೇಳನದ ಕಾರ್ಯಾಲಯ ಉದ್ಘಾಟನಾ ಸಮಾರಂಭ ಇಂದು ಬೆಳಗ್ಗೆ 09.30 ಗಂಟೆಗೆ ಎಬಿವಿಪಿ ಕಾರ್ಯಾಲಯದಲ್ಲಿ ಜರುಗಿತ್ತು. ಈ ಸಂದರ್ಭದಲ್ಲಿ ಉದ್ಘಾಟಕರಾಗಿ 44ನೇ ಪ್ರಾಂತ ಸಮ್ಮೇಳನದ ಸ್ವಾಗತ ಸಮಿತಿಯ ಅಧ್ಯಕ್ಷರಾದ ಶ್ರೀಯುತ ಎಸ್.ಎನ್ ನಾಗರಾಜ್ ರವರು ( ರಾಷ್ಟ್ರೀಯ ಶಿಕ್ಷಣ ಸಮಿತಿ, ಕಾರ್ಯದರ್ಶಿಗಳು), ಆಗಮಿಸಿದ್ದರು ಹಾಗೂ ಉಪಾಧ್ಯಕ್ಷರಾದ ಅಮೃತ್ ನೋನಿ ಶ್ರೀನಿವಾಸ್ ರವರು, ಪ್ರಧಾನ ಕಾರ್ಯದರ್ಶಿಗಳಾದ ಡಾ. ಹೇಮಂತ್ ರವರು, ವಿದ್ಯಾರ್ಥಿ ಪರಿಷತ್ ಪ್ರಾಂತ ಅಧ್ಯಕ್ಷರಾದ ಡಾ. ಸತೀಶ್ ಎಚ್ ಕೆ ರವರು ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಸ್ವಾಗತ ಸಮಿತಿಯ ಸದಸ್ಯರಾದ ಶ್ರೀ ಎಸ್.ಕೆ ಶೇಷಾಚಲ, ಡಾ. ತೇಜಸ್ವಿ ಟಿ.ಎಸ್, ಶ್ರೀ ಜಿ.ಆರ್ ವಾಸುದೇವ್, ಶ್ರೀ ಬಿ .ಗೋಪಿನಾಥ್, ಶ್ರೀ ಹರ್ಷ ಕಾಮತ್, ಶ್ರೀಮತಿ ಪವಿತ್ರ ಮುರುಳಿ , ಶ್ರೀ ಬಿ ಎಲ್ ನೀಲಕಂಠ ಮೂರ್ತಿ, ಶ್ರೀ ಕಿರಣ್ ಕುಮಾರ್ ಕೆ, ಭರತ್. ಎಸ್, ಶ್ರೀ ಎಂ. ಎಸ್ ಅನಂತದತ್ತ, ಶ್ರೀ ಫಣೀಶ್, ಶ್ರೀ ಲೋಕೇಶ್ವರ್ ರಾವ್ ಕಾಳೆ, ಡಾ. ರಂಜನಿ ಬಿದರಹಳ್ಳಿ ರವರು ಉಪಸ್ಥಿತರಿದ್ದರು ಹಾಗೂ ಎಬಿವಿಪಿ ಹಿರಿಯ ಕಾರ್ಯಕರ್ತರಾದ ಶ್ರೀ ಆರ್. ಕೆ ಸಿದ್ಧರಾಮಣ್ಣ, ಶ್ರೀ ಗಿರೀಶ್ ಪಟೇಲ್, ಶ್ರೀ ಧರ್ಮಪ್ರಸಾದ್, ಶ್ರೀ ವಿವೇಕ್ ನಾಯಕ್, ಶ್ರೀ ಹರ್ಷ, ಡಾ. ರವಿ ಕಿರಣ್, ಶ್ರೀ ಶಿವಕುಮಾರ್ ಡಿ.ಎಸ್ ಇನ್ನಿತರರು ಉಪಸ್ಥಿತರಿದ್ದರು. ಈ ಕಾರ್ಯಕ್ರಮದ ಸಂಚಲನೆಯನ್ನು ಸ್ವಾಗತ ಸಮಿತಿಯ ಸಂಚಾಲಕರಾದ ಶ್ರೀ ರಾಜೇಶ್ ಶಾಸ್ತ್ರಿ ರವರು ನೆಡೆಸಿಕೊಟ್ಟರು. ಈ ಕಾರ್ಯಕ್ರಮವನ್ನು ವಿದ್ಯಾರ್ಥಿ ಪರಿಷತ್ ಪ್ರಾಂತ ಕಾರ್ಯದರ್ಶಿಗಳಾದ ಪ್ರವೀಣ್ ಎಚ್ .ಕೆ ನಿರೂಪಿಸಿದರು.

## ಅಂಗನವಾಡಿ ಹುದ್ದೆಗೆ ಅರ್ಜಿ

**ರಾಮನಗರ:** ಹಾರೋಹಳ್ಳಿ ತಾಲ್ಲೂಕಿನಲ್ಲಿ ಅಂಗನವಾಡಿ ಕಾರ್ಯಕರ್ತೆಯರ 31 ಮತ್ತು ಅಂಗನವಾಡಿ ಸಹಾಯಕಿಯರ 10 ಅಭ್ಯರ್ಥಿಗಳ ಅರ್ಜಿಗಳು ಅಪೂರ್ಣಗೊಂಡಿವೆ. ಆದ್ದರಿಂದ ಅಪೂರ್ಣಗೊಂಡ ಅರ್ಜಿಗಳನ್ನು 2025ರ ಜನವರಿ 5ರ ದಿನಾಂಕವನ್ನು ನಿಗಧಿಪಡಿಸಿ ಬಾಕಿ ಇರುವಚಿತಹ 4 ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಆನ್‌ಲೈನ್ ಮೂಲಕ ಮತ್ತೊಮ್ಮೆ ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗೆ ವೆಬ್ ಸೈಟ್ ವಿಳಾಸ https://karnemakaone.kar.nic.in/abcd/ಅನ್ನು ಸಂಪರ್ಕಿಸಬಹುದು.

## ಗ್ರಾಮಗಳ ಮೂಲಭೂತ ಸೌಕರ್ಯಕ್ಕೆ ಹೆಚ್ಚಿನ ಒತ್ತು

**ಚಾಮರಾಜನಗರ:** ಭಾನುವಾರ-ತಾಲೂಕಿನ ನಾಗವಳ್ಳಿ, ಹೋಡರಬಾಳುಗ್ರಾಮಗಳಲ್ಲಿ ಸಿಸಿ ರಸ್ತೆ ಚರಂಡಿ. ಅಭಿವೃದ್ಧಿ ಕಾಮಗಾರಿಗೆಎಂಎಸ್‌ಐಎಲ್ ಅಧ್ಯಕ್ಷರು,ಹಾಗೂ ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರು ಭೂಮಿಪೂಜೆ ನೆರವೇರಿಸಿದರು. ನಂತರ ಮಾತನಾಡಿದ ಅವರು ನಾಗವಳ್ಳಿ ಗ್ರಾಮದ ಪರಿಶಿಷ್ಟ ಜಾತಿ ಬಡಾವಣೆಯಲ್ಲಿ 50ಲಕ್ಷರೂ. ಹಾಗೂ ಹೊಂಡರಬಾಳು ಗ್ರಾಮದ ಪರಿಶಿಷ್ಟ ಜಾತಿ ಬಡಾವಣೆಯಲ್ಲಿ 40ಲಕ್ಷರೂ. ವೆಚ್ಚದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಸಿಮೆಂಟ್ ಕಾಂಕ್ರಿಟ್ ರಸ್ತೆ ಹಾಗೂ ಚರಂಡಿ ನಿರ್ಮಾಣ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಲಾಗಿದೆ.

ತಮ್ಮ ಕೇತ್ರವ್ಯಾಪ್ತಿಯಲ್ಲಿ ಜನತೆಯ ಆಶಯಕ್ಕೆ ಬದ್ಧರಾಗಿ ಗ್ರಾಮಗಳಲ್ಲಿ ರಸ್ತೆ ಚರಂಡಿ, ಸಮುದಾಯ ಭವನ ಆಶ್ರಯಮನೆ ಗಂಗಾ ಕಲ್ಯಾಣ ಯೋಜನೆ ಸೇರಿದಂತೆ ಸರಕಾರ ಮಂಜೂರುಮಾಡುವ ಅನುದಾನ ಹಾಗೂ ಸೌಲಭ್ಯಗಳನ್ನು ಜನರಿಗೆ ಪ್ರಾಮಾಣಿಕವಾಗಿ ತಲುಪಿಸುವ ಕೆಲಸ ಮಾಡಲಾಗುತ್ತಿದೆ, ಕಾಮಗಾರಿ ನಿರ್ವಹಣೆ ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿಗೆ ಒತ್ತು ನೀಡಬೇಕು ಎಂದು ತಿಳಿಸಿದರು. ನಾಗವಳ್ಳಿ ಗ್ರಾಮ



ಪಂಚಾಯಿತಿ ಅಧ್ಯಕ್ಷೆ ಗೀತಾಶ್ರೀನಿವಾಸ್, ಗ್ರಾ,ಪಂಸದಸ್ಯೆ ಚಂದ್ರಕಲಾ, ತಾ,ಪಂ ಮಾಜಿಅಧ್ಯಕ ಚಿಕ್ಕಮಹದೇವ್, ನಾಗಯ್ಯನಾಗವಳಿ,ಲೋಕೇಶ್,ರಮೇಶ್,ಮಹೇಶ್ ಮೆಡಿಕಲ್, ಸೋಮೇಶ್ವರ್, ನಿರ್ಮಿತಿ ಕೇಂದ್ರದ ಇಂಜಿನಿಯರ್ ಬೀಮ್‌ಸಾಗರ್, ಸೇರಿದಂತೆ ಗ್ರಾಮಸ್ಥರು ಮುಖಂಡರು ಹಾಜರಿದ್ದರು.

## ಬೆಂಗಳೂರಿನಲ್ಲಿ ಬೃಹತ್ ಕ್ಯಾಲಿಪರ್ಸ್ ಜೋಡಣಾ ಶಿಬಿರ

**ಚಾಮರಾಜನಗರ:** ಪೋಲಿಯೋ ಪೀಡಿತರಿಗೆ ಉಚಿತ ಕೃತಕ ಕಾಲು ಮತ್ತು ಮುಂಗೈ (ಕ್ಯಾಲಿಪರ್ಸ್) ಜೋಡಣಾ ಶಿಬಿರಕ್ಕೆ ತೆರಳುತ್ತಿರುವ ಜಿಲ್ಲೆಯ ಫಲಾನುಭವಿಗಳ ವಾಹನಕ್ಕೆ ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಚಾಲನೆ ನೀಡಿದರು.

ಪೋಲಿಯೋ ಪೀಡಿತರಿಗಾಗಿ ಕೃತಕ ಕಾಲು ಮತ್ತು ಮುಂಗೈಗಳನ್ನು ಉಚಿತವಾಗಿ ನೀಡಲಾಗುತ್ತಿದ್ದು, ಇದಕ್ಕಾಗಿ ಜೈಪುರದ ಶ್ರೀ ಭಗವಾನ್ ಮಹಾವೀರ ವಿಕಲಾಂಗ ಸಹಾಯ ಸಮಿತಿ ಹಾಗೂ ಬೆಂಗಳೂರು ರೋಟರಿ ಸಂಸ್ಥೆಯ ವತಿಯಿಂದ ಬೆಂಗಳೂರಿನ ಶಿವಾಜಿನಗರದ ಇನ್‌ಫೆಂಟ್ರಿ ರಸ್ತೆಯಲ್ಲಿ ಆಯೋಜಿಸಲಾಗಿರುವ ಬೃಹತ್ ಜೋಡಣಾ ಶಿಬಿರಕ್ಕೆ ಕ್ಯಾಲಿಪರ್ಸ್ ಅಗತ್ಯವಿರುವ ಜಿಲ್ಲೆಯ ವಿಶೇಷಚೇತನ ಫಲಾನುಭವಿಗಳನ್ನು ಕರೆದೊಯ್ಯಲಾಗುತ್ತಿರುವ ಬಸ್‌ಗೆ ನಗರದ ರೋಟರಿ ಸಂಸ್ಥೆಯ ಮುಂಭಾಗದಲ್ಲಿಂದು



ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಹಸಿರು ನಿಶಾನೆ ತೋರಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ನಗರದ ವಿಕಲಚೇತನರ ಪುನರ್ವಸತಿ ಕೇಂದ್ರ, ಗ್ರೀನ್ ಸಂಸ್ಥೆ ಹಾಗೂ ಚಾಮರಾಜನಗರ ರೋಟರಿ ಸಂಸ್ಥೆಯ ಸಹಯೋಗದಲ್ಲಿ ಬೃಹತ್ ಜೋಡಣಾ ಶಿಬಿರಕ್ಕೆ ಚಾಮರಾಜನಗರ ಜಿಲ್ಲೆಯಿಂದ 55 ಮಂದಿ ವಿಶೇಷಚೇತನ ಫಲಾನುಭವಿಗಳು ಹೊರಡಲು ವ್ಯವಸ್ಥೆ ಮಾಡಲಾಗಿದ್ದ ವಾಹನಕ್ಕೆ ಶಾಸಕರು ಚಾಲನೆ ನೀಡಿ ಶುಭ ಹಾರೈಸಿದರು.

ಜಿಲ್ಲಾ ಅಂಗವಿಕಲ ಕ್ಷೇಮಾಭಿವೃದ್ಧಿ ಸಮಿತಿ ಅಧ್ಯಕ್ಷರಾದ ಎಂ. ರಮೇಶ್, ಡಿಡಿಆರ್‌ಸಿ ನೋಡಲ್ ಅಧಿಕಾರಿ ವೆಂಕಟೇಶ್, ರೋಟರಿ ಅಧ್ಯಕ್ಷರಾದ ರಾಮಸಮುದ್ರ ನಾಗರಾಜು, ಕಾರ್ಯದರ್ಶಿ ಹೆಚ್.ಎಂ. ಗುರುಸ್ವಾಮಿ, ಕಾಗಲವಾಡಿ ಚಂದ್ರು, ಕೆಂಪನಪುರ ಸಿದ್ದರಾಜು, ಕೆ.ಎಂ.ಮಹದೇವಸ್ವಾಮಿ, ಅಬ್ದುಲ್ ಅಜೀಜ್ ದೀನಾ, ಗ್ರೀನ್ ಸಂಸ್ಥೆ ಕಾರ್ಯದರ್ಶಿ ಮಹದೇವಸ್ವಾಮಿ, ಇತರರು ಇದೇ ಸಂದರ್ಭದಲ್ಲಿ ಇದ್ದರು.

# ಮಾಜಿ ಸಿಎಂಗಳ ಮಕ್ಕಳಿಗೆ ಉಪ ಚುನಾವಣೆಯಲ್ಲಿ ಪಾಠ

**ಪಿರಿಯಾಪಟ್ಟಣ:** ಸರ್ಕಾರ ಗ್ಯಾರಂಟಿ ಯೋಜನೆಗಳ ನೆಪವೊಡ್ಡಿ ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕೆಲಸ ನಿಲ್ಲಿಸಿಲ್ಲ, ಬಡವರ ಯೋಜನೆಗಳ ಬಗ್ಗೆ ಅಪಹಾಸ್ಯ ಮಾಡಿದ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಹಾಗೂ ಬಸವರಾಜ್ ಬೊಮ್ಮಾಯಿಯವರ ಮಕ್ಕಳನ್ನು ಸೋಲಿಸುವ ಮೂಲಕ ಜನತೆ ಅವರಿಗೆ ತಕ್ಕ ಪಾಠ ಕಲಿಸಿದ್ದಾರೆ ಎಂದು ಪಶುಪಾಲನಾ ಹಾಗೂ ರೇಷ್ಮೆ ಖಾತೆ ಸಚಿವ ಕೆ.ವೆಂಕಟೇಶ್ ತಿಳಿಸಿದರು.

ತಾಲೂಕಿನ ಚಪ್ಪರದಹಳ್ಳಿ, ಕಣಗಾಲ್ -ಹೊನ್ನಾಪುರ, ಮುತ್ತಿನ ಮುಳುಸೋಗೆ, ಆವರ್ತಿ, ಬೈಲುಕುಪ್ಪೆ ಹಾಗೂ ಹುಣಸೆಕುಪ್ಪೆ ಗ್ರಾಮಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದರು.

ಕಾಂಗ್ರೆಸ್ ಪಕ್ಷ ರಾಜ್ಯದಲ್ಲಿ ಜನಪರ ಕಲ್ಯಾಣಕ್ಕಾಗಿ ಜಾರಿ ಮಾಡಿರುವ ಗ್ಯಾರಂಟಿ ಯೋಜನೆಗಳ ಬಗ್ಗೆ ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ನಾಯಕರು ಆರಂಭದಿಂದಲೂ ಅಪಸ್ವರ ಹಾಗೂ ಟೀಕೆ ಮಾಡುತ್ತಲೇ ಬರುತ್ತಿದ್ದಾರೆ. ನಾವು ಈ ಯೋಜನೆ ಜಾರಿ ಮಾಡಿರುವುದು ಬಡ ಹಾಗೂ ದೀನ ದಲಿತರಿಗಾಗಿ, ಈ ಯೋಜನೆಗಳು ಬಡಜನರ ಕಣ್ಣೀರು ಒರೆಸಲು ಸಾಕಾರಿಯಾಗಿವೆ ಇಂಥ



ಬಡ ಹಾಗೂ ದೀನ ದಲಿತರ ಉಪಯೋಗಕ್ಕಾಗಿ ಜಾರಿಗೊಳಿಸಿದ ಯೋಜನೆಗಳ ಬಗ್ಗೆ ಲಘುವಾಗಿ ಮಾತನಾಡಿದ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಹಾಗೂ ಬಸವರಾಜ್ ಬೊಮ್ಮಾಯಿ ಅವರ ಮಕ್ಕಳನ್ನು ಇತ್ತೀಚೆಗೆ ಚನ್ನಪಟ್ಟಣ ಹಾಗೂ ಶಿಗ್ಗಾಂವಿ ಉಪ ಚುನಾವಣೆಯಲ್ಲಿ ಸೋಲಿಸುವ ಮೂಲಕ ಕ್ಷೇತ್ರದ ಜನತೆ ಇವರಿಗೆ ತಕ್ಕ ಪಾಠ ಕಲಿಸಿದ್ದಾರೆ ನಮ್ಮ ಸರ್ಕಾರ ಇರುವವರೂ ಈ ಯೋಜನೆಗಳು ಇರುತ್ತವೆ ಬಿಜೆಪಿ-ಜೆಡಿಎಸ್ ಪಕ್ಷದ ನಾಯಕರು ಎಷ್ಟೇ ಕಿರುಚಿದರೂ ನಮ್ಮ ಸರ್ಕಾರದ ಗ್ಯಾರಂಟಿ ಯೋಜನೆಗಳು ನಿಲ್ಲಲ್ಲ, ಸಿಎಂ ಸಿದ್ದರಾಮಯ್ಯ ಆಗಲಿ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆಗಲಿ ಗ್ಯಾರಂಟಿ ಯೋಜನೆಗೆ ಕತ್ತರಿ ಹಾಕುವ ಬಗ್ಗೆ ಆಗಲಿ ಎಲ್ಲಿಯೂ ಮಾತನಾಡಿಲ್ಲ ಎಂದರು.

ತಾಲ್ಲೂಕಿನ ಕಣಗಾಲ್ ನಿಂದ ಧರ್ಮಸ್ಥಳಕ್ಕೆ ಹೊಸದಾಗಿ ಐರಾವತ ಬಸ್ ವ್ಯವಸ್ಥೆ ಕಲ್ಪಿಸಲಾಗುತ್ತಿದೆ ನಮ್ಮ ಸರ್ಕಾರ ಹೊಸದಾಗಿ ಬಂದ ನಂತರ ತಾಲ್ಲೂಕಿಗೆ 30 ಹೊಸ ಬಸ್ಸನ್ನು ನೀಡಲಾಗಿ ತಾಲ್ಲೂಕಿನ ಪ್ರತಿ ಗ್ರಾಮಕ್ಕೂ ಬಸ್ ಸೌಲಭ್ಯ ನೀಡಲಾಗಿದ್ದು, ಸರ್ಕಾರ ಸುಮ್ಮಸುಮ್ಮನೆ ಅನುದಾನ ಬಿಡುಗಡೆ ಮಾಡುವುದಿಲ್ಲ, ಗ್ರಾಮಗಳಿಗೆ ಯಾವುದಾದರೂ ಸರ್ಕಾರದ ಯೋಜನೆಗಳು ಹಾಗೂ ಅಭಿವೃದ್ಧಿ ಕಾರ್ಯಗಳು ಬಂದರೆ ಅವುಗಳನ್ನು ಎಲ್ಲರೂ ಖುಷಿಯಿಂದ ಸ್ವಾಗತಿಸಿ ಗ್ರಾಮಗಳನ್ನು ಅಭಿವೃದ್ಧಿ ಪಡಿಸಲು ಸಹಕರಿಸಿ ಅದು ಬಿಟ್ಟು ತಾವುಗಳು ಗೊಂದಲ ಕಿತಾಪತಿ ಮಾಡಿ ಅಭಿವೃದ್ಧಿ ಕಾರ್ಯಗಳಿಗೆ ತಡೆಯೊಡ್ಡಬೇಡಿ ಎಲ್ಲರೂ ಮುಕ್ತಕಂಠದಿಂದ ಸ್ವಾಗತಿಸಿ ಗ್ರಾಮಗಳ ಅಭಿವೃದ್ಧಿಗೆ ಸಹಕರಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ತಹಸಿಲ್ದಾರ್ ನಿಸರ್ಗ ಪ್ರಿಯಾ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸುನಿಲ್ ಕುಮಾರ್, ವಿವಿಧ ಇಲಾಖೆಗಳ ಅಧಿಕಾರಿಗಳಾದ ಡಾ. ಸೋಮಯ್ಯ, ಪ್ರಸಾದ್, ಮಲ್ಲಿಕಾರ್ಜುನ್, ಗುರು ಬಸವರಾಜ್, ಪ್ರಸಾದ್, ಮಮತಾ, ಪದ್ಮಿನಿ, ಕುಮಾರ್, ಕೃಷ್ಣೇಗೌಡ, ಕೃಷ್ಣಮೂರ್ತಿ, ಮಂಜುನಾಥ್, ಮುಖಂಡರಾದ ಕೆ.ಹೊಲದಪ್ಪ, ಭುಜಂಗ, ಶ್ರೀನಿವಾಸ್ , ಸಮೀವುಲ್ಲಾ ಖಾನ್, ರಹಮತ್ ಜಾನ್ ಬಾಬು, ಮೋಹನ್ ಕುಮಾರ್, ಪ್ರಕಾಶ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಸಹಕಾರ ಸಂಘದ ನೂತನ ಕಚೇರಿ ಉದ್ಘಾಟನೆ



**ಮಂಡ್ಯ** : ಗ್ರಾಮಾಂತರ ಪ್ರದೇಶದ ಅಭಿವೃದ್ಧಿಗಾಗಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘವನ್ನು ಕಟ್ಟಿದ್ದಾರೆ ರೈತಪಿ ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲಿ ಎಂದು ಜಿಲ್ಲಾ ಉಸ್ತುವರಿ ಸಚಿವ ಎನ್. ಚಲುವರಾಯಸ್ವಾಮಿ ಸಲಹೆ ನೀಡಿದರು.

ತಾಲೂಕಿನ ಮಾರಗೌಡನಹಳ್ಳಿಯಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಕಚೇರಿ ಮತ್ತು ಗೋದಾಮು ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಸಾರ್ವಜನಿಕರಿಗೆ ಅನುಕೂಲವಾಗುವ ದೃಷ್ಟಿಯಿಂದ ಮಾರಗೌಡನಹಳ್ಳಿ ಗ್ರಾಮದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಕಚೇರಿ ಮತ್ತು ಗೋದಾಮು ನಿರ್ಮಿಸಿ ಅನುಕೂಲ ಮಾಡಿ ಕೊಟ್ಟಿದ್ದಾರೆ ನೂರಾರು ಕೋಟಿ ಸಾಲವನ್ನು ಸರ್ಕಾರ ನೀಡುತ್ತಾ ಬಂದಿದೆ 5 ಲಕ್ಷದವರೆಗೂ ಶೂನ್ಯ ಬಡ್ಡಿ ದರದಲ್ಲಿ ಇಂತಹ ಸೊಸೈಟಿ ಮೂಲಕ ನೀಡುತ್ತಾ ಬಂದಿದೆ ರೈತಪಿ ವರ್ಗದ ಜನರಿಗೆ ಇದರಿಂದ ಆರ್ಥಿಕ ಹೊರೆ ಇಳಿಸಿದಂತಾಗುತ್ತದೆ ರೈತರು ಸಾಲವನ್ನು ಪಡೆದು ನಿಗದಿತ ಅವಧಿ ಒಳಗೆ ಮರುಪಾವತಿ ಮಾಡಿ ಸೊಸೈಟಿ ಅಭಿವೃದ್ಧಿಗೆ ಸಹಕರಿಸಿ ಎಂದು ಮನವಿ ಮಾಡಿದರು. ಶಾಸಕ ಪಿ ರವಿಕುಮಾರ್ ಗೌಡ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಎಂ ಸಿ ಭಾಸ್ಕರ್ ಉಪಾಧ್ಯಕ್ಷರಾದ ಚಂದ್ರಮ್ಮ ನಿರ್ದೇಶಕರಾದ ಎಂ ಸಿ ವರದರಾಜು. ಪವಿತ್ರ. ನಾಗಲಿಂಗೇಗೌಡ. ನಾಗಲಿಂಗಯ್ಯ .ಎಂ ಟಿ ರಾಜು, ಚಿಕ್ಕಲಿಂಗಯ್ಯ. ಶಿವಮಾದ ಶೆಟ್ಟಿ .ಕೃಷ್ಣಯ್ಯ. ಮುದ್ದುಲಿಂಗಯ್ಯ. ಮುರುಳಿಧರ್. ಶಿವಕುಮಾರ್. ಮಾಜಿ ಅಧ್ಯಕ್ಷ ವಸಂತ್ ರಾಜ್ ಭಾಗವಹಿಸಿದ್ದರು.

### ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವ ಹೆಚ್.ಕೆ. ಪಾಟೀಲ್ ಹೇಳಿಕೆ

# ಕರ್ನಾಟಕದ ಚಿತ್ರಕಲಾ ಪರಿಷತ್ತು ರಾಷ್ಟ್ರದ ಪ್ರತಿಷ್ಠಿತ ಸಂಸ್ಥೆ

**ಬೆಂಗಳೂರು:** ಕರ್ನಾಟಕದ ಚಿತ್ರಕಲಾ ಪರಿಷತ್ತು ರಾಷ್ಟ್ರದ ಪ್ರತಿಷ್ಠಿತ ಸಂಸ್ಥೆಯಾಗಿದೆ. ಇಲ್ಲಿ ಜನವರಿ 05 ರಂದು 22ನೇ ಚಿತ್ರಸಂತೆ ಏರ್ಪಡಿಸಲಾಗಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವ ಹೆಚ್.ಕೆ. ಪಾಟೀಲ್ ತಿಳಿಸಿದರು.

ಕರ್ನಾಟಕ ಚಿತ್ರಕಲಾ ಪರಿಷತ್ತು ಚಿತ್ರಕಲಾ ಪರಿಷತ್‌ನಲ್ಲಿ ಆಯೋಜಿಸಿದ್ದ ಚಿತ್ರಕಲಾ ಸಮ್ಮಾನ್ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಐದು ಜನ ಸಾಧಕರಿಗೆ ತಲಾ 50 ಸಾವಿರ ರೂ.ಗಳ ನಗದು ಹಾಗೂ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಸಚಿವರು, ಈ ಸಂಸ್ಥೆಗೆ ಒಂದು ವಿಶೇಷವಾದ ಗೌರವವಿದೆ. ಈ ಹಿಂದೆ ಎಐಸಿಸಿಯು ಕಾಂಗ್ರೆಸ್ ಪ್ರದರ್ಶನ ಏರ್ಪಡಿಸಿದ ಸಂದರ್ಭದಲ್ಲಿ ಚಿತ್ರಕಲಾ ಪರಿಷತ್ತಿನಿಂದ ಮಾಡಿಕೊಟ್ಟ ಕಾಂಗ್ರೆಸ್ ಅಧ್ಯಕ್ಷರ ಪುತ್ಥಳಿ ರಾಷ್ಟ್ರದ ಗಮನ ಸೆಳೆಯಿತು ಎಂದರು.

ಕರ್ನಾಟಕ ಚಿತ್ರಕಲಾ ಪರಿಷತ್ತು ವರ್ಷ ವರ್ಷ ಹೊಸ ಹೊಸ ಚಟವಟಿಕೆಗಳನ್ನು ಪ್ರಾರಂಭ ಮಾಡುತ್ತದೆ. ಚಿತ್ರ ಸಂತೆ ಹಿಂದಿನಂತೆ



ಸಂತೆಯಾಗಿ ಉಳಿದಿಲ್ಲ ಜಾತ್ರೆಯಾಗಿದೆ. 14 ಗ್ಯಾಲರಿಗಳನ್ನು ಹೊಂದಿದ್ದು, ಚಿತ್ರ ಕಲಾವಿದರನ್ನು ಪ್ರೋತ್ಸಾಹಿಸಲು ಹಾಗೂ ಮಾರುಕಟ್ಟೆ ಕಲ್ಪಿಸುವ ಉದ್ದೇಶದಿಂದ ಯಾವುದೇ ಕಮಿಷನ್, ಶುಲ್ಕವಿಲ್ಲದೆ ಉಚಿತವಾಗಿ ಚಿತ್ರ ಪ್ರದರ್ಶನ ಏರ್ಪಡಿಸುತ್ತಾ ಬಂದಿದೆ. ಚಿತ್ರಕಲಾ ಪರಿಷತ್ತಿನಿಂದ ಹಮ್ಮಿಕೊಳ್ಳಲಾಗುತ್ತಿರುವ ಇಂತಹ ಕಾರ್ಯಕ್ರಮಗಳು ಎಲ್ಲರ ಗಮನ ಸೆಳೆಯುತ್ತದೆ ಎಂದರು.

ಆಸಕ್ತ ವಿದ್ಯಾರ್ಥಿಗಳಿಗಾಗಿ ಕಲಿಕೆಗೋಸ್ಕರ ಸಂಜೆ ಕಾಲೇಜು ಪ್ರಾರಂಭಿಸಿರುವುದಕ್ಕೆ ಚಿತ್ರಕಲಾ ಪರಿಷತ್‌ಗೆ ಸಚಿವರು ಅಭಿನಂದನೆ ಸಲ್ಲಿಸಿದರು. ಬೆಂಗಳೂರು ಹೊರತುಪಡಿಸಿ ಎಲ್ಲಿಯೂ ಈ ರೀತಿಯ ಸಂಜೆ ಕಾಲೇಜು ಇಲ್ಲ. ಚಿತ್ರಕಲಾ ಪರಿಷತ್ತಿನ ಘಟಕಗಳು, ಶಾಖೆಗಳನ್ನು ಬೇರೆ ಕಡೆಗಳಲ್ಲಿಯು ಪ್ರಾರಂಭಿಸಬೇಕು. ಗದಗದಲ್ಲಿ ಚಿತ್ರಕಲಾ ಪರಿಷತ್ತು ಶಾಖೆ ತೆರಯುವುದಾದರೆ ಸಕಾರದಿಂದ ಸಹಕಾರ ನೀಡಲಾಗುವುದು ಎಂದರು. ಪ್ರವಾಸಿ ತಾಣಗಳಿಗೆ ಆಗಮಿಸುವ ಪ್ರವಾಸಿಗರಿಗೆ ಚಿತ್ರಕಲಾ ಪರಿಷತ್ತಿಗೆ ಭೇಟಿ ನೀಡಲು ಕೋವಿಡ್-19ರ ನಂತರ ಸರಿಯಾದ ಬಸ್ ವ್ಯವಸ್ಥೆ ಇರುವುದಿಲ್ಲ. ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಬಸ್ ವ್ಯವಸ್ಥೆ ಮಾಡಲಾಗುವುದು. ಇಲಾಖೆಯ ವತಿಯಿಂದ ಚಿತ್ರಕಲಾ ಪರಿಷತ್ತಿಗೆ ಎಲ್ಲಾ ರೀತಿಯ ಸಹಕಾರ ನೀಡಲಾಗುವುದು. ಇಂದು ನಾನು ಶ್ರೇಷ್ಠ ಕಲಾವಿದರಿಗೆ ಪ್ರಶಸ್ತಿ ಪ್ರದಾನ ಮಾಡಿದ್ದು ಹೆಮ್ಮೆಯ ಸಂಗತಿ ಎಂದರು.

ಕರ್ನಾಟಕ ಚಿತ್ರಕಲಾ ಪರಿಷತ್ತಿನ ಅಧ್ಯಕ್ಷ ಡಾ.ಬಿ.ಎಲ್. ಶಂಕರ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಜನವರಿ 5ರಂದು ನಡೆಯುವ ಚಿತ್ರ ಸಂತೆಗೆ 22 ರಾಜ್ಯಗಳಿಂದ 3,470 ಕಲಾವಿದರು ಅರ್ಜಿಗಳನ್ನು ಸಲ್ಲಿಸಿದ್ದಾರೆ. ಇವುಗಳಲ್ಲಿ ಸುಮಾರು 1500 ಕಲಾವಿದರಿಗೆ ಮಾತ್ರ ಅವಕಾಶ ಕಲ್ಪಿಸಲಾಗುವುದು. ಉಳಿದವರಿಗೆ ನಿರಾಸೆಯಾಬಾರದು ಎಂಬ ಉದ್ದೇಶದಿಂದ ಆನ್‌ಲೈನ್‌ನಲ್ಲಿ ಒಂದು ತಿಂಗಳ ಕಾಲ ಪ್ರದರ್ಶಿಸಲಾಗುವುದು ಎಂದರು.

ಈ ಸಾಲಿನಲ್ಲಿ ಪ್ರಶಸ್ತಿಗೆ ಭಾಜನರಾಗಿರುವ ಡಾ.ಎಂ.ಎಸ್.ಮೂರ್ತಿ, ಎ.ರಾಮಕೃಷ್ಣಪ್ಪ ಜಿ.ಎಲ್.ಭಟ್, ಸೂರ್ಯ ಪ್ರಕಾಶ್ ಗೌಡ, ಶ್ರೀಮತಿ ನಿರ್ಮಲ ಕುಮಾರಿ ಸಿ.ಎಸ್. ಇವರು ಶ್ರೇಷ್ಠ ಕಲಾವಿದರಾಗಿದ್ದು, ಸ್ವಂತ ಪರಿಶ್ರಮದಿಂದ ಮುಂದೆ ಬಂದಿದ್ದಾರೆ. ಇವರಲ್ಲಿ ಜಿ.ಎಲ್. ಭಟ್ ಅವರ ''ರಾಮಲಾಲನ'' ಪ್ರತಿಮೆ ಅಯೋಧ್ಯ ಮಂದಿರಕ್ಕೆ ಎರಡನೇ ಸ್ಥಾನಕ್ಕೆ ಆಯ್ಕೆಯಾಗಿದ್ದನ್ನು ನಾವು ಸ್ಮರಿಸಬಹುದು ಎಂದರು.

ಕಾರ್ಯಕ್ರಮದಲ್ಲಿ ನವದೆಹಲಿ ಎನ್ ಜಿಎಂಎ ಮಹಾನಿರ್ದೇಶಕರಾದ ಡಾ.ಸಂಜೀವ್ ಕಿಶೋರ್ ಗೌತಮ್, ಚಿತ್ರಕಲಾ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ಶಶಿಧರ್ ಎಸ್.ಎನ್., ಪದಾಧಿಕಾರಿಗಳು, ಪ್ರಶಸಿ ಪುರಸ್ಕೃತರು, ಅವರ ಕುಟುಂಬದವರು, ಹಿರಿಯ ಚಿತ್ರ ಕಲಾವಿದರು ಉಪಸ್ಥಿತರದ್ದರು.

# ಯುವನಿಧಿ ವಿಶೇಷ ನೋಂದಣಿ ಅಭಿಯಾನ

**ಬೆಂಗಳೂರು:** ಯುವನಿಧಿ ಯೋಜನೆಗೆ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಅರ್ಹ ಅಭ್ಯರ್ಥಿಗಳು ನೋಂದಾಯಿಸುವಂತಾಗಲು ''ಜನವರಿ 06 ರಿಂದ 20 ರವರೆಗೆ ಯುವನಿಧಿ ವಿಶೇಷ ನೋಂದಣಿ ಅಭಿಯಾನ'' ಕಾರ್ಯಕ್ರಮವನ್ನು ರಾಜ್ಯಾದಾದ್ಯಂತ ಎಲ್ಲಾ ರಾಜ್ಯ ಅಂಗೀಕೃತ ವಿಶ್ವವಿದ್ಯಾಲಯಗಳ (ಖಣಚಿಣಜ ಕಣಥಟಛಿ ಣಟಿತಜಡಿಣಜ) ಮತ್ತು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರಗಳ ಮೂಲಕ ಹಮ್ಮಿಕೊಳ್ಳಲಾಗಿದೆ. 2023 ಹಾಗೂ 2024 ನೇ ಸಾಲಿನಲ್ಲಿ ಪದವಿ / ಸ್ನಾತಕೋತ್ತರ ಪದವಿ / ಡಿಪ್ಲೋಮಾ ತೇರ್ಗಡೆಯಾದ ಅಭ್ಯರ್ಥಿಗಳು ಈ ಅಭಿಯಾನದ ಪ್ರಯೋಜನ ಪಡೆದು ಕೊಳ್ಳಬಹುದು.

ಕರ್ನಾಟಕ ಸರ್ಕಾರದ ಐದು ಖಾತರಿ ಯೋಜನೆಗಳಲ್ಲಿ ಒಂದಾದ ''ಯುವನಿಧಿ ಯೋಜನೆ''ಯು ರಾಜ್ಯದ 2023-24 ಹಾಗೂ 2024-25 ನೇ ಸಾಲಿನಲ್ಲಿ ಪದವಿ / ಸ್ನಾತಕೋತ್ತರ ಪದವಿ / ಡಿಪ್ಲೋಮಾ ತೇರ್ಗಡೆಯಾದ ಅರ್ಹ ನಿರುದ್ಯೋಗಿ ಯುವಕ / ಯುವತಿಯರಿಗೆ ನಿರುದ್ಯೋಗ ಭತ್ಯೆಯನ್ನು (ಪದವಿ ಉತ್ತೀರ್ಣರಾದವರಿಗೆ ರೂ. 3000/- ಪ್ರತಿ ಮಾಹೆ ಹಾಗೂ ಡಿಪ್ಲೋಮಾ ಉತ್ತೀರ್ಣರಾದವರಿಗೆ ರೂ. 1500-ಪ್ರತಿ ಮಾಹೆಯಂತೆ, ಗರಿಷ್ಠ 2 ವರ್ಷಗಳ ಅವಧಿಗೆ ಅಥವಾ ಉದ್ಯೋಗ ಸಿಗುವವರೆಗೆ ಇವುಗಳಲ್ಲಿ ಯಾವುದು ಮೊದಲೋ ಅದು) ಸಬಲೀಕರಣಗೊಳಿಸಲು ಜಾರಿಗೊಳಿಸಿರುವ ಸರ್ಕಾರದ ಮಹತ್ತರ ಯೋಜನೆ ಇದಾಗಿದೆ.

ನೋಂದಣಿಗಾಗಿ ಅರ್ಹತೆ : 2023-24 ಮತ್ತು 2024-25 ನೇ ಸಾಲಿನಲ್ಲಿ ಪದವಿ/ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮಾ ತೇರ್ಗಡೆ ಹೊಂದಿದವರು. ಫಲಿತಾಂಶ ಪ್ರಕಟವಾದ 180 ದಿನಗಳ ನಂತರವೂ ಸಾರ್ವಜನಿಕ/ಖಾಸಗಿ ಕ್ಷೇತ್ರದಲ್ಲಿ ಉದ್ಯೋಗದಲ್ಲಿರದವರು ಹಾಗೂ ಸ್ವಯಂ-ಉದ್ಯೋಗದಲ್ಲಿ ಇಲ್ಲದೇ ಇರುವವರು. ಉನ್ನತ ವ್ಯಾಸಂಗವನ್ನು ಮುಂದುವರಿಸದೇ ಇರುವವರು. ಕನಿಷ್ಠ 6 ವರ್ಷ ಕರ್ನಾಟಕದ ರಹವಾಸಿ ಆಗಿರಬೇಕು. ನೋಂದಣಿಗಾಗಿ ಸೇವಾಸಿಂಧು ಪೋರ್ಟಲ್ www.sevasindhugs.karnataka.gov.in, ಕರ್ನಾಟಕ ಒನ್, ಬೆಂಗಳೂರು ಒನ್, ಗ್ರಾಮ ಒನ್, ಬಾಪೂಜಿ ಸೇವಾ ಕೇಂದ್ರಗಳ ಮೂಲಕ ಉಚಿತವಾಗಿ ನೋಂದಾಯಿಸಿ ಕೊಳ್ಳಬಹುದು. ಪದವಿ / ಸ್ನಾತಕೋತ್ತರ ಪದವಿ/ ಡಿಪ್ಲೋಮಾ ಪ್ರಮಾಣ ಪತ್ರಗಳನ್ನು ನ್ಯಾಡ್ ಪೋರ್ಟಲ್ https://nad.karnataka.gov.in ನಲ್ಲಿ ಇಂದೀಕರಿಸಿರುವುದನ್ನು ಖಚಿತಪಡಿಸಿಕೊಳ್ಳುವುದು. ಹೆಚ್ಚಿನ ಮಾಹಿತಿಗಾಗಿ ಆಯಾ ಜಿಲ್ಲೆಯ ಉದ್ಯೋಗ ವಿನಿಮಯ ಕಚೇರಿಗೆ ಭೇಟಿ ನೀಡುವುದು ಅಥವಾ ಸಹಾಯವಾಣಿ ಸಂಖ್ಯೆ 1800 5997154 ಸಂಪರ್ಕಿಸಬಹುದು ಎಂದು ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶಾಲಾ/ಕಾಲೇಜುಗಳ 100 ಮೀಟರ್‌ವ್ಯಾಪ್ತಿಯಲ್ಲಿ

# ತಂಬಾಕು ಉತ್ಪನ್ನ, ಮಾರಾಟ ನಿಷೇಧ

**ರಾಮನಗರ:** ಶಾಲಾ ಕಾಲೇಜುಗಳ ಸುತ್ತಮುತ್ತಲಿನ 100 ಮೀಟರ್ ವ್ಯಾಪ್ತಿಯಲ್ಲಿತಂಬಾಕು ಉತ್ಪನ್ನಗಳ ಮಾರಾಟನಿಷೇಧಿಸಲಾಗಿದೆ, ಅದು ಉಲ್ಲಂಘನೆಯಾಗದಂತೆ ಎಚ್ಚರವಹಿಸಬೇಕೆಂದುಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಸಂಬಂಧಿಸಿದ ಇಲಾಖೆಗಳ ಮುಖ್ಯಸ್ಥರಿಗೆ ನಿರ್ದೇಶನ ನೀಡಿದರು.

ಅವರು ಜ. 4ರ ಶನಿವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಮನ್ವಯ ಸಮಿತಿಯ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡುವುದು ನಿಷೇಧವಾಗಿದ್ದು, ಸಾರ್ವಜನಿಕ ಸ್ಥಳದ ಮಾಲೀಕರು ಧೂಮಪಾನ ನಿಷೇಧ ನಾಮಫಲಕವನ್ನು ಕಡ್ಡಾಯವಾಗಿ ಪ್ರದರ್ಶನ ಮಾಡಬೇಕು ಹಾಗೂಸಿಗರೇಟು ಮತ್ತು ಇತರೆ ತಂಬಾಕು ಉತ್ಪನ್ನಗಳ ನೇರ ಹಾಗೂ ಪರೋಕ್ಷವಾದ ಜಾಹೀರಾತು, ಉತ್ತೇಜನ ಮತ್ತು ಪ್ರಾಯೋಜಕತೆಯನ್ನು ನಿಷೇಧಿಸಲಾಗಿದೆ. ತಂಬಾಕು ಉತ್ಪನ್ನಗಳ ಮಾರಾಟಕ್ಕೆ ಕಡ್ಡಾಯವಾಗಿ ಪರವಾನಗಿ ಪಡೆಯಬೇಕು.ಇಲ್ಲವಾದಲ್ಲಿ ದಂಡ ವಿಧಿಸಲಾಗುವುದು ಎಂದು ತಿಳಿಸಿದರು.

ತಂಬಾಕು ಉತ್ಪನ್ನಗಳನ್ನು 18 ವಯಸ್ಸಿನೊಳಗಿನ ಮಕ್ಕಳಿಗೆ/ಅಪ್ರಾಪ್ತ ವಯಸ್ಸಿನವರು ಮಾರಾಟ ಮಾಡುವುದು ಹಾಗೂ ಅವರಿಂದ ಮಾರಾಟ ಮಾಡಿಸುವುದು ನಿಷೇಧಿಸಲಾಗಿದೆ. ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವ ವ್ಯಾಪಾರಸ್ಥರು ಅಂಗಡಿಯ ಮುಂಭಾಗ ನಾಮಫಲಕವನ್ನು ಕಡ್ಡಾಯವಾಗಿ ಪ್ರದರ್ಶಿಸಬೇಕು. ಉಲ್ಲಂಘಿಸಿದ್ದಲ್ಲಿ 200 ರೂ.ಗಳ ವರೆಗೆ ದಂಡ ವಿಧಿಸಲಾಗುವುದು ಎಂದು ಎಚ್ಚರಿಸಿದರು.

2024-25ನೇ ಸಾಲಿನಲ್ಲಿ ಪೊಲೀಸ್ ಇಲಾಖೆಯು ತಂಬಾಕು ಸೇವನೆ ಕುರಿತು ಕಾರ್ಯಾಚರಣೆ ನಡೆಸಿ ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಸೇವನೆ ಮಾಡುತ್ತಿದ್ದ 5,466 ಜನರಿಗೆ ದಂಡ ವಿಧಿಸಿದೆ. ಇದೇ



ರೀತಿ ಸಂಬಂಧಪಟ್ಟ ಇಲಾಖೆಗಳು ಕಾರ್ಯಾಚರಣೆ ನಡೆಸಿ ದಂಡ ವಿಧಿಸುವಂತೆ ಸೂಚಿಸಿದರು.

ಸಿಗರೇಟು ಮತ್ತು ಇತರೆ ತಂಬಾಕು ಉತ್ಪನ್ನಗಳು ನಿರ್ಧಿಷ್ಠ ಆರೋಗ್ಯ ಎಚ್ಚರಿಕೆಗಳ ಚಿತ್ರ ಸಹಿತ ಸಂದೇಶಗಳಿಲ್ಲದೇ ಮಾರಾಟ ಸರಬರಾಜು ಮಾಡುವುದು ನಿಷೇಧಿಸಲಾಗಿದೆ ಎಂದರು.

ತಂಬಾಕು ಮಾರಾಟ ಮಾಡಲು ಪರವಾನಗಿ ಪಡೆಯಲು ಇಚ್ಛಿಸುವವರು ವ್ಯಾಪಾರ್ ಆ್ಯಪ್ ಮೂಲಕ ಅರ್ಜಿಸಲ್ಲಿಸಿ ಪರವಾನಿಗೆ ಪಡೆಯಬೇಕು ಹಾಗೂ ಇದು ಕಡ್ಡಾಯ ಎಂದರು.

ಜಿಲ್ಲೆಯಲ್ಲಿರುವ 1,606 ಶಾಲೆಗಳಲ್ಲಿ ತಂಬಾಕು ನಿಯಂತ್ರಣ ಸಮಿತಿಯನ್ನು ರಚಿಸಲಾಗಿದೆ ಹಾಗೂ ಶಾಲಾ-ಕಾಲೇಜುಗಳಮುಂಭಾಗದಲ್ಲಿ ತಂಬಾಕು ಮುಕ್ತ ಶಾಲಾ/ಕಾಲೇಜು ಎಂಬ ನಾಮಫಲಕವನ್ನು ಕಡ್ಡಾಯವಾಗಿ ಪ್ರವೇಶ ದ್ವಾರದಲ್ಲಿ ಪ್ರದರ್ಶನ ಮಾಡಬೇಕೆಂದು ತಿಳಿಸಿದರು.

ಸುಗ್ಗನಹಳ್ಳಿ ಗ್ರಾಮ ಪಂಚಾಯತ್ ವ್ಯಾಪ್ತಿಗೆ ಬರುವ 21 ಗ್ರಾಮಗಳಲ್ಲಿ ತಂಬಾಕು ಮಾರಾಟ ನಿಷೇಧಿಸಲಾಗಿದ್ದು, ಸುಗ್ಗನಹಳ್ಳಿ ಗ್ರಾಮ ಪಂಚಾಯತ್ ಅನ್ನು ರಾಜ್ಯದಲ್ಲಿಯೇ ಮೊದಲ ಬಾರಿಗೆ ತಂಬಾಕು ಮುಕ್ತ ಗ್ರಾಮವೆಂದು ಘೋಷಿಸಲಾಗಿದೆ. ನಗರಸಭೆ, ಪುರಸಭೆ, ಗ್ರಾಮ ಪಂಚಾಯಿತಿ, ಆರೋಗ್ಯ ಇಲಾಖೆ, ಪೊಲೀಸ್ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಸಂಬಂಧಪಟ್ಟ ಇತರೆ ಇಲಾಖೆಗಳುಜಂಟಿಯಾಗಿ ತಂಬಾಕು ಮಾರಾಟ ಮಾಡುತ್ತಿರುವ ಅಂಗಡಿಗಳಿಗೆ ಭೇಟಿ ನೀಡಿ ತಪಾಸಣೆ ನಡೆಸಬೇಕು. ಒಂದು ವೇಳೆ ತಂಬಾಕು ಮಾರಾಟ ಮಾಡುತ್ತಿದ್ದರೆ ತಂಬಾಕು ಪದಾರ್ಥಗಳನ್ನು ವಶಪಡಿಸಿಕೊಂಡು, ದಂಡ ವಿಧಿಸುವಂತೆ ತಿಳಿಸಿದರು.

ತಂಬಾಕು ನಿಷೇಧಕುರಿತು ಸಾರ್ವಜನಿಕ ಸ್ಥಳಗಳ ಹಾಗೂ ಬಸ್ ನಿಲ್ದಾಣಗಳಲ್ಲಿಐ.ಇ.ಸಿ ಚಟುವಟಿಕೆಗಳು, ಬೀದಿ ನಾಟಕ, ವಿಚಾರಸಂಕೀರ್ಣಗಳನ್ನು ಏರ್ಪಡಿಸಬೇಕು ಹಾಗೂ ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆರಸಪ್ರಶ್ನೆ, ಚರ್ಚಾ ಸ್ಪರ್ಧೆ, ಪ್ರಬಂಧ ಸ್ಪರ್ಧೆಗಳು ಸೇರಿದಂತೆ ಅರಿವು ಕಾರ್ಯಕ್ರಮಗಳನ್ನು ಆಯೋಜಿಸಿ, ಜಾಗೃತಿ ಮೂಡಿಸುವಂತೆ ಅವರುತಿಳಿಸಿದರು.

ಜಿಲ್ಲೆಯಲ್ಲಿ ತಂಬಾಕು ಪದಾರ್ಥಗಳ ಮಾರಾಟವನ್ನು ನಿಷೇಧಿಸಲು ಅಧಿಕಾರಿಗಳು ಸಾಮಾಜಿಕ ಹೊಣೆಗಾರಿಕೆಯನ್ನು ಹೊರುವಂತೆ ಕಿವಿ ಮಾತು ಹೇಳಿದರು.

ಇದೇ ಸಂದರ್ಭದಲ್ಲಿ ತಂಬಾಕು ನಿಷೇಧ ಕುರಿತು ನಾಮಫಲಕಗಳನ್ನು ಅಪರ ಜಿಲ್ಲಾಧಿಕರಿಗಳು ಬಿಡುಗಡೆ ಮಾಡಿದರು.

ಸಭೆಯಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ. ಮಂಜುನಾಥ್,ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಕಿರಣ್ ಶಂಕರ್, ಮನೋ ವೈದ್ಯಾಧಿಕಾರಿ ಡಾ. ಚಂದ್ರಶೇಖರ್, ಮಾಗಡಿ, ಕನಕಪುರ, ರಾಮನಗರ ತಾಲ್ಲೂಕು ಆರೋಗ್ಯಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ವಿದ್ಯೆ ಕೇವಲ ಅಕ್ಷರ ಜ್ಞಾನವಾಗಬಾರದು



**ವಿಜಯಪುರ:** ವಿದ್ಯೆ ಎಂಬುದು ಕೇವಲ ಅಕ್ಷರ ಜ್ಞಾನವಾಗದೆ ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿ ಇರಬೇಕೆಂದು ಬೆಂಗಳೂರಿನ ಫ್ಲಾರೆನ್ಸ್ ಗ್ರೂಪ್ ಆಫ್ ಇನ್ಸ್ಟಿಟ್ಯೂಟ್ ಚೇರ್ಮನ್ ಸಿ ಮಲ್ಲಿಕಾರ್ಜುನ್ ರವರು ತಿಳಿಸಿದರು.

ಇಲ್ಲಿನ ವೇದಗಾನ ಎಜುಕೇಶನ್ ಟ್ರಸ್ಟ್ ನ ಎವರ್ ಗ್ರೀನ್ ಪ್ರೌಢಶಾಲೆಯಲ್ಲಿ 34ನೇ ವರ್ಷದ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡುತ್ತಿದ್ದರು.

ಶಾಲೆಯ ಹಿರಿಯ ವಿದ್ಯಾರ್ಥಿ ದಂತ ವೈದ್ಯರಾದ ಡಾ. ಕಾರ್ತಿಕ್ ಚರಣಗೌಡ ರವರು ಸನ್ಮಾನ ಸ್ವೀಕರಿಸಿ ಮಾತನಾಡಿ ಗುರು ಹಿರಿಯರು ಶಿಕ್ಷಕರಲ್ಲಿ ಭಯ ಭಕ್ತಿ ಇಲ್ಲದಿದ್ದಲ್ಲಿ ಉತ್ತಮ ಶಿಕ್ಷಣ ಪಡೆಯಲು ಸಾಧ್ಯವಿಲ್ಲ ಹಾಗೆ ಇಲ್ಲದಿದ್ದಲ್ಲಿ ಇಂದು ತಾವು ಒಬ್ಬ ಉತ್ತಮ ವೈದ್ಯರಾಗಲು ಸಾಧ್ಯವಾಗುತ್ತಿರಲಿಲ್ಲವೆಂದು ತಿಳಿಸಿದರು

ಶಾಲೆಯಲ್ಲಿ 10 ವರ್ಷಗಳ ಕಾಲ ನಿರಂತರ ಸೇವೆ ಸಲ್ಲಿಸಿ ಸನ್ಮಾನ ಸ್ವೀಕರಿಸಿದ ಜೆಎನ್ ಸಾಬೀರ್ ಪಾಷಾ ಅವರು ಮಾತನಾಡಿ ತಾವು ಇಲ್ಲಿ ಶಿಕ್ಷಕರಾಗಿ ವಿದ್ಯಾರ್ಥಿ ದೆಸೆಯಲ್ಲಿ ಕಲಿಯದಿದ್ದಂತಹ ಎಷ್ಟೋ ವಿಷಯಗಳನ್ನು ಶಿಕ್ಷಕರಾಗಿ ಕಲಿತುಕೊಂಡಿದ್ದೇವೆ ಎಂದು ಜೀವನ ಎಂಬುದು ಸದಾ ಕಲಿಕೆಯಾಗಿರುತ್ತದೆ ಎಂದು ತಿಳಿಸಿದರು. ವೇದಗಾನ ಎಜುಕೇಶನ್ ಟ್ರಸ್ಟ್ ನ ಅಧ್ಯಕ್ಷರಾದ ಅನಿಲ್ ಕುಮಾರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತ ಶಾಲೆಯು ಮೂರು ದಶಕಗಳಿಂದಲೂ ಸಾವಿರಾರು ಮಂದಿ ಉತ್ತಮ ವಿದ್ಯಾರ್ಥಿಗಳನ್ನು ಸಮಾಜಕ್ಕೆ ಕೊಡುಗೆಯಾಗಿ ನೀಡಿದೆ ಎಂದು ತಿಳಿಸಿದರು. ನಿಕಟ ಪೂರ್ವ ಅಧ್ಯಕ್ಷರಾದ ಎಸ್. ರುದ್ರಮೂರ್ತಿ, ಟ್ರಸ್ಟಿಗಳಾದ ಸಿಎಂ ರಾಮಯ್ಯ, ಮುಖ್ಯೋಪಾಧ್ಯಾಯಣಿಯಾದ ಆರ್ ಸವಿತಾ ಉಪಸ್ಥಿತರಿದ್ದರು.

# ಉತ್ತಮ ಆರೋಗ್ಯಕ್ಕೆ ಶುದ್ಧ ನೀರು ಕುಡಿಯಿರಿ

**ವಿಜಯಪುರ:** ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಶುದ್ದ ಗಂಗಾ ಘಟಕದಲ್ಲಿ ಶುದ್ದ ಗಂಗಾ ಕಾರ್ಯಕ್ರಮವನ್ನು ಹಮ್ಮಿಕೊಂಡು ಜನರಿಗೆ ಶುದ್ದ ಕುಡಿಯುವ ನೀರಿನ ಬಗ್ಗೆ ಕರಪತ್ರವನ್ನು ವಿತರಿಸಿ ಜಾಗೃತಿ ಮೂಡಿಸಲಾಯಿತು.

ಪುರಸಭಾ ಸದಸ್ಯ ವಿ. ನಂದಕುಮಾರ್ ಕರಪತ್ರ ಬಿಡುಗಡೆ ಮಾಡಿ ಮಾತನಾಡಿ, 'ಶುದ್ಧವಾದ ನೀರನ್ನು ಉಪಯೋಗಿಸಿದರೆ ನಮ್ಮ ಆರೋಗ್ಯವು ಉತ್ತಮವಾಗಿರುತ್ತದೆ. ಆದ್ದರಿಂದ ಎಲ್ಲರೂ ಸಂಸ್ಕರಿಸಿದ ನೀರನ್ನು ಬಳಸಬೇಕು ಹಾಗೆಯೇ ನೀರು ಅತ್ಯಮೂಲ್ಯವಾದದ್ದು ಅದನ್ನ ಹಿತಮಿತವಾಗಿ ಬಳಸಬೇಕು. ತಮ್ಮ ಸುತ್ತಮುತ್ತಲಿನ ಪರಿಸರವನ್ನ ಸ್ವಚ್ಛವಾಗಿ ಇಟ್ಟುಕೊಳ್ಳಬೇಕು ಎಂದು ತಿಳಿಸಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಈ ಕಾರ್ಯಕ್ರಮವು ಶ್ಲಾಘನೀಯವಾದದ್ದು ' ಎಂದರು.

ವಲಯದ ಮೇಲ್ವಿಚಾರಕ ಹರೀಶ್ ಎಂ.ಟಿ. ಮಾತನಾಡಿ, 'ಡಾ.ಡಿ ವೀರೇಂದ್ರ ಹೆಗ್ಗಡೆಯವರು ಜನರಲ್ಲಿ ಕಂಡುಬರುವಂತಹ ಅನಾರೋಗ್ಯ ಸಮಸ್ಯೆಗಳು ನೀರಿನಿಂದಲೇ ಬರುತ್ತಿರುವುದನ್ನು ಮನಗಂಡಂತಹ ಪೂಜ್ಯರಾದ ವೀರೇಂದ್ರ ಹೆಗಡೆರವರು




ಜನರಿಗೆ ಅನುಕೂಲವಾಗಲೆಂದು ಶುದ್ಧಗಂಗಾ ಕಾರ್ಯಕ್ರಮವನ್ನು ಅನುಷ್ಠಾನ ಮಾಡಿದ್ದಾರೆ' ಎಂದು ತಿಳಿಸಿದರು.

'ನಮ್ಮ ವಿಜಯಪುರ ವಲಯದಲ್ಲಿ ಒಟ್ಟು ಆರು ಶುದ್ದಗಂಗಾ ಘಟಕಗಳು ಕಾರ್ಯನಿರ್ವಹಿಸುತ್ತಿದ್ದು, ಪುರಸಭೆ ವತಿಯಿಂದ ನಮಗೆ ನೀರನ್ನು ಸರಬರಾಜು ಮಾಡುತ್ತಿದ್ದು, ಪ್ರತಿ ಲೀಟರಿಗೆ 25 ಪೈಸೆಗೆ ಸಂಸ್ಕರಿಸಿ ನೀರನ್ನು ನೀಡಲಾಗುತ್ತಿದೆ' ಎಂದು ತಿಳಿಸಿದರು. ಶುದ್ಧಗಂಗ ಮೇಲ್ವಿಚಾರಕ ಪ್ರಸನ್ನ ಮಾತನಾಡಿ, 'ಕುಡಿಯುವ ನೀರಿನಲ್ಲಿ ಯಥೇಚ್ಛವಾಗಿ ಫ್ಲೋರೈಡ್ ಅಂಶ ಇರುವುದರಿಂದ ಹೊಟ್ಟೆ ನೋವು, ಕಿಡ್ನಿ ಸ್ಟೋನ್ ಕರುಳು ಬೇನೆ, ವಿಷಮ ಸೀತ ಜ್ವರ ಮುಂತಾದ ರೋಗಗಳಿಗೆ ಕಾರಣವಾಗಬಹುದು ಆದ್ದರಿಂದ ಎಲ್ಲಾ ಜನರು ಶುದ್ದ ಗಂಗಾ ಘಟಕದಲ್ಲಿ ಸಂಸ್ಕರಿಸಿದ ನೀರನ್ನೇ ಬಳಸಿ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು' ಎಂದು ಸಲಹೆ ನೀಡಿದರು. ಘಟಕದ ನಿರ್ವಾಹಕರಾದ ನಂದಿನಿ, ರೂಪಶ್ರೀ, ಲಕ್ಷ್ಮೀದೇವಮ್ಮ, ಕವಿತಾ, ನವೀನ್, ಪ್ರವೀಣ್ ಹಾಗೂ ಸ್ವಸಹಾಯ ಸಂಘದ ಸದಸ್ಯರು ಉಪಸ್ಥಿತರಿದ್ದರು.

## ಸಾರ್ವಜನಿಕ ಕುಂದು ಕೊರತೆ ಸಭೆ

**ಮಂಡ್ಯ:** ಮಂಡ್ಯ ಲೋಕಾಯುಕ್ತ ವಿಭಾಗದ ಪೋಲಿಸ್ ಅಧಿಕಾರಿಯವರುಗಳು ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿ ಸಾರ್ವಜನಿಕರಿಂದದೂರು/ಅಹವಾಲು ಸ್ವೀಕಾರ ಮತ್ತು ಭ್ರ?ಚಾಚಾರಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರಕುಂದುಕೊರತೆ ಸಭೆಯನ್ನು ಜನವರಿ 08ರಂದು ಬೆಳಿಗ್ಗೆ 11 ಗಂಟೆಯಿಂದ ಮದ್ಯಾಹ್ನ 1.30 ಗಂಟೆಯವರೆಗೆ ಶ್ರೀರಂಗಪಟ್ಟಣತಾಲ್ಲೂಕುಕಚೇರಿಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಸಭೆಯಲ್ಲಿ ಮಂಡ್ಯ ಕರ್ನಾಟಕ ಲೋಕಾಯುಕ್ತ ಡಿವೈಎಸ್‌ಪಿ ಸುನಿಲ್ ಕುಮಾರ್ ಹೆಚ್ ಟಿ, ಪೋಲಿಸ್ ಇನ್ಸ್ಪೆಕ್ಟರ್‌ಗಳಾದ ಮೋಹನ್‌ರೆಡ್ಡಿಆರ್ ಎಂ, ಎಂ ಜಯರತ್ನ, ಬ್ಯಾಟರಾಯಗೌಡ ಬಿ ಪಿ ಅವರುಗಳು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಶ್ರೀರಂಗಪಟ್ಟಣತಾಲ್ಲೂಕಿನ ಸಾರ್ವಜನಿಕರು ಲೋಕಾಯುಕ್ತ ಅಧಿಕಾರಿಗಳನ್ನು ಖುದ್ದಾಗಿ ಭೇಟಿ ಮಾಡಿ ಸರ್ಕಾರಿ ಮತ್ತುಅರೆ ಸರ್ಕಾರಿ ಕಚೇರಿಗಳಲ್ಲಿ ಕರ್ತವ್ಯನಿರ್ವಹಿಸುತ್ತಿರುವಅಧಿಕಾರಿ/ನೌಕರರುಗಳು ಸರ್ಕಾರಿ ಕೆಲಸ ಮಾಡಿಕೊಡಲುಅನಗತ್ಯ ವಿಳಂಬ ಮಾಡಿದ ಬಗ್ಗೆ ಹಾಗೂ ಭ್ರಷ್ಟಾಚಾರದ ಬಗ್ಗೆ ದೂರು/ಅಹವಾಲುಗಳನ್ನು ಸಲ್ಲಿಸಬಹುದುಎಂದು ಮಂಡ್ಯ ಕರ್ನಾಟಕ ಲೋಕಾಯುಕ್ತ ಪೋಲಿಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಿಳಾ ಅಭ್ಯರ್ಥಿಗಳಿಂದ ಅರ್ಜಿಆಹ್ವಾನ

**ಮಂಡ್ಯ:** ಕರ್ನಾಟಕ ಮಾಧ್ಯಮಅಕಾಡೆಮಿಯು ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದಿರುವ ಮಹಿಳಾ ಅಭ್ಯರ್ಥಿಗಳಿಂದ ವಿವಿಧ ಪತ್ರಿಕಾಲಯಗಳಲ್ಲಿ ತರಬೇತಿ ಪಡೆಯಲುಅರ್ಜಿ ಆಹ್ವಾನಿಸಿದೆ. ಒಟ್ಟುಐವರು ಮಹಿಳಾ ಅಭ್ಯರ್ಥಿಗಳಿಗೆ ಅವಕಾಶವಿದ್ದು, ಆಯ್ಕೆಯಾದ ಅಭ್ಯರ್ಥಿಗಳಿಗೆ ಎರಡು ತಿಂಗಳ ಅವಧಿಗೆ ವಿವಿಧ ಪತ್ರಿಕಾ ಕಚೇರಿಗಳಲ್ಲಿ ತರಬೇತಿ ಪಡೆಯಲು ಅವಕಾಶ ಕಲ್ಪಿಸಲಾಗುವುದು. ತರಬೇತಿಅವಧಿಯಲ್ಲಿ ಮಾಸಿಕ 20,000 ರೂ.ಶಿಷ್ಯವೇತನ ನೀಡಲಾಗುವುದು. ಅಭ್ಯರ್ಥಿಗಳು ರಾಜ್ಯದಯಾವುದೇ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಸ್ನಾತಕೋತ್ತರ ಪದವಿ ಪಡೆದಿರಬೇಕು.ವಯಸ್ಸು 28 ವರ್ಷ ಮೀರಿರಬಾರದು. ಅರ್ಹತಾ ಪರೀಕ್ಷೆಯ ಮೂಲಕ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.ಈ ಬಗ್ಗೆ ಹೆಚ್ಚಿನ ಮಾಹಿತಿಯನ್ನು ಮುಂದಿನ ದಿನಗಳಲ್ಲಿ ತಿಳಿಸಲಾಗುವುದು. ಆಸಕ್ತ ಅಭ್ಯರ್ಥಿಗಳು ಜನವರಿ 20 ರ ಒಳಗಾಗಿ ತಮ್ಮ ಸ್ವವಿವರ, ದೂರವಾಣಿ ಸಂಖ್ಯೆ, ಇ-ಮೇಲ್ ವಿಳಾಸ, ಆರ್ಥಿಕ ಸ್ಥಿತಿ, ಅಂಕಪಟ್ಟಿಗಳ ಮಾಹಿತಿಯನ್ನು ಸ್ಕ್ಯಾನ್ ಮಾಡಿ Árkarnatakamediaacademy@gmail.com ಗೆ ಇ-ಮೇಲ್ ಮೂಲಕ ಕಳುಹಿಸಬಹುದಾಗಿದೆಎಂದುಕರ್ನಾಟಕ ಮಾಧ್ಯಮಅಕಾಡೆಮಿಯ ಪ್ರಕಟಣೆ ತಿಳಿಸಿದೆ.

## ಯುವನಿಧಿ ಯೋಜನೆಯ ವಿಶೇಷ ನೋಂದಣಿಗೆ ಅಭಿಯಾನ

**ಚಿಕ್ಕಬಳ್ಳಾಪುರ:** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಒಂದಾದ ಯುವನಿಧಿ ಯೋಜನೆಯ 2024 ಸಾಲಿನ ನೋಂದಣಿ ಪ್ರಕ್ರಿಯೆ ಈಗಾಗಲೇ ಪ್ರಾರಂಭವಾಗಿದ್ದು, 2023-24ನೇ ಸಾಲಿನಲ್ಲಿ ಉತ್ತೀರ್ಣರಾಗಿ 180 ದಿನಗಳು ಪೂರೈಸಿದ




ಅಭ್ಯರ್ಥಿಗಳಿಗೆ ಜನವರಿ 2024 ರಿಂದ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಜನವರಿ 6 ರಿಂದ 20 ರವರೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಚಿಕ್ಕಬಳ್ಳಾಪುರ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚಿಕ್ಕಬಳ್ಳಾಪುರ ಇಲ್ಲಿ ಯುವನಿಧಿ ಯೋಜನೆಯ ವಿಶೇಷ ನೋಂದಣಿ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದ್ದು, ಅರ್ಹ ಅಭ್ಯರ್ಥಿಗಳು ಇಲ್ಲಿ ನೋಂದಾಯಿಸಿಕೊಳ್ಳಬಹುದು. ಇಲ್ಲವೆ ಸೇವಾ ಸಿಂಧು ಪೋರ್ಟಲ್ ನ https://sevasindhugs.karnataka.gov.in ನಲ್ಲಿಯೂ ಸಹ ಅರ್ಜಿಗಳನ್ನು ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ 1800-599-7154, 9148542728, 8310004823 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಉದ್ಯೋಗಾಧಿಕಾರಿ ಎಂ.ಪ್ರಸಾದ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾಯಿ ಮಕ್ಕಳ ಪತ್ತೆಗೆ ಮನವಿ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ಮಹಿಳಾ ಪೊಲೀಸ್ ಠಾಣೆ ವ್ಯಾಪ್ತಿಯ ನಾಯನಹಳ್ಳಿ ಗ್ರಾಮದ ನಿವಾಸಿ 28 ವರ್ಷದ ಕಮಲ ಎಂಬ ಮಹಿಳೆ ತನ್ನ ಇಬ್ಬರು ಮಕ್ಕಳನ್ನು (ಮಗಳಾದ ಅನುಷ 9 ವರ್ಷ) ಮತ್ತು (ಮಗನಾದ ಜಾನ್ ಅಬ್ರಾಹಮ್ 6 ವರ್ಷ) ಕರೆದುಕೊಂಡು ಡಿಸೆಂಬರ್ 16 ರಂದು ಮನೆಯಿಂದ ಹೊರಟು ನಾಪತ್ತೆಯಾಗಿದ್ದಾರೆಂದು ಶಾಂತಕುಮಾರ್ ರವರು ಪೊಲೀಸ್ ಠಾಣೆಯಲ್ಲಿ ದೂರು ನೀಡಿ, ನನ್ನ ಹೆಂಡತಿ ಮತ್ತು ಮಕ್ಕಳನ್ನು ಪತ್ತೆ ಮಾಡಿಕೊಡಬೇಕೆಂದು ಮನವಿ ಮಾಡಿದ್ದಾರೆ. ಚಹರೆ: ಕಮಲ, 28 ವರ್ಷ ವಯಸ್ಸು, 5 ಅಡಿ ಎತ್ತರ, ಗುಂಡು ಮುಖ, ಗೋಧಿ ಮೈ ಬಣ್ಣ, ಸಾಧಾರಣ ಮೈಕಟ್ಟು, ಕೆಂಪು ಬಣ್ಣದ ನೈಟಿ ಧರಿಸಿದ್ದು, ಕನ್ನಡ ಮತ್ತು ತೆಲುಗು ಮಾತನಾಡುತ್ತಾರೆ. ಮಗಳ ಚಹರೆ: ಅನುಷ, 9 ವರ್ಷ ವಯಸ್ಸು, 3 ಅಡಿ ಎತ್ತರವಿದ್ದು, ಗುಂಡು ಮುಖ, ಗೋಧಿ ಮೈ ಬಣ್ಣ, ಸಾಧಾರಣ ಮೈಕಟ್ಟು, ನೀಲಿ ಬಣ್ಣದ ಫ್ರಾಕ್ ಧರಿಸಿದ್ದು, ಕನ್ನಡ, ತೆಲುಗು ಮಾತನಾಡುತ್ತಾಳೆ. ಮಗನ ಚಹರೆ: ಜಾನ್ ಅಬ್ರಾಹಮ್, 6 ವರ್ಷ ವಯಸ್ಸು, 2 ಅಡಿ ಎತ್ತರ, ಗುಂಡು ಮುಖ, ಗೋಧಿ ಮೈ ಬಣ್ಣ, ಸಾಧಾರಣ ಮೈಕಟ್ಟು, ಕೆಂಪು ಬಣ್ಣದ ಟಿ ಶರ್ಟ್ ಮತ್ತು ಬಿಳಿ ಬಣ್ಣದ ನಿಕ್ಕರ್ ಧರಿಸಿದ್ದು, ಕನ್ನಡ, ತೆಲುಗು ಮಾತನಾಡುತ್ತಾನೆ. ಇವರ ಬಗ್ಗೆ ಸುಳಿವು ಸಿಕ್ಕಲ್ಲಿ ಚಿಕ್ಕಬಳ್ಳಾಪುರ ಮಹಿಳಾ ಪೊಲೀಸ್ ಠಾಣೆಗೆ ಹಾಗೂ ಹತ್ತಿರದ ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದೆಂದು ಮಹಿಳಾ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುವೆಂಪು, ಅಮರಶಿಲ್ಪಿ ಜಕಣಾಚಾರಿ ಕೊಡುಗೆ ಅಪಾರ

**ಬೆಂಗಳೂರು ಗ್ರಾಮಾಂತರ:** ರಾಷ್ಟ್ರ ಕವಿ ಕುವೆಂಪು ಅವರು ಸಾಹಿತ್ಯ ಕ್ಷೇತ್ರದಲ್ಲಿ ಸಮಾಜಕ್ಕೆ ಕೊಡುಗೆಯಾದರೆ, ಅಮರ ಶಿಲ್ಪಿ ಜಕಣಾಚಾರಿ ಅವರು ವಾಸ್ತು ಶಿಲ್ಪದ ಮೂಲಕ ಸಮಾಜಕ್ಕೆ ಕೊಡುಗೆಯಾಗಿದ್ದಾರೆ. ಅವರ ಆಚಾರ, ವಿಚಾರ, ಕಲೆ, ಕಾಯಕ ನಿಷ್ಠೆಯನ್ನು ಅರಿತು ಅವರ ಮಾರ್ಗದರ್ಶನದಲ್ಲಿ ನಡೆಯೋಣ ಎಂದು ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ ಹೇಳಿದರು.

ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಆಯೋಜಿಸಿದ್ದ 'ವಿಶ್ವಮಾನವ ದಿನಾಚರಣೆ ಮತ್ತು ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ' ಅಂಗವಾಗಿ ರಾಷ್ಟ್ರ ಕವಿ ಕುವೆಂಪು ಹಾಗೂ ಅಮರ ಶಿಲ್ಪಿ ಜಕಣಾಚಾರಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಿ ಅವರು ಮಾತನಾಡಿದರು.

» **ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ ಬಣ್ಣನೆ**

ರಾಷ್ಟ್ರ ಕವಿ ಕುವೆಂಪು ಅವರು ಜ್ಞಾನಪೀಠ ಪ್ರಶಸ್ತಿ, ಪದ್ಮ ಭೂಷಣ, ಪದ್ಮ ವಿಭೂಷಣ ಪ್ರಶಸ್ತಿ ಇನ್ನೂ ಹಲವು ಪ್ರಶಸ್ತಿ ಹಾಗೂ ಸ್ಥಾನಮಾನಗಳಿಗೆ ಭಾಜನರಾದವರು.

ಕುವೆಂಪು ಅವರ ಸಾಹಿತ್ಯ ಕೇವಲ ಕರ್ನಾಟಕಕ್ಕೆ ಸೀಮಿತವಾಗಿಲ್ಲ ರಾಷ್ಟ್ರದಾದ್ಯಂತ ಸಾಹಿತ್ಯ ಪಸರಿಸಿದೆ. ಕನ್ನಡ ಸಾಹಿತ್ಯಕ್ಕೆ, ಸಮಾಜ ಸುಧಾರಣೆಗೆ, ಜಾತ್ಯತೀತ ವ್ಯವಸ್ಥೆಗೆ ಅವರ ಕೊಡುಗೆ ಅಪಾರವಾದದ್ದು. ಇಡೀ ಜಗತ್ತಿಗೆ ವಿಶ್ವ ಮಾನವ ಸಂದೇಶ ಸಾರಿದ ರಾಷ್ಟ್ರಕವಿ ಕುವೆಂಪು ಅವರ ಸಾಹಿತ್ಯದ ಪರಿಕಲ್ಪನೆಗಳನ್ನು ಜೀವನದಲ್ಲಿ ಪ್ರತಿಯೊಬ್ಬರೂ ಅಳವಡಿಸಿಕೊಂಡಾಗ ಉತ್ತಮ ಸಮಾಜ ನಿರ್ಮಾಣ ಸಾಧ್ಯ ಎಂದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಬಿ ಎನ್ ಕೃಷ್ಣಪ್ಪ ಅವರು ' ಉಪನ್ಯಾಸ ನೀಡಿ ಕುವೆಂಪು ಅವರು ಎಲ್ಲರಿಗೂ ಚಿರಪರಿಚಿತರು, ಪ್ರತಿನಿತ್ಯ ಶಾಲಾ ಕಾಲೇಜುಗಳಲ್ಲಿ ಹಾಡುವ ಜೈ ಭಾರತ ಜನನಿಯ ತನುಜಾತೆ ನಾಡಗೀತೆಯಲ್ಲಿ ಅವರು ಎಷ್ಟರ ಮಟ್ಟಿಗೆ ಪರಿಸರವನ್ನು ಪ್ರೀತಿಸುತ್ತಿದ್ದರು ಎಂದು ನಾವು ಕಾಣಬಹುದು, ಅದೇ ರೀತಿ ರೈತ ದೇಶದ ಬೆನ್ನೆಲುಬು ಅಂತ ಹೇಳಿ ರೈತರಿಗೋಸ್ಕರ ಒಂದು ಹಾಡನ್ನು ಬರೆದರು. ನನ್ನ ಕನ್ನಡ ಭಾಷೆಯ ಮಹತ್ವವನ್ನು ಎಲ್ಲೆಡೆ ಸಾರಿದ ಮಹಾನ್ ವ್ಯಕ್ತಿ. ಬಹುಮುಖ್ಯವಾಗಿ ಕಥೆ ಕಾದಂಬರಿ ನಾಟಕ ಕವನಗಳ ಮೂಲಕ ಮಲೆನಾಡಿನ



ಪ್ರಕೃತಿ ಸೌಂದರ್ಯವನ್ನು ನಮಗೆ ಉಣಬಡಿಸಿದವರು. ಎಲ್ಲದಕ್ಕಿಂತ ಹೆಚ್ಚಾಗಿ ಅವರು ಸರ್ವ ಜನಾಂಗದ ಶಾಂತಿಯ ತೋಟ ಎಂದು ಹೇಳಿದವರು ಕುವೆಂಪು ಎಂದರು. ರಂಗ ಕಹಳೆ ಕಲಾ ತಂಡದಿಂದ 'ಕುವೆಂಪು'ರವರ ಬೊಮ್ಮನಹಳ್ಳಿ ಕಿಂದರ ಜೋಗಿ ನಾಟಕ ಪ್ರದರ್ಶನಗೊಂಡಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾ ಅಧಿಕಾರಿಯಾದ ರಾಮಕೃಷ್ಣಯ್ಯ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪನಿರ್ದೇಶಕರಾದ ಡಿ. ಅಶೋಕಕುಮಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ರವಿಕುಮಾರ್, ಜಿಲ್ಲಾ ಮಟ್ಟದ ಅಧಿಕಾರಿಗಳು, ಕನ್ನಡ ಸಾಹಿತ್ಯ ಪರಿಷತ್ ಪದಾಧಿಕಾರಿಗಳು, ಕನ್ನಡಪರ ಸಂಘ-ಸಂಸ್ಥೆಗಳ ಮುಖ್ಯಸ್ಥರು ಸೇರಿದಂತೆ ಸಾರ್ವಜನಿಕರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಪಿಂಜಲ್ರ್ಲುಹಳ್ಳಿಯಲ್ಲಿ ತೊಗರಿ ಬೆಳೆ ಕ್ಷೇತ್ರೋತ್ಸವ

**ಚಿಕ್ಕಬಳ್ಳಾಪುರ:** ಕೃಷಿ ಇಲಾಖೆಯ ವಿವಿಧ ಯೋಜನೆಗಳ ಸವಲತ್ತುಗಳನ್ನು ಸಮರ್ಪಕವಾಗಿ ಸದ್ಬಳಕೆ ಮಾಡಿಕೊಳ್ಳುವಂತೆ ಹಾಗೂ ಬೆಳೆ ಸಮೀಕ್ಷೆ ಮತ್ತು ಬೆಳೆ ಕಟಾವು ಪರೀಕ್ಷೆಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಪಡೆಯಲು ಇಲಾಖೆಯನ್ನು ಸಂಪರ್ಕಿಸಬೇಕೆಂದು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ. ಪಾಪಿರೆಡ್ಡಿ ರವರು ತಿಳಿಸಿದರು.

ಕೃಷಿ ಇಲಾಖೆಯ ವತಿಯಿಂದ ತೊಂಡೇಬಾವಿ ಹೋಬಳಿಯ ಪಿಂಜಲ್ರ್ಲುಹಳ್ಳಿ ಗ್ರಾಮದ ಪ್ರಗತಿಪರ ರೈತ ಚನ್ನಪ್ಪರವರ ಜಮೀನಿನಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ತೊಗರಿ ಬೆಳೆಯ ಕ್ಷೇತ್ರೋತ್ಸವ ಕಾರ್ಯಕ್ರಮವನ್ನು ರವರು ಉದ್ಘಾಟಿಸಿ ಮಾತನಾಡಿದರು. ತೊಗರಿ ಬೆಳೆಯಲ್ಲಿ ಸಮಗ್ರ ಪೀಡೆ ನಿರ್ವಹಣೆ ಮತ್ತು ಸಮಗ್ರ ಪೋಷಕಾಂಶಗಳ ನಿರ್ವಹಣೆ ಬಗ್ಗೆ ಮಾಹಿತಿಯನ್ನು ನೀಡಿದರು. ರೈತರು ಒಂದೇ ಬೆಳೆಯನ್ನು ಬೆಳೆಯುವ ಬದಲಾಗಿ ಸಮಗ್ರ ಕೃಷಿ ಪದ್ದತಿಯನ್ನು ಅಳವಡಿಸಬೇಕು. 2024-25 ನೇ ಸಾಲಿನ ಆಹಾರ ಮತ್ತು ಪೌಷ್ಟಿಕ ಭದ್ರತಾ ಯೋಜನೆಯಡಿ ರಾಜ್ಯದ ಆಹಾರ ಸುಭದ್ರತೆಗೆ ಅತಿ ಹೆಚ್ಚಿನ ಪ್ರಾಮುಖ್ಯತೆ ನೀಡಲಾಗುತ್ತಿದೆ. ಹೆಚ್ಚಿನ ಆಹಾರ ಉತ್ಪಾದನೆ ಮಳೆ ಆಶ್ರಿತ ಪ್ರದೇಶದಿಂದ ಬರುತ್ತಿದ್ದು, ಈ ಪ್ರದೇಶಗಳಲ್ಲಿ ಬಹುತೇಕ ತೃಣ ಧಾನ್ಯ ಮತ್ತು ದ್ವಿದಳ ಧಾನ್ಯಗಳನ್ನು ಬೆಳೆಯಲಾಗುತ್ತಿದೆ. ಮಳೆ ಆಶ್ರಿತ ಪ್ರದೇಶಗಳ ಅಭಿವೃದ್ಧಿಗಾಗಿ ಸ್ಪಷ್ಟ ಹಾಗೂ ಸಮಗ್ರ ಯೋಜನೆಯನ್ನು ರೂಪಿಸುವುದು ಅಗತ್ಯವಾಗಿದೆ ಎಂದರು.

ಸಹಾಯಕ ಕೃಷಿ ನಿರ್ದೇಶಕ ಎಸ್.ಎಂ. ಮೋಹನ್ ರವರು ಮಾತನಾಡಿ, ತೊಗರಿ ಬೆಳೆಯ ತಳಿಗಳಾದ ಬಿ.ಆರ್.ಜಿ-1, ಬಿ.ಆರ್.ಜಿ-2, ಬಿ.ಆರ್.ಜಿ-3, ಬಿ.ಆರ್.ಜಿ-4, ಬಿ.ಆರ್.ಜಿ-5 ಮತ್ತು ಎನ್.ಟಿ.ಎಲ್-2 ತಳಿಗಳ ಬಗ್ಗೆ ವಿವರವಾದ ಮಾಹಿತಿಯನ್ನು ರೈತರಿಗೆ ತಿಳಿಸಿದರು ಹಾಗೂ ಮುಂಗಾರು ಹಂಗಾಮಿನಲ್ಲಿ ಪ್ರತಿ ವರ್ಷವೂ ಜೂನ್ ಮತ್ತು ಜುಲೈ ಮಾಹೆಯಲ್ಲಿ ರೈತರು ಕಡ್ಡಾಯವಾಗಿ ತೊಗರಿ, ಮುಸುಕಿನ ಜೋಳ, ರಾಗಿ ಮತ್ತು ನೆಲಗಡಲೆ ಬೆಳೆಗಳಿಗೆ ಬೆಳೆ ವಿಮೆಗೆ ನೊಂದಣಿ ಮಾಡಿಸಿಕೊಳ್ಳಲು ಮನವಿ ಮಾಡಿದರು.



ಪ್ರಗತಿಪರ ರೈತ ಬೆಳಚಿಕ್ಕನಹಳ್ಳಿ ಗ್ರಾಮದ ಶ್ರೀರಾಮರೆಡ್ಡಿ ರವರು ಮಾತನಾಡಿ, ರೈತರು ರಸಗೊಬ್ಬರಗಳ ಜೊತೆಗೆ ಸಾವಯವ ಗೊಬ್ಬರಗಳನ್ನು ಬಳಸಬೇಕು. ಸರ್ಕಾರದಿಂದ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದು, ರೈತರು ಕಚೇರಿಗಳಿಗೆ ಭೇಟಿ ನೀಡಿ, ತಮಗೆ ಅವಶ್ಯವಿರುವ ಸವಲತ್ತುಗಳನ್ನು ಪಡೆದುಕೊಳ್ಳಬೇಕು. ಇಲಾಖೆಯ ಅಧಿಕಾರಿಗಳೊಂದಿಗೆ ಕೈ ಜೋಡಿಸಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಸಕ್ರಿಯವಾಗಿ ಭಾಗವಹಿಸಬೇಕು ಎಂದರು.

ಆತ್ಮ ಯೋಜನೆಯ ಜಿಲ್ಲಾ ಉಪಯೋಜನಾ ನಿರ್ದೇಶಕ ಸತೀಶ್ ಕುಮಾರ್ ರವರು ಮಾತನಾಡಿ, ''ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ''ಯು ಭಾರತದ ರಾಷ್ಟ್ರೀಯ ಕೃಷಿ ವಿಮಾ ಯೋಜನೆಯಾಗಿದೆ. ಮಳೆಗಳು ಮತ್ತು ಅಕಾಲಿಕ ಮಳೆಗಳು ಹೆಚ್ಚಾಗಿ ಬಿತ್ತನೆಯ ಮುಂಚಿನ ನಷ್ಟಗಳು ಹಾಗೂ ಕೊಯ್ಲಿನ ನಂತರದ ನಷ್ಟಗಳನ್ನು ಕೂಡ ಈ ಯೋಜನೆಯು ಭರಿಸುತ್ತದೆ. ಆದ್ದರಿಂದ ಗ್ರಾಮೀಣ ಪ್ರದೇಶದ ರೈತರು ತಾವು ಬೆಳೆದ ಬೆಳೆಗಳಿಗೆ ಬೆಳೆ ವಿಮೆ ಮಾಡಿಸಬೇಕು ಹಾಗೂ ಈ ಯೋಜನೆಯಡಿ ಬರುವ ಎಲ್ಲಾ ಸೌಲಭ್ಯಗಳನ್ನು ಪಡೆದುಕೊಳ್ಳಬೇಕೆಂದು ರೈತರಲ್ಲಿ ಮನವಿ ಮಾಡಿದರು. ಈ ಸಂದರ್ಭದಲ್ಲಿ ಕೃಷಿ ಅಧಿಕಾರಿ ಕೆ.ವಿ.ಭವ್ಯ ಹಾಗೂ ಪ್ರಗತಿಪರ ರೈತರುಗಳಾದ ಭೀಮೇಗೌಡ, ಜಗದಾಂಬ, ನಯಾಜ್ ಖಾನ್ ಮುಂತಾದವರು ಉಪಸ್ಥಿತರಿದ್ದರು.

## ಸಂಜೆ ಟಿಪ್ಸ್



## ಕಾವ್ಯ ಕಥನಗಳ ಗುಚ್ಛ ಕೃತಿ ಲೋಕಾರ್ಪಣೆ

ಹಿರಿಯ ಐಎಎಸ್ ಅಧಿಕಾರಿ ರಾಜ್ಯ ಸರ್ಕಾರದ ವಿಶ್ರಾಂತ ಮುಖ್ಯ ಕಾರ್ಯದರ್ಶಿ ಡಾ. ಎ.ರವೀಂದ್ರರವರ ನೂತನ ಕೃತಿ 'ಸದ್ಧರ್ಮಗೀತ ' ನಾಲ್ಕು ಕಾವ್ಯಕಥನಗಳ ಗುಚ್ಛ ಲೋಕಾರ್ಪಣೆ ಸಮಾರಂಭವನ್ನು ನಗರದ ಇನ್ಫೆಂಟ್ರಿ ರಸ್ತೆಯ ಐಎಎಸ್ ಅಧಿಕಾರಿಗಳ ಸಂಘದಲ್ಲಿ ಆಯೋಜಿಸಲಾಗಿತ್ತು. ಸೆಂಟರ್ ಫಾರ್ ಸಸ್ಟೈನೆಬಲ್ ಡೆವಲಪ್ಮೆಂಟ್ ಮತ್ತು ಐಎಎಸ್ ಅಧಿಕಾರಿಗಳ ಸಂಘ ಸಹಯೋಗದಲ್ಲಿ ಏರ್ಪಡಿಸಿರುವ ಈ ಸಮಾರಂಭದ ಅಧ್ಯಕ್ಷತೆಯನ್ನು ಸರ್ವೋಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿ ಜಸ್ಟಿಸ್ ಶಿವರಾಜ ವಿ ಪಾಟೀಲ ವಹಿಸಿ ಕೃ ತಿ ಲೋಕಾರ್ಪಣೆ ಮಾಡಿ ಮಾತನಾಡುತ್ತ ಕಾವ್ಯಕ್ಕೆ ಚುಂಬಕ ಶಕ್ತಿ ಉಂಟು. ಅದು ಎಲ್ಲರನ್ನೂ ತನ್ನತ್ತ ಸೆಳೆದುಕೊಳ್ಳುತ್ತದೆ. ಭಾವಯತ್ರಿ ಪ್ರತಿಭೆವುಳ್ಳವರು ಕೂಡ ಕಾವ್ಯ ರಚನೆಗೆ ಕೈ ಹಾಕಿದವರುಂಟು, ಅಂತಹವರು ಕಾರಯಿತ್ರಿಯ ಕೈಯನ್ನು ಹಿಡಿಯುತ್ತಾರೆ. ಡಾ.ಎ ರವೀಂದ್ರರವರು ಈ ಸಾಲಿಗೆ ಸೇರಿದವರು . ಲೌಕಿಕ ಜ್ಞಾನ ಭಾಷೆ ಇಂಗ್ಲಿಷ್, ಮಾತೃಭಾಷೆ ತೆಲುಗು, ಹೃದಯದ ಭಾಷೆಯಾಗಿ ಕನ್ನಡದಲ್ಲಿ ಕಾವ್ಯ ಸಂವೇದನೆ ಇರುವ ವೈಚಾರಿಕ ಕಾವ್ಯ 'ಸದ್ಧರ್ಮ ಗೀತ' ನಮ್ಮ ಮುಂದೆ ಇಟ್ಟಿದ್ದಾರೆ ಎಂದು ತಿಳಿಸಿದರು.

### ನಿಮಗಿದು ಗೊತ್ತೇ?

ಎಂ. ವೆಂಕಟೇಶ್ ಶೇಷಾದ್ರಿ

5. 'ಮಂಕುತಿಮ್ಮನ ಕಗ್ಗ' ಕೃತಿಯನ್ನು ರಚಿಸಿದವರು ಯಾರು ?

[illegible]

## ಬೆಳ್ಳುಳ್ಳಿ ಗೊಜ್ಜು

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಬೆಳ್ಳುಳ್ಳಿ- 3 ಗಡ್ಡೆ ಮೆಂತ್ಯ - 1 ಚಮಚ ಜೀರಿಗೆ ಇಂಗು ಸಾಸಿವೆ ಹಸಿಮೆಣಸು ಕರಿಬೇವು ಕೊತ್ತಂಬರಿ ಸೊಪ್ಪು ಎಣ್ಣೆ ಈರುಳ್ಳಿ- 2 ಟೊಮೆಟೋ -1 ಅರಶಿಣ ಖಾರದ ಪುಡಿ-1 ಚಮಚ ಸಾಂಬಾರ್ ಪುಡಿ-1 ಚಮಚ ಧನಿಯಾ- ಅರ್ಧ ಚಮಚ ಹುಣಸೆ ಹುಳಿ

### ಮಾಡುವ ವಿಧಾನ

ಮೊದಲು ಒಂದು ಪಾತ್ರೆ ಇಟ್ಟು ಅದಕ್ಕೆ ಸ್ವಲ್ಪ ಜಾಸ್ತಿ ಎಣ್ಣೆ ಹಾಕಿಕೊಳ್ಳಿ. 6 ಚಮಚ ಎಣ್ಣೆ ಹಾಕಿಕೊಳ್ಳಿ. ಬಳಿಕ ಇದಕ್ಕೆ ಸಾಸಿವೆ ಹಾಕಿಕೊಳ್ಳಿ. ಬಳಿಕ ಇಂಗು, ಮೆಂತ್ಯ, ಜೀರಿಗೆ ಹಾಕಿಕೊಳ್ಳಿ. ಇದಕ್ಕೆ ಹಸಿಮೆಣಸು, ಕರಿಬೇವು, ಬೆಳ್ಳುಳ್ಳಿ ಹಾಕಿಕೊಂಡು ಫ್ರೈ ಮಾಡಿ. 3 ನಿಮಿಷದ ವರೆಗೆ ಇದನ್ನು ಫ್ರೈ ಮಾಡಿದ ಬಳಿಕ ಈರುಳ್ಳಿಯನ್ನು ಹಾಕಿ, ಅಲ್ಲದೆ ಟೊಮೆಟೋ ಸಹ ಹಾಕಿಕೊಂಡು ಹಸಿ ವಾಸನೆ ಹೋಗುವವರೆಗು ಚೆನ್ನಾಗಿ ಫ್ರೈ ಮಾಡಿಕೊಳ್ಳಿ. 2 ನಿಮಿಷದ ಬಳಿಕ ಇದಕ್ಕೆ ಖಾರದ ಪುಡಿ, ಸಾಂಬಾರ್ ಪುಡಿ, ಧನಿಯಾ ಪುಡಿ, ಅರಶಿಣ, ಉಪ್ಪು ಹಾಕಿಕೊಂಡು ಮಿಕ್ಸ್ ಮಾಡಿಕೊಳ್ಳಿ. ಹೀಗೆ ಮಿಕ್ಸ್ ಮಾಡಿದ ಬಳಿಕ ಒಂದು ದೊಡ್ಡ ಗೋಲಿ ಗಾತ್ರದ ಹುಣಸೆ ಹಣ್ಣು ತೆಗೆದುಕೊಂಡು ಅದರ ಹುಳಿಯನ್ನು ತೆಗೆದುಕೊಂಡು ಇದಕ್ಕೆ ಹಾಕಿಕೊಳ್ಳಿ. ಈಗ ಒಲೆ ಸಣ್ಣಗೆ ಮಾಡಿಕೊಂಡು 20 ನಿಮಿಷ ಚೆನ್ನಾಗಿ ಕುದಿಸಿಕೊಳ್ಳಬೇಕು. 20 ನಿಮಿಷದ ಬಳಿಕ ಮುಚ್ಚಳ ತೆಗೆದು ಕೈಯಾಡಿಸಿ. ಬಳಿಕ ಕೊನೆಯಲ್ಲಿ ಸ್ವಲ್ಪ ಕೊತ್ತಂಬರಿ ಸೊಪ್ಪು ಹಾಕಿಕೊಂಡು ಒಲೆ ಆಫ್ ಮಾಡಿಕೊಳ್ಳಿ. ಇಷ್ಟಾದರೆ ನಿಮ್ಮ ಮುಂದೆ ಬೆಳ್ಳುಳ್ಳಿ ಗೊಜ್ಜು ರೆಡಿಯಾಗಿರುತ್ತದೆ. ಇದನ್ನು ಅನ್ನದ ಜೊತೆ ಸವಿಯಲು ತುಂಬಾನೆ ತುಚಿ ಇರಲಿದೆ.

## ಸಿಎಂ ಆಗ್ಬೇಕು ಎಂಬ ಆಸೆ ಇದೆ: ತ್ರಿಶಾ



ನಟಿ ತ್ರಿಶಾ ತಮ್ಮ ನಟನೆಯ ಮೂಲಕ ಅಷ್ಟೆ ಅಲ್ಲದೆ ತಮ್ಮ ಸೌಂದರ್ಯದ ಮೂಲಕ ಜನರ ಮನಸ್ಸನ್ನು ಗೆದ್ದವರು, ಇವರಿಗೆ ಇಂದಿಗೂ ಕೂಡ ಲಕ್ಷಾಂತರ ಅಭಿಮಾನಿಗಳಿದ್ದಾರೆ. ಪಡ್ಡೆ ಹುಡುಗರಂತೂ ನಟಿ ತ್ರಿಶಾ ಅವರನ್ನು ತಮ್ಮ ಹೃದಯದಲ್ಲಿಟ್ಟು ಪೂಜಿಸುತ್ತಾರೆ ಅಂತಲೇ ಹೇಳಬಹುದು.

ಸಿನಿಮಾ ನಟ ನಟಿಯರು ಅಂದ್ರೆ, ರಾಜಕೀಯಕ್ಕೆ ಎಂಟ್ರಿ ಕೊಡುವುದು, ರಾಜಕೀಯದ ಕಡೆಗೆ ಒಲವು ತೋರುವುದು ಇವೆಲ್ಲವೂ ಸಾಮಾನ್ಯ, ಆದರೆ ನಟಿ ತ್ರಿಶಾ ಕೂಡ ಇದೀಗ ತಾವು ರಾಜಕೀಯಕ್ಕೆ



ಎಂಟ್ರಿ ಕೊಡಲಿರುವ ಸುಳಿವನ್ನು ನೀಡಿದ್ದಾರೆ. ತಮಗೆ ಚೀಫ್ ಮಿನಿಸ್ಟರ್ ಆಗುವ ಆಸೆ ಇದೆ ಎಂದು ಬಿಚ್ಚಿಟ್ಟಿದ್ದಾರೆ.

ಸಿನಿಮಾ ಇಂಡಸ್ಟ್ರಿಯಲ್ಲಿ ಸಕ್ಸಸ್ ಕಂಡ ತಮಿಳಿನ ಅನೇಕ ನಟ ನಟಿಯರು ರಾಜಕೀಯದಲ್ಲಿಯೂ ಸಕ್ಸಸ್ ಆದ ಅದೆಷ್ಟೋ ಉದಾಹರನೆಗಳನ್ನು ನಾವು ನೋಡಿರುತ್ತೇವೆ. ಅದರಲ್ಲೂ ಎಂ.ಜಿ. ಆರ್ ಹಾಗೂ ಜೆ. ಜಯಲಲಿತಾ ಅಂತಹ ಅಪಾರ ವ್ಯಕ್ತಿತ್ವದವರನ್ನು ನಾವು ಇಂದಿಗೂ ಮರೆಯಲು ಅಸಾಧ್ಯ. ಇದೀಗ ಇವರ ಹೆಜ್ಜೆಯ ಕಡೆಗೆ ನಟಿ ತ್ರಿಶಾ ಕೂಡ ಹೆಜ್ಜೆ ಇಡುವಂತೆ ಕಾಣುತ್ತಿದೆ, ಈ ಖ್ಯಾತ ನಟ ಹಾಗೂ ರಜಕರಣಿಗಳ ನೆರಳನ್ನು ನಟಿ ತ್ರಿಶಾ ಹಿಂಬಾಲಿಸದಂತೆ ಕಾಣುತ್ತಿದೆ. ನಟಿ ತ್ರಿಶಾ ತಮಗೆ ಸಮಾಜ ಸೇವೆ ಮಾಡುವ ಆಸೆ ಇದೆ, ಜನರಿಗೆ ಸೇವೆ ಮಾಡಬೇಕು, ಜನರ ಸೇವೆಯಲ್ಲಿ ತೊಡಗಬೇಕು ಎಂಬುದು ನನ್ನ ಆಸೆ, ನನಗೆ ಸಿಎಂ ಆಗುವ ಆಸೆ ಇದೆ ಎಂದು ಹೇಳಿಕೊಂಡಿದ್ದಾರೆ. ಇದನ್ನು ಕೆಲವರು ಹಾಸ್ಯದಂತೆ ಪರಿಗಣಿಸಿದರೆ, ಇನ್ನೂ ಕೆಲವರು ತಮ್ಮ ನೆಚ್ಚಿನ ನಟಿಯ ನಿರ್ಧಾರಕ್ಕೆ ಸಪೋರ್ಟ್ ಮಾಡುತ್ತಿದ್ದಾರೆ. ನಟಿ ತ್ರಿಶಾ ನಿಜವಾಗಿಯೂ ರಾಜಕೀಯಕ್ಕೆ ಎಂಟ್ರಿ ಕೊಡುತ್ತಾರಾ. ರಾಜಕೀಯಕ್ಕೆ ಪ್ರವೇಶ ಪಡೆದು ಎಂ ಜಿ ಆರ್ ಹಾಗೂ ಜಯಲಲಿತಾರಂತೆ ಖ್ಯಾತಿ ಪಡೆಯುತ್ತಾರಾ ಎಂಬುದನ್ನು ಇನ್ನೂ ಮುಂದಷ್ಟೆ ಕಾದು ನೋಡಬೇಕಿದೆ.

## ಹಲ್ಲಿನ ಸವೆತ




ನಮ್ಮ ಹಲ್ಲುಗಳು ಗಟ್ಟಿಯೇ ಆಗಿದ್ದರೂ ಸರಿ, ಕೆಲವು ರಾಸಾಯನಿಕಗಳು ಸತತವಾಗಿ ಇವನ್ನು ಬಾಧಿಸುತ್ತಿದ್ದರೆ ಸವೆಯುತ್ತವೆ. ತಂಬಾಕಿನಲ್ಲಿರುವ ರಾಸಾಯನಿಕಗಳು ಅತಿ ಪ್ರಬಲವಾಗಿದ್ದು ತಂಬಾಕು ವ್ಯಸನಿಗಳ ಹಲ್ಲುಗಳು ಸವೆದು ಸವೆದು ಬ್ಲೇಡಿನಂತೆ ತೆಳುವಾಗಿರುತ್ತವೆ ಹಾಗೂ ಅತಿ ಸುಲಭವಾಗಿ ಮುರಿಯುತ್ತವೆ. ಬುರುಗು ಪಾನೀಯಗಳಲ್ಲಿರುವ ರಾಸಾಯನಿಕಗಳಿಗೂ ಹಲ್ಲುಗಳನ್ನು ಕರಗಿಸುವ ಶಕ್ತಿ ಇದೆ. ತಪ್ಪಾದ ಕ್ರಮದಿಂದ, ಅತಿ ಗಡಸಾದ ಹಲ್ಲುಜ್ಜುವ ಬ್ರಶ್ ನಿಂದ ಅತಿ ಹೆಚ್ಚಿನ ಒತ್ತಡ ನೀಡಿ ಹಲ್ಲುಜ್ಜುವ ಅಭ್ಯಾಸ ಇರುವ ವ್ಯಕ್ತಿಗಳ ಹಲ್ಲುಗಳೂ ಬೇಗನೇ ಸವೆಯುತ್ತವೆ.

ಹೀಗೆ ಸವೆದ ಹಲ್ಲಿನ ಒಳಭಾಗದ ನರಾಗ್ರಗಳು ಸುಲಭವಾಗಿ ಹಲ್ಲಿನ ಹೊರಮೈಯ ಮೂಲಕ ತಂಪು ಅಥವಾ ಬಿಸಿಗೆ ಒಡ್ಡಿಕೊಳ್ಳುತ್ತವೆ. ಪರಿಣಾಮವಾಗಿ ಸೂಕ್ಷ್ಮ ಸಂವೇದನೆಯ ಅನುಭವ ಆಗುತ್ತದೆ. ಈ ಸವೆತ ಇದ್ದರೆ ತಕ್ಷಣವೇ ದಂತ ವೈದ್ಯರಲ್ಲಿ ಧಾವಿಸಿ ಸೂಕ್ತ ಚಿಕಿತ್ಸೆ ಪಡೆದುಕೊಳ್ಳಬೇಕು.

ಹಲ್ಲಿನ ಮೇಲಿನ ಕಲೆಗಳ ನಿವಾರಣೆ (ಸ್ಕೇಲಿಂಗ್), ಬಿಳಿಚಿಸುವುದು (ವೈಟನಿಂಗ್) ಮತ್ತು ಹುಳುಕುಗಳನ್ನು ಮುಚ್ಚುವ ಚಿಕಿತ್ಸೆ (ಕಾಂಪೋಸಿಟ್ ಫಿಲ್ಲಿಂಗ್) ಮೊದಲಾದ ಚಿಕಿತ್ಸೆಗಳ ಬಳಿಕ ಹಲ್ಲುಗಳು ತಾತ್ಕಾಲಿಕ ಅವಧಿಗೆ ಸೂಕ್ಷ್ಮ ಸಂವೇದಿಯಾಗುತ್ತವೆ. ಸಾಮಾನ್ಯವಾಗಿ ಒಂದು ವಾರದವರೆಗೆ ಈ ಭಾವನೆ ಇರುತ್ತದೆ. ಕೆಲವರಲ್ಲಿ ಎರಡು ವಾರಗಳವರೆಗೂ ಮುಂದುವರೆಯಬಹುದು.

ಚಳಿಗಾಲದ ಆಗಮನದ ಜೊತೆಗೇ ಹಲ್ಲುಗಳ ಸೂಕ್ಷ್ಮ ಸಂವೇದನೆಯೂ ಆಗಮಿಸುತ್ತದೆ. ಏಕೆಂದರೆ, ಈ ಬದಲಾವಣೆಗೆ ದೇಹವಿನ್ನೂ ಹೊಂದಿಕೊಂಡಿರದ ಕಾರಣ ಹಲ್ಲುಗಳ ಸಂವೇದನೆ ಪ್ರಾರಂಭದ ಕೆಲದಿನಗಳವರೆಗೆ ಕಾಣಿಸಿಕೊಳ್ಳಬಹುದು.

## ಕಣ್ರೆಪ್ಪೆ, ಹುಬ್ಬುಗಳು ದಪ್ಪವಾಗಲು ನೈಸರ್ಗಿಕ ವಿಧಾನ

### ಬ್ಯೂಟಿ ಟಿಪ್ಸ್

ಹೇಗಾದರೂ, ನೀವು ಮನೆ ಮದ್ದನ್ನು ಸರಳ ಸಲಹೆಯ ವಿಧಾನವನ್ನು ಪ್ರಯತ್ನಿಸಿದರೆ, ಈ ವಿಷಯದ ಬಗ್ಗೆ ಯಾವುದೇ ಭಯವಿರುವುದಿಲ್ಲ. ಇತ್ತೀಚೆಗೆ, ಆಯುರ್ವೇದ ತಜ್ಞರು ನಿಮ್ಮ ಸೌಂದರ್ಯವನ್ನು ಹೆಚ್ಚಿಸಲು ನೈಸರ್ಗಿಕ ವಿಧಾನವನ್ನು ಹೇಳಿದ್ದಾರೆ. ಅದರ ಸಹಾಯದಿಂದ, ಕಣ್ರೆಪ್ಪೆಗಳು ಮತ್ತು ಹುಬ್ಬುಗಳು ದಪ್ಪವಾಗುತ್ತವೆ ಮತ್ತು ಗಾಢವಾಗುತ್ತವೆ. ಆಯುರ್ವೇದ ತಜ್ಞೆ ಡಾ.ನಿತಿಕಾ ಕೊಹ್ಲಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ದಪ್ಪ ಮತ್ತು ಕಪ್ಪು ಹುಬ್ಬುಗಳು ಫ್ಯಾಷನ್ನಲ್ಲಿವೆ. ಆದರೆ ಅನೇಕರಿಗೆ ಇದು ಕನಸಿನಂತಿದೆ. ನಾವು ವಯಸ್ಸಾದಂತೆ, ನಮ್ಮ ಹುಬ್ಬುಗಳು ತೆಳುವಾಗುತ್ತವೆ ಮತ್ತು ಹಗುರವಾಗಿರುತ್ತವೆ. ಯುವಜನತೆಯಲ್ಲಿಯೂ ಈ ಸಮಸ್ಯೆ ಕಂಡು ಬರುತ್ತಿದೆ. ಇದರ ಹಿಂದೆ ಹಾರ್ಮೋನುಗಳು ಮತ್ತು ಕೆಟ್ಟ ಜೀವನಶೈಲಿ ಇದೆ. ಇದರಿಂದಾಗಿ ಹುಬ್ಬುಗಳು ತೆಳುವಾಗಿ ಕಾಣುತ್ತವೆ. ಕ್ಯಾಸ್ಟರ್ ಆಯಿಲ್ ಅನ್ನು ಹೆಚ್ಚಾಗಿ ಕೂದಲು ಮತ್ತು ಚರ್ಮದ ಆರೈಕೆಯಲ್ಲಿ ಬಳಸಲಾಗುತ್ತದೆ. ಕೂದಲಿನ ಬೆಳವಣಿಗೆಗೆ ಇದು ತುಂಬಾ ಪರಿಣಾಮಕಾರಿ ಎಂದು ಪರಿಗಣಿಸಲಾಗಿದೆ. ವಾಸ್ತವವಾಗಿ, ಇದು ರಿಸಿನೋಲಿಕ್ ಆಮ್ಲವನ್ನು ಹೊಂದಿರುತ್ತದೆ. ಇದು ಕೂದಲಿನ ಬೆಳವಣಿಗೆಯನ್ನು ಸುಧಾರಿಸಲು ಸಹಾಯ ಮಾಡುತ್ತದೆ. ಆದ್ದರಿಂದ, ಕೂದಲಿನ ಬೆಳವಣಿಗೆಯನ್ನು ನಿಲ್ಲಿಸಿದ ಜನರು ಕ್ಯಾಸ್ಟರ್ ಆಯಿಲ್ ಅನ್ನು ಬಳಸುತ್ತಾರೆ. ಆದಾಗ್ಯೂ, ನೆತ್ತಿಯ ಕೂದಲಿನ ಜೊತೆಗೆ, ಇದನ್ನು ಹುಬ್ಬುಗಳು ಮತ್ತು ಕಣ್ರೆಪ್ಪೆಗಳಿಗೆ ಸಹ ಬಳಸಬಹುದು. ಕಣ್ಣಿನ ರೆಪ್ಪೆಗಳು ಮತ್ತು ಹುಬ್ಬುಗಳಿಗೆ ಕ್ಯಾಸ್ಟರ್ ಆಯಿಲ್ ಅನ್ನು ಅನ್ವಯಿಸಲು ಸ್ಪೂಲಿ ಬ್ರಷ್ ಅನ್ನು ಬಳಸಬಹುದು. ಇದು ಅನುಸ್ಥಾಪನೆಯನ್ನು ಸುಲಭಗೊಳಿಸುತ್ತದೆ.



- ಮೊದಲು ಸ್ಪೂಲಿಯನ್ನು ಕ್ಯಾಸ್ಟರ್ ಆಯಿಲ್ನಲ್ಲಿ ಅದ್ದಿ ನಂತರ ಅದನ್ನು ರೆಪ್ಪೆಗೂದಲುಗಳ ಮೇಲೆ ಹಚ್ಚಿ. ನೀವು ಮಸ್ಕರಾವನ್ನು ಬಳಸುವಂತೆಯೇ. ಹುಬ್ಬುಗಳಿಗೆ ಅದೇ ವಿಧಾನವನ್ನು ಪ್ರಯತ್ನಿಸಿ. ಆದಾಗ್ಯೂ, ಈ ಸಮಯದಲ್ಲಿ ನಿಮ್ಮ ಕಣ್ಣುಗಳ ಆರೈಕೆಯನ್ನು ಮರೆಯಬೇಡಿ.

ಇದನ್ನು ಮೇಲಿನ ರೆಪ್ಪೆಗೂದಲುಗಳಿಗೆ ಅನ್ವಯಿಸಿದ ನಂತರ, ಕೆಳಗಿನ ರೆಪ್ಪೆಗೂದಲುಗಳಿಗೂ ಅನ್ವಯಿಸಿ.

## ಐಪಿಒಗೆ ನೋಂದಾಯಿಸಿದ ವಿಪುಲ್ ಅಮೃತಲಾಲ್ ಶಾ ಅವರ ಸನ್ಶೈನ್ ಪಿಕ್ಚರ್ಸ್




ಖ್ಯಾತ ನಿರ್ಮಾಪಕರು, ಚಲನಚಿತ್ರಗಳು ಮತ್ತು ಟಿವಿ ಕಾರ್ಯಕ್ರಮಗಳ ನಿರ್ದೇಶಕರು ಮತ್ತು ದಶಕಗಳಿಂದ ಭಾರತದ ಮನರಂಜನಾ ಉದ್ಯಮದಲ್ಲಿ ಪ್ರಮುಖ ವ್ಯಕ್ತಿಯಾಗಿ ಗುರುತಿಸಿಕೊಂಡಿರುವ ವಿಪುಲ್ ಅಮೃತಲಾಲ್ ಶಾ ಅವರು ತಮ್ಮ ಕಂಪನಿ ಸನ್ಶೈನ್ ಪಿಕ್ಚರ್ಸ್ ಲಿಮಿಟೆಡ್ ಅನ್ನು ಸಾರ್ವಜನಿಕ ಮಾರುಕಟ್ಟೆಗೆ ತೆರೆಯಲು ಪ್ರಸ್ತಾಪಿಸಿದ್ದಾರೆ.

ಚಲನಚಿತ್ರಗಳು ಮತ್ತು ವೆಬ್ಸರಣಿಗಳ ಸೃಷ್ಟಿ, ಅಭಿವೃದ್ಧಿ, ನಿರ್ಮಾಣ, ಮಾರ್ಕೆಟಿಂಗ್ ಮತ್ತು ವಿತರಣೆಯ ವ್ಯವಹಾರದಲ್ಲಿ ತೊಡಗಿರುವ ಪ್ರತಿಷ್ಠಿತ ಮತ್ತು ಪ್ರಸಿದ್ಧ ನಿರ್ಮಾಣ ಸಂಸ್ಥೆಗಳಲ್ಲಿ ಒಂದಾದ ಸನ್ಶೈನ್ ಪಿಕ್ಚರ್ಸ್ ಲಿಮಿಟೆಡ್, ಆರಂಭಿಕ ಸಾರ್ವಜನಿಕ ಕೊಡುಗೆಗಾಗಿ (ಐಪಿಒ) ಷೇರು ಮಾರಾಟ ಕುರಿತಾದ ಕರಡು ದಾಖಲೆ ಪತ್ರ (ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್-ಡಿ ಆರ್ ಎಚ್ ಪಿ) ಅನ್ನು ಸಲ್ಲಿಸಿದೆ.

ಡಿಆರ್ಎಚ್ಪಿ ಒಟ್ಟು 83.75 ಲಕ್ಷ ಈಕ್ವಿಟಿ ಷೇರುಗಳನ್ನು ಒಳಗೊಂಡಿದೆ, ಇದರಲ್ಲಿ 50 ಲಕ್ಷ ಈಕ್ವಿಟಿ ಷೇರುಗಳವರೆಗೆ ಹೊಸ ವಿತರಣೆ ಮತ್ತು 33.75 ಲಕ್ಷ ಈಕ್ವಿಟಿ ಷೇರುಗಳವರೆಗೆ ಆಫರ್ ಫಾರ್ ಸೇಲ್ (ಒಎಫ್ ಎಸ್) ಸೇರಿದೆ. ಪ್ರವರ್ತಕ ಮಾರಾಟ ಷೇರುದಾರರಾಗಿ ವಿಪುಲ್ ಅಮೃತಲಾಲ್ ಶಾ ಅವರು 23,69,200 ಈಕ್ವಿಟಿ ಷೇರುಗಳನ್ನು ಮಾರಾಟ ಮಾಡಲು ಪ್ರಸ್ತಾಪಿಸಿದ್ದಾರೆ. ಮತ್ತು ಪ್ರವರ್ತಕ ಮಾರಾಟ ಷೇರುದಾರರಾಗಿ ಶೆಫಾಲಿ ವಿಪುಲ್ ಶಾ 10,05,800 ಈಕ್ವಿಟಿ ಷೇರುಗಳನ್ನು ಮಾರಾಟ ಮಾಡಲು ಪ್ರಸ್ತಾಪಿಸಿದ್ದಾರೆ.

ಹೊಸ ವಿತರಣೆಯಿಂದ ಬರುವ ಆದಾಯವನ್ನು ಈ ಕೆಳಗಿನ ಉದ್ದೇಶಗಳಿಗೆ ಧನಸಹಾಯ ಮಾಡಲು ಬಳಸಲು ಕಂಪನಿಯು ಪ್ರಸ್ತಾಪಿಸಿದೆ: 1. ಕಾರ್ಯ ಬಂಡವಾಳದ ಅವಶ್ಯಕತೆಗಳನ್ನು ಪೂರೈಸಲು; ಮತ್ತು 2. ಸಾಮಾನ್ಯ ಸಾಂಸ್ಥಿಕ ಉದ್ದೇಶಗಳು. ಇದಲ್ಲದೆ, ಕಂಪನಿಯು ತನ್ನ ಈಕ್ವಿಟಿ ಷೇರುಗಳನ್ನು ಷೇರು ವಿನಿಮಯ ಕೇಂದ್ರಗಳಲ್ಲಿ (ಸ್ಟಾಕ್ ಎಕ್ಸ್ಚೇಂಜ್) ನೋಂದಣಿ ಮಾಡುವ ಪ್ರಯೋಜನವನ್ನು ಸಾಧಿಸಲು ಮತ್ತು ಕಂಪನಿಯ ಗೋಚರತೆ ಮತ್ತು ಬ್ರಾಂಡ್ ಇಮೇಜ್ ಅನ್ನು ಹೆಚ್ಚಿಸಲು ಹಾಗೂ ಭಾರತದಲ್ಲಿ ತನ್ನ ಈಕ್ವಿಟಿ ಷೇರುಗಳಿಗೆ ಸಾರ್ವಜನಿಕ ಮಾರುಕಟ್ಟೆಯನ್ನು ಸೃಷ್ಟಿಸುವ ನಿರೀಕ್ಷೆಯನ್ನು ಹೊಂದಿದೆ.

ಕಂಪನಿಯ ದೀರ್ಘಕಾಲೀನ ದುಡಿಯುವ ಬಂಡವಾಳದ ಅವಶ್ಯಕತೆಗಳಿಗೆ ಆರ್ಥಿಕ ನೆರವು ನೀಡಲು ನಿವ್ವಳ ಆದಾಯದಿಂದ 94 ಕೋಟಿ ರೂ.ಗಳವರೆಗೆ ಬಳಸಲು ಕಂಪನಿಯು ಪ್ರಸ್ತಾಪಿಸಿದೆ. ಕಂಪನಿಯ ಭವಿಷ್ಯದ ಬೆಳವಣಿಗೆಯ ಅವಶ್ಯಕತೆಗಳಿಗೆ ಮತ್ತು ಇತರ ಸಾಂಸ್ಥಿಕ ಉದ್ದೇಶಗಳಿಗಾಗಿ ಹಣಕಾಸು ನೆರವು ಒದಗಿಸಲು ಕಂಪನಿಗೆ ಹೆಚ್ಚುವರಿ ದೀರ್ಘಕಾಲೀನ ದುಡಿಯುವ ಬಂಡವಾಳದ ಅಗತ್ಯವಿದೆ. ಈ ಡಿಆರ್ಎಚ್ಪಿಯ ದಿನಾಂಕದ ಪ್ರಕಾರ, ಕಂಪನಿಯ ನಿರ್ಮಾಣಗಳಲ್ಲಿ ಇವು ಸೇರಿವೆ: () ಹತ್ತು (10) ವಾಣಿಜ್ಯ ಚಲನಚಿತ್ರಗಳು, ಇವುಗಳ ಪೈಕಿ ಆರು (6) ಪ್ರತಿಷ್ಠಿತ ಸ್ಟುಡಿಯೋಗಳೊಂದಿಗೆ ಸಹ-ನಿರ್ಮಿಸಲ್ಪಟ್ಟಿವೆ; () ಎರಡು (2) ವೆಬ್ ಸರಣಿಗಳು; () ಎರಡು (2) ಟಿವಿ ಧಾರಾವಾಹಿ; ಮತ್ತು (ತ) ಒಂದು (1) ಕಿರುಚಿತ್ರ. ಇದಲ್ಲದೆ, ಪ್ರಸ್ತುತ, ಕಂಪನಿಯು ಜಿಯೋ ಸ್ಟುಡಿಯೋಸ್ ಜೊತೆ ಎರಡು (2) ವಾಣಿಜ್ಯ ಚಲನಚಿತ್ರ ಯೋಜನೆಗಳನ್ನು ಸಹ-ನಿರ್ಮಾಣ ಮಾಡುತ್ತಿದ್ದು, ಅವು ನಿರ್ಮಾಣ ಹಂತದಲ್ಲಿವೆ. ಜೊತೆಗೆ, ಪ್ರಸಾರಭಾರತಿಯ ದೂರದರ್ಶನಕ್ಕಾಗಿ ಒಂದು (1) ವೆಬ್ ಸರಣಿಯನ್ನು ಸ್ವತಂತ್ರವಾಗಿ ನಿರ್ಮಾಣ ಮಾಡುತ್ತಿದ್ದು, ಇದು ದೂರದರ್ಶನ ಚಾನೆಲ್ ಮತ್ತು ಅದರ ಒಟಿಟಿ ವೇದಿಕೆಯಲ್ಲಿ ಪ್ರಸಾರವಾಗುತ್ತಿದೆ. ಕಂಪನಿಯು ಎಂಟು (8) ಚಲನಚಿತ್ರಗಳು ಮತ್ತು 2(ಎರಡು) ವೆಬ್ ಸರಣಿಗಳನ್ನು ನಿರ್ಮಾಣ ಮಾಡುತ್ತಿದ್ದು, ಅದರ ಕೆಲಸ ಪ್ರಗತಿಯಲ್ಲಿದೆ.

ಡಿಆರ್ಎಚ್ಪಿ ದಿನಾಂಕದ ಪ್ರಕಾರ, ಕಂಪನಿಯು ಜಿಯೋ ಸ್ಟುಡಿಯೋಸ್ ಜೊತೆ ಎರಡು (2) ಚಲನಚಿತ್ರ ಯೋಜನೆಗಳನ್ನು ಸಹ-ನಿರ್ಮಿಸುತ್ತಿದೆ, ಅವುಗಳಲ್ಲಿ ಒಂದು, 'ಹಿಸಾಬ್' (ಚಿತ್ರದ ತಾರಾಗಣದಲ್ಲಿ ಶೆಫಾಲಿ ವಿಪುಲ್ ಶಾ, ಜೈದೀಪ್ ಅಹ್ಲಾವತ್, ಅಭಿಷೇಕ್ ಬ್ಯಾನರ್ಜಿ ಮತ್ತು ಇತರರು ಸೇರಿದ್ದಾರೆ) 2025ರ ಕ್ಯಾಲೆಂಡರ್ ವರ್ಷದ ಮೊದಲ ತ್ರೈಮಾಸಿಕದಲ್ಲಿ ಬಿಡುಗಡೆಯಾಗಲಿದೆ. ಕಂಪನಿಯು ದೂರದರ್ಶನಕ್ಕಾಗಿ ಕೇವಲ ಒಂದು (1) ವೆಬ್ ಸರಣಿಯನ್ನು ನಿರ್ಮಿಸುತ್ತಿದೆ, ಇದು ದೂರದರ್ಶನ ಚಾನೆಲ್ ಮತ್ತು ಅದರ ಒಟಿಟಿ ವೇದಿಕೆಯಲ್ಲಿ ಸ್ಟ್ರೀಮಿಂಗ್ ಆಗುತ್ತಿದೆ. ಮುಂಬರುವ ಚಿತ್ರವು ಗುಡ್ ಮಾರ್ನಿಂಗ್ ರಿಯಾ, ಗವರ್ನರ್, ದಿ ಕೇರಳ ಸ್ಟೋರಿ-2, ಬುಲ್ಡೋಜರ್, ಸಮುಕ್, ಕಾನ್ವಾ ಮತ್ತು ಭೀಮ್ ಅನ್ನು ಒಳಗೊಂಡಿವೆ. ವೆಬ್-ಸರಣಿ ಯೋಜನೆಗಳಲ್ಲಿ ಮಾಯಾ, ನಾನಾವತಿ ವರ್ಸಸ್ ನಾನಾವತಿ ಮತ್ತು ವಿಜಿಲ್ ಬ್ಲೋವರ್ ಸೇರಿವೆ.

ಕಂಪನಿಯು ಕಳೆದ 3 ಹಣಕಾಸು ವರ್ಷಗಳಲ್ಲಿ ಮತ್ತು ಹಣಕಾಸು ವರ್ಷ 2025ರ ಮೊದಲಾರ್ಧದಲ್ಲಿ ಲಾಭದಾಯಕವಾಗಿದೆ. ಕಾರ್ಯಾಚರಣೆಯಿಂದ ಕಂಪನಿಯ ಆದಾಯ 2024ರಲ್ಲಿ 133.8 ಕೋಟಿ ರೂ., 2023ರಲ್ಲಿ 26.51 ಕೋಟಿ ರೂ. 2022ರ ಹಣಕಾಸು ವರ್ಷದಲ್ಲಿ 87.13 ಕೋಟಿ ರೂ. ಆಗಿದೆ. 2025ರ ಮೊದಲಾರ್ಧದಲ್ಲಿ (ಎಚ್1ಎಫ್ವೈ25) ಕಾರ್ಯಾಚರಣೆಯಿಂದ ಕಂಪನಿಯ ಆದಾಯ 39.02 ಕೋಟಿ ರೂ.; ಕಂಪನಿಯ ಇಬಿಐಟಿಡಿಎ 2025ರ ಮೊದಲಾರ್ಧದಲ್ಲಿ (ಎಚ್1ಎಫ್ವೈ25) 77.75 ಕೋಟಿ ರೂ.; 2024ರ ಹಣಕಾಸು ವರ್ಷದಲ್ಲಿ 73.08 ಕೋಟಿ ರೂ.; 2023ರಲ್ಲಿ 4.46 ಕೋಟಿ ರೂ., 2022ರಲ್ಲಿ 15.21 ಕೋಟಿ ರೂ. ಆಗಿದೆ. 2025ರ ಮೊದಲ ತ್ರೈಮಾಸಿಕದಲ್ಲಿ ನಿವ್ವಳ ಲಾಭ 45.64 ಕೋಟಿ ರೂ. 2024ರ ಹಣಕಾಸು ವರ್ಷದಲ್ಲಿ 52.45 ಕೋಟಿ ರೂ. 2023ರಲ್ಲಿ 2.31 ಕೋಟಿ ರೂ., 2022ರಲ್ಲಿ 11.2 ಕೋಟಿ ರೂ. ಆಗಿದೆ.

2007ರಲ್ಲಿ ಸ್ಥಾಪನೆಯಾದ ಸನ್ಶೈನ್ ಪಿಕ್ಚರ್ಸ್ ಸಂಸ್ಥೆಯು ಚಲನಚಿತ್ರಗಳು, ಟಿವಿ ಧಾರಾವಾಹಿಗಳು ಮತ್ತು ವೆಬ್ ಸರಣಿಗಳ(ಯೋಜನೆಗಳು) ಸೃಷ್ಟಿ, ರಚನೆ, ಅಭಿವೃದ್ಧಿ, ನಿರ್ಮಾಣ, ಮಾರ್ಕೆಟಿಂಗ್ ಮತ್ತು ವಿತರಣೆಯ ವ್ಯವಹಾರದಲ್ಲಿ ತೊಡಗಿರುವ ಒಂದು ಪ್ರೊಡಕ್ಷನ್ ಹೌಸ್ ಆಗಿದೆ. ಸಂಯೋಜನೆಯ ನಂತರ, ಕಂಪನಿಯು ಆಧುನಿಕ ಭಾರತೀಯ ಚಿತ್ರರಂಗದಲ್ಲಿ ವಿವಿಧ ಪ್ರಮುಖ ಮನರಂಜನಾ ಯೋಜನೆಗಳನ್ನು ಪೂರೈಸಿದೆ. ತನ್ನ ಬ್ಯಾನರ್ ಅಡಿಯಲ್ಲಿ ಸಂಸ್ಥೆಯ ಚೊಚ್ಚಲ ನಿರ್ಮಾಣವಾದ 'ಫೋರ್ಸ್' ಗಲ್ಲಾಪೆಟ್ಟಿಗೆಯಲ್ಲಿ ಯಶಸ್ವಿಯಾಯಿತು. ಅಂದಿನಿಂದ, ಇದು 'ಕಮಾಂಡೋ: ಎ ಒನ್-ಮ್ಯಾನ್ ಆರ್ಮಿ', 'ಹಾಲಿಡೇ: ಎ ಸೋಲ್ಜರ್ ಈಸ್ ನೆವರ್ ಆಫ್ ಡ್ಯೂಟಿ', 'ಫೋರ್ಸ್ 2', 'ಕಮಾಂಡೋ 2: ದಿ ಬ್ಲ್ಯಾಕ್ ಮನಿ ಟ್ರಯಲ್', 'ದಿ ಕೇರಳ ಸ್ಟೋರಿ' ಮುಂತಾದ ಪ್ರಮುಖ, ವಾಣಿಜ್ಯ ಮತ್ತು ಸಾಮಾಜಿಕ ಸಂಬಂಧಿತ ಚಲನಚಿತ್ರಗಳನ್ನು ನಿರ್ಮಾಣ ಮಾಡಿ ವಿತರಣೆ ಮಾಡಿದೆ. ಕಂಪನಿಯ ನಿರ್ಮಾಣಗಳಾದ 'ಫೋರ್ಸ್', 'ಹಾಲಿಡೇ: ಎ ಸೋಲ್ಜರ್ ಈಸ್ ನೆವರ್ ಆಫ್ ಡ್ಯೂಟಿ', 'ಹ್ಯೂಮನ್ (ವೆಬ್ ಸರಣಿ)' ಮತ್ತು 'ದಿ ಕೇರಳ ಸ್ಟೋರಿ' ಚಿತ್ರಗಳು ಮತ್ತು ಈ ಚಿತ್ರಗಳ ಪಾತ್ರವರ್ಗವು ಫಿಲ್ಮ್ಫೇರ್ ಪ್ರಶಸ್ತಿ, ಅಂತರರಾಷ್ಟ್ರೀಯ ಭಾರತೀಯ ಚಲನಚಿತ್ರ ಅಕಾಡೆಮಿ ಪ್ರಶಸ್ತಿ, ಸ್ಟಾರ್ಡಸ್ಟ್ ಪ್ರಶಸ್ತಿಗಳು, ಗ್ಲೋಬಲ್ ಫಿಲ್ಮ್ ಅವಾರ್ಡ್ಸ್, ಅಪ್ಸರಾ ಫಿಲ್ಮ್ ಪ್ರೊಡ್ಯೂಸರ್ಸ್ ಗಿಲ್ಡ್ ಪ್ರಶಸ್ತಿಗಳು, ಬಿಗ್ ಸ್ಟಾರ್ ಎಂಟರ್ಟೈನ್ಮೆಂಟ್ ಪ್ರಶಸ್ತಿಗಳಂತಹ ವಿವಿಧ ಪ್ರಶಸ್ತಿಗಳನ್ನು ಗೆದ್ದಿದೆ. ಇಂಡಿಯನ್ ಟೆಲಿ ಸ್ಟ್ರೀಮಿಂಗ್ ಪ್ರಶಸ್ತಿಗಳು, ಬಾಲಿವುಡ್ ಲೈಫ್ ಅವಾರ್ಡ್ಸ್, ದಾದಾಸಾಹೇಬ್ ಫಾಲ್ಕೆ ಫಿಲ್ಮ್ ಫೌಂಡೇಶನ್ ಪ್ರಶಸ್ತಿಗಳು, ಐಕಾನಿಕ್ ಗೋಲ್ಡ್ ಅವಾರ್ಡ್ಸ್, ಜೀ ಸಿನಿ ಪ್ರಶಸ್ತಿಗಳು ಇತ್ಯಾದಿಗಳನ್ನು ತನ್ನದಾಗಿಸಿಕೊಂಡಿದೆ. ಕಂಪನಿಯ ನಿರ್ಮಾಣ, 'ದಿ ಕೇರಳ ಸ್ಟೋರಿ' 2023 ರಲ್ಲಿ ಅತಿ ಹೆಚ್ಚು ರಿಟರ್ನ್-ಆನ್-ಇನ್ವೆಸ್ಟ್ಮೆಂಟ್ ಬ್ಲಾಕ್ಬಸ್ಟರ್ ಆಗಿ ಹೊರಹೊಮ್ಮಿತು. ಇದು ವಿಮರ್ಶಾತ್ಮಕ ಮೆಚ್ಚುಗೆಯೊಂದಿಗೆ ವಾಣಿಜ್ಯ ಆಕರ್ಷಣೆಯನ್ನು ಸಮತೋಲನಗೊಳಿಸುವ ಕಂಪನಿಯ ಸಾಮರ್ಥ್ಯವನ್ನು ಪ್ರತಿಬಿಂಬಿಸುತ್ತದೆ




ಜಯಶ್ರೀ.ಬಿ.ಆರ್

ಖ್ಯಾತ ಜ್ಯೋತಿಷಿ

ದೂರವಾಣಿ-9964739507

www.jyotishyavaastu.com


## ರಾಶಿ ಭವಿಷ್ಯ

**ಮೇಷ:** ಪರರ ಧನ ಪ್ರಾಪ್ತಿ, ಉನ್ನತ ಸ್ಥಾನಮಾನ, ಭಯಭೀತಿ ನಿವಾರಣೆ, ಗುರು ಹಿರಿಯರಲ್ಲಿ ಭಕ್ತಿ.

**ವೃಷಭ:** ನಾನಾ ರೀತಿಯ ಯೋಚನೆ ಚಿಂತೆ, ಎಲ್ಲಿ ಹೋದರು ಅಶಾಂತಿ, ಅಧಿಕ ಖರ್ಚು, ವಾಹನದಿಂದ ಕೈ ಕಾಲಿಗೆ ಪೆಟ್ಟು.

**ಮಿಥುನ:** ಎಲ್ಲರೊಂದಿಗೆ ಸ್ನೇಹ ವೃದ್ಧಿ, ಪ್ರಿಯರಿಗೆ ಲಾಭ, ಯತ್ನ ಕಾರ್ಯಗಳಲ್ಲಿ ಜಯ, ವಾಹನ ರಿಪೇರಿಗೆ ಧನವ್ಯಯ.

**ಕಟಕ:** ಕೆಲಸ ಕಾರ್ಯಗಳಲ್ಲಿ ತಾಳ್ಮೆ ಅಗತ್ಯ, ಅನಾವಶ್ಯಕ ವಿಷಯಗಳಿಂದ ದೂರವಿರಿ, ಭೂ ವ್ಯವಹಾರಗಳಲ್ಲಿ ನಿಧಾನ.

**ಸಿಂಹ:** ಧಾರ್ಮಿಕ ಕಾರ್ಯಗಳಲ್ಲಿ ಒಲವು, ವ್ಯಾಪಾರ ವ್ಯವಹಾರಗಳಲ್ಲಿ ಎಚ್ಚರ, ಹೊಗಳಿಕೆ ಮಾತುಗೆ ಮರುಳಾಗದಿರಿ.

**ಕನ್ಯಾ:** ಹಿರಿಯರ ಮಾರ್ಗದರ್ಶನ, ಶೀತ ಸಂಬಂಧ ರೋಗ, ಅನಗತ್ಯ ಪ್ರಯಾಣ, ಆರೋಗ್ಯದ ಬಗ್ಗೆ ಕಾಳಜಿ ವಹಿಸಿ.

**ತುಲಾ:** ಮಹಿಳೆಯರಿಗೆ ವಿಶೇಷ ಲಾಭ, ಮಿತ್ರರ ಭೇಟಿ, ಅತಿಯಾದ ನಿದ್ರೆ, ಮಕ್ಕಳ ವಿಷಯದಲ್ಲಿ ಕಲಹ.

**ವೃಶ್ಚಿಕ:** ಸ್ವಂತ ಪರಿಶ್ರಮದಿಂದ ಅಭಿವೃದ್ಧಿ, ಹಳೆಯ ಸಾಲ ಮರುಪಾವತಿ, ಕೃಷಿಕರಿಗೆ ಅಲ್ಪ ಲಾಭ.

**ಧನಸ್ಸು:** ಉತ್ತಮ ಸಂಪಾದನೆ, ಎಷ್ಟೇ ಹಣ ಬಂದರೂ ಸಾಕಾಗುವುದಿಲ್ಲ, ವಿದೇಶ ಪ್ರಯಾಣ, ಉನ್ನತ ವಿದ್ಯಾಭ್ಯಾಸಕ್ಕೆ ಉತ್ತಮ ಸಮಯ.

**ಮಕರ:** ವಿಪರೀತ ವ್ಯಸನ, ಮಾತಿನಲ್ಲಿ ಹಿಡಿತವಿರಲಿ, ಉದ್ಯೋಗದಲ್ಲಿ ಬಡ್ತಿ, ಇತರರಿಗೆ ಸಹಾಯ ಮಾಡುವಿರಿ.

**ಕುಂಭ:** ಪರಿಶ್ರಮಕ್ಕೆ ತಕ್ಕ ಫಲ, ಸುಖ ಭೋಜನ, ಕುಟುಂಬ ಸದಸ್ಯರಿಂದ ಸಹಾಯ, ನಿಮ್ಮ ಇಷ್ಟದಂತೆ ಕೆಲಸಗಳು ನೆರವೇರುತ್ತವೆ.

**ಮೀನ:** ಸ್ತ್ರೀ ಲಾಭ, ಋಣ ವಿಮೋಚನೆ, ಆಪ್ತರೊಡನೆ ದೂರ ಪ್ರಯಾಣ, ಹಿತ ಶತ್ರುಭಾದೆ, ಕಾರ್ಯಕ್ಷೇತ್ರದಲ್ಲಿ ತೀವ್ರ ಒತ್ತಡ.

## ಯುದ್ಧ ಅನಾಥರ ವಿಶ್ವ ದಿನ




ಜನವರಿ 6 ರಂದು ಅನಾಥರ ವಿಶ್ವ ದಿನವು ಈ ಅನಾಥರು ಎದುರಿಸುತ್ತಿರುವ ಸವಾಲುಗಳ ಶ್ರೇಣಿಯನ್ನು ಎತ್ತಿ ತೋರಿಸುತ್ತದೆ. ಜಾಗತಿಕವಾಗಿ, ಲಕ್ಷಾಂತರ ಮಕ್ಕಳು ಯುದ್ಧದಿಂದಾಗಿ ಅನಾಥರಾಗಿದ್ದಾರೆ ಮತ್ತು ಅವರು ಕಷ್ಟದ ಜೀವನ ಮತ್ತು ಭಾವನಾತ್ಮಕ ಮತ್ತು ದೈಹಿಕ ನಿರ್ಲಕ್ಷ್ಯಕ್ಕೆ ಒಳಗಾಗುತ್ತಾರೆ. ಈ ದಿನವನ್ನು ಫ್ರೆಂಚ್ ಸಂಸ್ಥೆ, SOS Enfants en Detresses ಅವರ ದುಃಖದ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಅವರ ಭವಿಷ್ಯವನ್ನು ಉತ್ತಮಗೊಳಿಸಲು ರಚಿಸಲಾಗಿದೆ. ಪೋಷಕರನ್ನು ಕಳೆದುಕೊಳ್ಳುವುದು ತುಂಬಾ ಕಷ್ಟ, ಆದರೆ ಯುದ್ಧದಿಂದಾಗಿ ಪೋಷಕರನ್ನು ಕಳೆದುಕೊಳ್ಳುವುದು ಇನ್ನೂ ಕೆಟ್ಟದಾಗಿದೆ. ಗಓಖಅಇಈ ಅನಾಥರನ್ನು 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಯಾವುದೇ ಮಗು ಎಂದು ವ್ಯಾಖ್ಯಾನಿಸುತ್ತದೆ, ಅವರು ಸಾವಿನ ಯಾವುದೇ ಕಾರಣದಿಂದ ಒಬ್ಬ ಅಥವಾ ಇಬ್ಬರ ಪೋಷಕರನ್ನು ಕಳೆದುಕೊಂಡಿದ್ದಾರೆ. ಕಳೆದ ಕೆಲವು ಶತಮಾನಗಳಲ್ಲಿ ನಡೆದ ಯುದ್ಧಗಳಲ್ಲಿ, ಬಲಿಪಶುಗಳಲ್ಲಿ ಸರಿಸುಮಾರು ಅರ್ಧದಷ್ಟು ನಾಗರಿಕರು - 2001 ರವರೆಗೆ ಈ ಸಂಖ್ಯೆ ಕ್ರಮೇಣ ಹೆಚ್ಚಾಯಿತು. 2015 ರ ಹೊತ್ತಿಗೆ, ಏಷ್ಯಾದಲ್ಲಿ 61 ಮಿಲಿಯನ್, 52 ಮಿಲಿಯನ್ ಸೇರಿದಂತೆ ಜಾಗತಿಕವಾಗಿ ಸುಮಾರು 140 ಮಿಲಿಯನ್ ಅನಾಥರು ಇದ್ದರು. ಆಫ್ರಿಕಾ, ಲ್ಯಾಟಿನ್ ಅಮೇರಿಕಾ ಮತ್ತು ಕೆರಿಬಿಯನ್ನಲ್ಲಿ 10 ಮಿಲಿಯನ್, ಮತ್ತು ಪೂರ್ವ ಯುರೋಪ್ ಮತ್ತು ಮಧ್ಯ ಏಷ್ಯಾದಲ್ಲಿ 7.3 ಮಿಲಿಯನ್, ''ಯುನಿಸೆಫ್ ಪ್ರಕಾರ. ಅಕಾಲಿಕ, ಯುದ್ಧದಂತಹ ಕಠಿಣ ಘಟನೆಗಳಲ್ಲಿ ತಮ್ಮ ಹೆತ್ತವರನ್ನು ಕಳೆದುಕೊಂಡ ಮಕ್ಕಳು ಬದುಕುಳಿದ ಕುಟುಂಬದ ಸದಸ್ಯರೊಂದಿಗೆ ಇರಲು ಒತ್ತಾಯಿಸಲ್ಪಡುತ್ತಾರೆ ಅಥವಾ ಅವರು ಪೋಷಣೆ ವ್ಯವಸ್ಥೆಗೆ ಪ್ರವೇಶಿಸುತ್ತಾರೆ ಮತ್ತು ಅಪೌಷ್ಟಿಕತೆ ಮತ್ತು ರೋಗದಂತಹ ಕಳಪೆ ಪರಿಸ್ಥಿತಿಗಳನ್ನು ಎದುರಿಸುತ್ತಾರೆ. ಅವರು ಅನುಭವಿಸುವ ಭಾವನಾತ್ಮಕ ಮತ್ತು ಮಾನಸಿಕ ಒತ್ತಡವನ್ನು ಊಹಿಸಲೂ ಸಾಧ್ಯವಿಲ್ಲ. ಅಭಿವೃದ್ಧಿ ಹೊಂದಿದ ದೇಶಗಳಲ್ಲಿ ಅನಾಥರ ಸಂಖ್ಯೆ ಕಡಿಮೆಯಾಗಿದೆ ಆದರೆ ಯುದ್ಧಗಳು ಮತ್ತು ಸಾಂಕ್ರಾಮಿಕ ರೋಗಗಳಿಗೆ ಒಳಗಾದ ಸ್ಥಳಗಳಲ್ಲಿ ಹೆಚ್ಚು. ಆದಾಗ್ಯೂ, ಕೆಲವು ಮಕ್ಕಳು ಯುದ್ಧದ ಅವ್ಯವಸ್ಥೆಯ ಸಮಯದಲ್ಲಿ ಅವರಿಂದ ಬೇರ್ಪಟ್ಟು ತಮ್ಮ ಹೆತ್ತವರನ್ನು ಕಳೆದುಕೊಳ್ಳುತ್ತಾರೆ. ಯುದ್ಧ ಅನಾಥರ ವಿಶ್ವ ದಿನವನ್ನು SOS ಎನ್ಫಾಂಟ್ಸ್ ಎನ್ ಡಿಟ್ರೆಸ್ಸೆ ಎಂಬ ಫ್ರೆಂಚ್ ಸಂಸ್ಥೆ ರಚಿಸಿದೆ, ಇದು ಯುದ್ಧಗಳು ಮತ್ತು ಸಂಘರ್ಷಗಳಿಂದ ಪರೋಕ್ಷವಾಗಿ ಬಾಧಿತವಾಗಿರುವ ಮಕ್ಕಳ ಜೀವನಕ್ಕೆ ಸಹಜತೆಯ ಭಾವವನ್ನು ತರಲು ಕೆಲಸ ಮಾಡುತ್ತದೆ. ಇದನ್ನು ವಾರ್ಷಿಕವಾಗಿ ಜನವರಿ 6 ರಂದು ನಡೆಸಲಾಗುತ್ತದೆ ಮತ್ತು ಪ್ರತಿ ವರ್ಷ, ಅನಾಥ ಮಕ್ಕಳು ಎದುರಿಸಬೇಕಾದ ದುರವಸ್ಥೆಯ ಬಗ್ಗೆ ಜನರಿಗೆ ಉತ್ತಮ ತಿಳುವಳಿಕೆಯನ್ನು ನೀಡಲು ಜಾಗೃತಿ ಕಾರ್ಯಕ್ರಮಗಳು ನಡೆಯುತ್ತವೆ.

ಸಂಜೆ ಮುಗಿಲು
ಸೋಮವಾರ
6.1.2025



# I.N.D.I.A.ಕೂಟ: ಬಿಹಾರ ಸಿಎಂ ನಿತೀಶ್‌ಕುಮಾರ್ ನಿರಾಕರಣೆ

**ಪಾಟ್ನಾ (ಬಿಹಾರ):** ವಿಪಕ್ಷಗಳ I.N.D.I.A. ಕೂಟವನ್ನು ಸೇರಲು ಆರ್‌ಜೆಡಿ ನಾಯಕ ಲಾಲು ಪ್ರಸಾದ್ ಅವರು ನೀಡಿದ್ದ ಆಫರ್ ಅನ್ನು ಬಿಹಾರ ಮುಖ್ಯಮಂತ್ರಿ ನಿತೀಶ್‌ಕುಮಾರ್ ಅವರು ಸ್ಪಷ್ಟವಾಗಿ ನಿರಾಕರಿಸಿದ್ದಾರೆ. ಅಧಿಕಾರದಲ್ಲಿದ್ದಾಗ ವಿಪಕ್ಷಗಳು ಏನೂ ಮಾಡಲು ಸಾಧ್ಯವಾಗಿಲ್ಲ. ಅಂತಹ ಪಕ್ಷದೊಂದಿಗೆ ನಾನು ಎರಡು ಬಾರಿ ಕೈ ಜೋಡಿಸಿ ತಪ್ಪು ಮಾಡಿದೆ ಎಂದು ಹೇಳಿದ್ದಾರೆ.

ಈ ಮೊದಲು ವಿಪಕ್ಷಗಳ I.N.D.I.A.ಕೂಟದಲ್ಲಿದ್ದು ಲೋಕಸಭೆ ಚುನಾವಣೆಗೂ ಮೊದಲು ನಡೆದ ಕ್ಷಿಪ್ರ ರಾಜಕೀಯ ಬೆಳವಣಿಗೆಯಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಕೂಟಕ್ಕೆ ಸೇರಿದ್ದ ಜೆಡಿಯು ಪಕ್ಷದ ಮುಖ್ಯಸ್ಥ, ಬಿಹಾರ ಸಿಎಂ ನಿತೀಶ್‌ಕುಮಾರ್ ಅವರನ್ನು ಮತ್ತೆ ತಮ್ಮ ಗುಂಪಿಗೆ ಸೇರಿಸಿಕೊಳ್ಳುವುದಾಗಿ ಆರ್‌ಜೆಡಿ ಹೇಳಿತ್ತು.

ಮುಜಾಫರ್ಪುರದಲ್ಲಿ ಭಾನುವಾರ ಮಾಧ್ಯಮದವರೊಂದಿಗೆ ಮಾತನಾಡಿದ ಬಿಹಾರ ಸಿಎಂ, ನಾನು ಈ ಹಿಂದೆ ಎರಡು ಬಾರಿ ವಿಪಕ್ಷಗಳೊಂದಿಗೆ ಸೇರಿಕೊಂಡು ತಪ್ಪು ಮಾಡಿದ್ದೆ. ಅವರು ನಮಗಿಂತಲೂ ಮೊದಲೇ ರಾಜ್ಯದ ಅಧಿಕಾರ ನಡೆಸಿದರೂ, ಏನೂ ಮಾಡಲಿಲ್ಲ. ಇಂದು ಮಹಿಳೆಯರು ಸ್ವಚ್ಛಂದವಾಗಿ, ಸ್ವತಂತ್ರವಾಗಿ ತಿರುಗಾಡುತ್ತಿದ್ದಾರೆ. ಹಿಂದೆ, ಸಂಜೆಯಾದರೆ ಕಾಲು ಹೊರಗಿಡಲೂ ಹೆದರುತ್ತಿದ್ದರು ಎಂದು ಹೇಳಿದರು.

'ಜೀವಿಕ' ಹೆಸರಿನಲ್ಲಿ ಮಹಿಳಾ ಸ್ವಸಹಾಯ ಗುಂಪುಗಳು ಕೆಲಸ ಮಾಡುತ್ತಿವೆ. ಕೇಂದ್ರ ಸರ್ಕಾರ ಅದನ್ನು 'ಆಜೀವಿಕ' ಎಂದು ನಾಮಕರಣ ಮಾಡಿ ಮತ್ತಷ್ಟು ಬಲ ತುಂಬಿದೆ. ಆತ್ಮವಿಶ್ವಾಸಪೂರ್ಣ ಗ್ರಾಮೀಣ ಮಹಿಳೆಯರನ್ನು ನೀವು ಹಿಂದೆ ಎಂದಾದರೂ ನೋಡಿದ್ದೀರಾ ಎಂದು ಪ್ರಶ್ನಿಸಿದರು



# ಮಹಾ ಕುಂಭಮೇಳಕ್ಕೆ ದಿನಗಣನೆ: ವಿಶೇಷ ರೈಲುಗಳ ಸಂಚಾರ

**ನವದೆಹಲಿ:** ಮಹಾ ಕುಂಭಮೇಳಕ್ಕೆ ದಿನಗಣನೆ ಶುರುವಾಗಿದೆ. ಪುಣ್ಯಸ್ನಾನಕ್ಕೆ ಪ್ರಯಾಗ್ರಾಜ್ ಸಕಲ ರೀತಿಯಲ್ಲಿ ಸಜ್ಜಾಗಿದೆ. ಗಂಗಾ, ಯಮುನಾ, ಸರಸ್ವತಿ ನದಿಗಳ ಸಂಗಮದಲ್ಲಿ ಭಕ್ತರು ಮಿಂದೆದ್ದು ಕೃತಾರ್ಥರಾಗಲಿದ್ದಾರೆ. ಈ ನಿಟ್ಟಿನಲ್ಲಿ ಭಕ್ತರಿಗೆ ಅನುಕೂಲವಾಗುವಂತೆ ಯೋಗಿ ಆದಿತ್ಯನಾಥ್ ಸರ್ಕಾರ ಎಲ್ಲ ವ್ಯವಸ್ಥೆಗಳನ್ನು ಮಾಡಿದೆ.

ಕುಂಭಮೇಳವು ಜನವರಿ 13 ರಿಂದ ಫೆಬ್ರವರಿ 26ರ ವರೆಗೆ ನಡೆಯಲಿದೆ. 40 ಕೋಟಿಗೂ ಹೆಚ್ಚು ಭಕ್ತರು ಬರುವ ನಿರೀಕ್ಷೆಯಿದೆ. ಹೀಗಾಗಿ, ದೆಹಲಿಯಿಂದ ಪ್ರಯಾಗ್ರಾಜ್ಗೆ ಪ್ರಯಾಣವನ್ನು ಸುಲಭಗೊಳಿಸಲು, ಭಾರತೀಯ ರೈಲ್ವೆಯು 32 ವಿಶೇಷ ರೈಲು ಮತ್ತು 21 ಸಾಮಾನ್ಯ ರೈಲುಗಳನ್ನು ಓಡಿಸಲಿದೆ. ಇದರ ಜೊತೆಗೆ ಇತರ ಸೌಲಭ್ಯಗಳನ್ನೂ ಒದಗಿಸುವುದಾಗಿ ಘೋಷಿಸಿದೆ.

ಕುಂಭಮೇಳದ ಸಂದರ್ಭದಲ್ಲಿ ದೆಹಲಿ ಮತ್ತು ಪ್ರಯಾಗರಾಜ್ ನಡುವೆ ಹೆಚ್ಚಿನ ರೈಲುಗಳು ಸಂಚರಿಸಲಿವೆ. ಪ್ರಯಾಣಿಕರ ಅನುಕೂಲ ಗಮನದಲ್ಲಿಟ್ಟುಕೊಂಡು ಸಾಮಾನ್ಯ ರೈಲುಗಳ ವೇಳಾಪಟ್ಟಿಯನ್ನು ಸಹ ಸಿದ್ಧಪಡಿಸಲಾಗಿದೆ. ಇವುಗಳಲ್ಲಿ ಪ್ರಮುಖ ರೈಲುಗಳಾದ ಪ್ರಯಾಗರಾಜ್ ಎಕ್ಸ್‌ಪ್ರೆಸ್



(12418), ಈಶಾನ್ಯ ಎಕ್ಸ್‌ಪ್ರೆಸ್ (12506), ವಂದೇ ಭಾರತ್ (22436) ಸೇರಿದಂತೆ ಒಟ್ಟು 33 ರೈಲುಗಳು ಓಡುತ್ತವೆ. ಈ ರೈಲುಗಳು ವಾರದ ಏಳು ದಿನಗಳೂ ನವದೆಹಲಿಯಿಂದ ಪ್ರಯಾಗ್ರಾಜ್ಗೆ ಲಭ್ಯವಿರುತ್ತವೆ.

# ಯೆಮೆನ್‌ನ ಮೂರು ಹೌತಿ ನೆಲೆಗಳ ಮೇಲೆ ಅಮೆರಿಕ ನೌಕಾಪಡೆ ದಾಳಿ

**ಸನಾ:** ಅಮೆರಿಕ ನೇತೃತ್ವದ ನೌಕಾಪಡೆಯ ಮೈತ್ರಿಕೂಟವು ರವಿವಾರ ಬೆಳಗ್ಗೆ ಉತ್ತರ ಯೆಮೆನ್ನ ಸಾಡಾ ಪ್ರಾಂತ್ಯದ ಮೇಲೆ ಮೂರು ವೈಮಾನಿಕ ದಾಳಿಗಳನ್ನು ನಡೆಸಿದೆ ಎಂದು ಹೌತಿ ಅಧೀನದ ಅಲ್-ಮಸಿರಾ ಟಿವಿ ವರದಿ ಮಾಡಿದೆ. ಹೌತಿ ಉಗ್ರರ ಮಿಲಿಟರಿ ತಾಣಗಳ ಮೇಲೆ ಈ ದಾಳಿ ನಡೆಸಲಾಗಿದೆ ಎಂದು ಸ್ಥಳೀಯರು ಸಾಮಾಜಿಕ ಮಾಧ್ಯಮಗಳಲ್ಲಿ ಹೇಳಿಕೊಂಡಿದ್ದಾರೆ. ಆದರೆ ಈ ಬಗ್ಗೆ ಅಮೆರಿಕ ಸೇನೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಪ್ರಾದೇಶಿಕ ಪಾಲುದಾರ ದೇಶಗಳಿಗೆ ಎದುರಾಗಬಹುದಾದ ಅಪಾಯಗಳನ್ನು ತಗ್ಗಿಸಲು ಯುಎಸ್ ಪಡೆಗಳು ಯೆಮೆನ್ ರಾಜಧಾನಿಯಲ್ಲಿನ ಹೌತಿ ನೆಲೆಗಳನ್ನು ಗುರಿಯಾಗಿಸಿಕೊಂಡು ಅನೇಕ ನಿಖರ ದಾಳಿಗಳನ್ನು ನಡೆಸಿವೆ ಎಂದು ಯುಎಸ್ ಸೆಂಟ್ರಲ್ ಕಮಾಂಡ್ ಮಂಗಳವಾರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.ಉತ್ತರ ಯೆಮೆನ್ನ ಬಹುತೇಕ ಭಾಗವನ್ನು ನಿಯಂತ್ರಿಸುವ ಹೌತಿ ಗುಂಪು ಇಸ್ರೇಲ್ ವಿರುದ್ಧ ನಿಯಮಿತವಾಗಿ ರಾಕೆಟ್ ಮತ್ತು ಡ್ರೋನ್ ದಾಳಿಗಳನ್ನು ನಡೆಸುತ್ತಿದೆ ಮತ್ತು ಪ್ಯಾಲೆಸ್ಟೈನಿಯರಿಗೆ ಬೆಂಬಲವಾಗಿ 2023 ರ ನವೆಂಬರ್‌ನಿಂದ ಕೆಂಪು ಸಮುದ್ರದಲ್ಲಿ ಇಸ್ರೇಲ್ಗೆ ಸಂಬಂಧಿಸಿದ ಹಡಗುಗಳ ಸಂಚಾರಕ್ಕೆ ಅಡ್ಡಿಪಡಿಸುತ್ತಿದೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ.ಇದಕ್ಕೆ ಪ್ರತಿಕ್ರಿಯೆಯಾಗಿ, ಈ ಪ್ರದೇಶದಲ್ಲಿ ಬೀಡುಬಿಟ್ಟಿರುವ ಯುಎಸ್ ನೇತೃತ್ವದ ನೌಕಾ ಒಕ್ಕೂಟವು ಹೌತಿ ಗುಂಪಿನ ಸಾಮರ್ಥ್ಯಗಳನ್ನು ಕುಗ್ಗಿಸಲು ನಿಯಮಿತವಾಗಿ ವಾಯು ದಾಳಿಗಳನ್ನು ನಡೆಸಿತ್ತು.



# 95 ಭಾರತೀಯ ಮೀನುಗಾರರನ್ನು ಬಿಡುಗಡೆ ಮಾಡಿದ ಬಾಂಗ್ಲಾದೇಶ



**ನವದೆಹಲಿ:** ಬಾಂಗ್ಲಾದೇಶವು ಭಾನುವಾರ 95 ಭಾರತೀಯ ಮೀನುಗಾರರನ್ನು ಭಾರತಕ್ಕೆ ಹಸ್ತಾಂತರಿಸಿದರೆ, ಭಾರತ 90 ಬಾಂಗ್ಲಾದೇಶದ ಮೀನುಗಾರರನ್ನು ಬಿಡುಗಡೆ ಮಾಡಿದೆ

ಪರಸ್ಪರರ ವಶದಲ್ಲಿರುವ ಮೀನುಗಾರರನ್ನು ಪರಸ್ಪರ ವಾಪಸು ಕಳುಹಿಸುವ ಪ್ರಕ್ರಿಯೆಯು ಉಭಯ ದೇಶಗಳ ನಡುವಿನ ಶೀತಲ ಸಂಬಂಧಗಳ ಮಧ್ಯೆ ಬಂದಿದೆ

ಮೀನುಗಾರರನ್ನು ಬಿಡುಗಡೆ ಮಾಡುವ ನಿರ್ಧಾರವನ್ನು ನವದೆಹಲಿ ಮತ್ತು ಢಾಕಾ ಗುರುವಾರ ಪ್ರಕಟಿಸಿವೆ.

ಮೀನುಗಾರರ ವಿನಿಮಯವನ್ನು ಭಾರತೀಯ ಕೋಸ್ಟ್ ಗಾರ್ಡ್ ಮತ್ತು ಬಾಂಗ್ಲಾದೇಶ ಕೋಸ್ಟ್ ಗಾರ್ಡ್ ಸಂಯೋಜಿಸಿದವು. ಬಾಂಗ್ಲಾದೇಶದ ಕಡೆಯವರು 95 ಮೀನುಗಾರರು ಮತ್ತು ನಾಲ್ಕು ಮೀನುಗಾರಿಕಾ ಹಡಗುಗಳನ್ನು ಭಾರತೀಯ ಕೋಸ್ಟ್ ಗಾರ್ಡ್ಗೆ ಹಸ್ತಾಂತರಿಸಿದ್ದಾರೆ ಎಂದು ಅಧಿಕೃತ ಹೇಳಿಕೆ ತಿಳಿಸಿದೆ.

ಸಾಗರ್ ದ್ವೀಪದ ಬಾಂಗ್ಲಾದೇಶದ ಜೈಲಿನಿಂದ ಬಿಡುಗಡೆಯಾದ 95 ಮೀನುಗಾರರನ್ನು ಬಂಗಾಳ ಸಿಎಂ ಸೋಮವಾರ ಸನ್ಮಾನಿಸಲಿದ್ದಾರೆ

ಮುಳುಗಿದ ಮೀನುಗಾರಿಕಾ ದೋಣಿ ''ಕೌಶಿಕ್'' ನಿಂದ ರಕ್ಷಿಸಲಾದ 12 ಮಂದಿ ಸೇರಿದಂತೆ 90 ಬಾಂಗ್ಲಾದೇಶಿ ಮೀನುಗಾರರನ್ನು ಭಾರತೀಯ ಕೋಸ್ಟ್ ಗಾರ್ಡ್ ಬಿಡುಗಡೆ ಮಾಡಿದೆ.

''ಬಾಂಗ್ಲಾದೇಶದಿಂದ ವಾಪಸಾದ ನಂತರ ಐಡಿಯಾನ್ ಮೀನುಗಾರರನ್ನು ದಕ್ಷಿಣ 24 ಪರಗಣಗಳಲ್ಲಿನ ಪಶ್ಚಿಮ ಬಂಗಾಳ ರಾಜ್ಯ ಮೀನುಗಾರಿಕೆ ಅಧಿಕಾರಿಗಳಿಗೆ ಹಸ್ತಾಂತರಿಸಲಾಗುತ್ತಿದೆ'' ಎಂದು ಭಾರತೀಯ ಕೋಸ್ಟ್ ಗಾರ್ಡ್ ಪ್ರಕಟಣೆಯಲ್ಲಿ ತಿಳಿಸಿದೆ.

ಇತ್ತೀಚಿನ ತಿಂಗಳುಗಳಲ್ಲಿ, ಅಜಾಗರೂಕತೆಯಿಂದ ಅಂತರರಾಷ್ಟ್ರೀಯ ಕಡಲ ಗಡಿ ರೇಖೆಯನ್ನು ದಾಟಿ ಬಾಂಗ್ಲಾದೇಶದ ಜಲಪ್ರದೇಶವನ್ನು ಪ್ರವೇಶಿಸಿದ ಹಲವಾರು ಭಾರತೀಯ ಮೀನುಗಾರರನ್ನು ಬಾಂಗ್ಲಾದೇಶ ಅಧಿಕಾರಿಗಳು ಬಂಧಿಸಿದ್ದಾರೆ ಎಂದು ಅದು ಹೇಳಿದೆ.

# ಲಕ್ಷದ್ವೀಪದ ಬಳಿ ಪ್ರಾಚೀನ ಯುದ್ಧ ನೌಕೆ ಪತ್ತೆ

ಲಕ್ಷದ್ವೀಪ : ಕಲ್ಪೇನಿ ದ್ವೀಪದ ಬಳಿ ಮುಳುಗುಗಾರರು ಪ್ರಾಚೀನ ಯುದ್ಧ ನೌಕೆ ಒಂದನ್ನು ಪತ್ತೆ ಮಾಡಿದ್ದು, 17 ಅಥವಾ 18 ನೇ ಶತಮಾನದ ಯುರೋಪಿಯನ್ ನೌಕೆಯಾಗಿರಬಹುದು ಎಂದು ಊಹಿಸಲಾಗಿದೆ. ಲಕ್ಷದ್ವೀಪ ದ್ವೀಪಸಮೂಹದ ಕಲ್ಪೇನಿ ದ್ವೀಪದ ಬಳಿ ಸಮುದ್ರ ಜೀವಿಗಳನ್ನು ಅನ್ವೇಷಿಸುತ್ತಿದ್ದಾಗ ಅವರು ಯುದ್ಧನೌಕೆಯನ್ನು ಅವರು ಕಂಡಿದ್ದಾರೆ. ಸಂಶೋಧಕರ ಪ್ರಕಾರ, ದ್ವೀಪದ ಪಶ್ಚಿಮ ಭಾಗದಲ್ಲಿರುವ ನೌಕೆಯ ಅವಶೇಷಗಳು ಪೋರ್ಚುಗೀಸ್, ಡಚ್ ಅಥವಾ ಬ್ರಿಟಿಷ್ ಈ ಮೂರು ಯುರೋಪಿಯನ್ ರಾಷ್ಟ್ರಗಳಿಗೆ ಸೇರಿದೆ ಎಂದು ಹೇಳಲಾಗಿದೆ. ಇದು ಈ ಪ್ರದೇಶದಲ್ಲಿ ನಡೆದ ಮೊದಲ ಆವಿಷ್ಕಾರವಾಗಿದೆ . ಪತ್ತೆಯಾದ ನೌಕೆಯ ಅವಶೇಷಗಳ ಬಗ್ಗೆ ಹೆಚ್ಚಿನ ಅಧ್ಯಯನ ನಡೆಯುತ್ತಿದೆ. 17 ಮತ್ತು 18 ನೇ ಶತಮಾನದ ನೌಕೆ ಇದಾಗಿರಬಹುದೆಂದು ಎಂದು ಊಹಿಸಲಾಗಿದೆ. ಇದೇ ಮಾರ್ಗದಲ್ಲಿ ಮಧ್ಯಪ್ರಾಚ್ಯ ಮತ್ತು ಶ್ರೀಲಂಕಾ ನಡುವೆ ವ್ಯಾಪಾರ ಮಾರ್ಗ ಇತ್ತು. ವ್ಯಾಪಾರ ಮಾರ್ಗದ ಮೇಲಿನ ಪ್ರಾಬಲ್ಯಕ್ಕಾಗಿ ಯುದ್ಧ ನಡೆದಿಬಹುದು ಎನ್ನಲಾಗಿದೆ. ಫಿರಂಗಿ ಮತ್ತು ಹಡಗಿನ ಗಾತ್ರವನ್ನು ಗಮನಿಸಿದಾಗ ಇದು ಯುದ್ಧನೌಕೆಯಾಗಿರಬಹುದು ಎಂಬಂತೆ ಕಾಣುತ್ತಿದೆ. ಬಹುಶಃ ಕಬ್ಬಿಣ ಅಥವಾ ಕಬ್ಬಿಣ ಮತ್ತು ಮರದ ಸಂಯೋಜನೆಯಿಂದ ನಿರ್ಮಿಸಲಾಗಿದೆ. ಈ ಬಗ್ಗೆ ಮಾತನಾಡಿದ ಮುಳುಗುಗಾರರೊಬ್ಬರು ನಾವು ಕಲ್ಪೇನಿಯ ಪಶ್ಚಿಮ ಭಾಗದಲ್ಲಿ ಅವಶೇಷಗಳನ್ನು ಗುರುತಿಸಿದಾಗ, ಅದು ಯುದ್ಧನೌಕೆ ಎಂದು ತಿಳಿದಿರಲಿಲ್ಲ. ಫಿರಂಗಿ ಮತ್ತು ಆಂಕರ್ ಅನ್ನು ನೋಡಿದಾಗ ಇದು ಒಂದು ಪ್ರಮುಖ ಶೋಧನೆ ಎಂದು ನಾವು ಅರಿತುಕೊಂಡೆವು ಎಂದು ಹೇಳಿದ್ದಾರೆ. ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ವಿಜ್ಞಾನಿ ಮತ್ತು ಡೈವರ್ಸ್ ಗುಂಪಿಗೆ ಮಾರ್ಗದರ್ಶಕರಾಗಿರುವ ಇದ್ರೀಸ್ ಬಾಬು ಮಾತನಾಡಿ ಇಂತಹ ಹಡಗು ದುರಂತವು ಈ ಪ್ರದೇಶದಲ್ಲಿ ಈ ಹಿಂದೆ ದಾಖಲಾಗಿರಲಿಲ್ಲ ಎಂದು ಹೇಳಿದರು. ನೌಕೆಯ ಉದ್ದವು 50ಟ-60ಟ ಆಗಿರಬಹುದು ಎಂದು ಅಂದಾಜಿಲಾಗಿದೆ



# ಉಕ್ರೇನ್‌ನ ಪರಮಾಣು ಸ್ಥಾವರದ ಬಳಿ ಭಾರಿ ಸ್ಫೋಟ

**ಉಕ್ರೇನ್:** ಜಪೊರಿಜ್ಝ್ಯಾ ಪರಮಾಣು ವಿದ್ಯುತ್ ಸ್ಥಾವರದ ಬಳಿ ಭಾನುವಾರ ಭಾರಿ ಸ್ಫೋಟದ ಶಬ್ದ ಕೇಳಿದೆ ಎಂದು ಅಂತರರಾಷ್ಟ್ರೀಯ ಪರಮಾಣು ಶಕ್ತಿ ಸಂಸ್ಥೆ ವರದಿ ಮಾಡಿದೆ, ಸ್ಥಾವರದ ತರಬೇತಿ ಕೇಂದ್ರದ ಮೇಲೆ ಡ್ರೋನ್ ದಾಳಿಯ ವರದಿಗಳೊಂದಿಗೆ ಇದು ಸಂಭವಿಸಿದೆ ಎಂದು ಏಜೆನ್ಸಿಯ ಮಹಾನಿರ್ದೇಶಕರು ತಿಳಿಸಿದ್ದಾರೆ ಯಾವುದೇ ಪರಿಣಾಮವನ್ನು ದೃಢೀಕರಿಸಲು ಏಜೆನ್ಸಿಗೆ ಇನ್ನೂ ಸಾಧ್ಯವಾಗಿಲ್ಲ ಎಂದು ರಾಫೆಲ್ ಮಾರಿಯಾನೊ ಗ್ರಾಸಿ ಹೇಳಿದರು.

''ಸ್ಥಳದ ಪರಿಧಿಯ ಹೊರಗೆ ಇಂದು ಝಡ್‌ಎನ್ಪಿಪಿ ತರಬೇತಿ ಕೇಂದ್ರದಲ್ಲಿ ಡ್ರೋನ್ ದಾಳಿ ನಡೆಸಿದೆ ಎಂಬ ವರದಿಗಳ ಬಗ್ಗೆ ಐಎಇಎಗೆ ತಿಳಿದಿದೆ'' ಎಂದು ಗ್ರಾಸಿ ಹೇಳಿಕೆಯಲ್ಲಿ ತಿಳಿಸಿದ್ದಾರೆ. ''ಯಾವುದೇ ಸಾವುನೋವುಗಳು ಸಂಭವಿಸಿಲ್ಲ ಮತ್ತು ಯಾವುದೇ ಎನ್ಪಿಪಿ ಉಪಕರಣಗಳ ಮೇಲೆ ಯಾವುದೇ ಪರಿಣಾಮ ಬೀರಿಲ್ಲ ಎಂದು ವರದಿಗಳು ತಿಳಿಸಿವೆ.



# ಅವಿವಾಹಿತ ಜೋಡಿಗೆ ಓಯೋ ಹೋಟೆಲ್ ರೂಮ್ ಇಲ್ಲ!

**ನವದೆಹಲಿ:** ಓಯೋ ಹೋಟೆಲ್ ಬುಕ್ಕಿಂಗ್ ಕಂಪನಿ ಚೆಕ್ ಇನ್‌ಗೆ ಸಂಬಂಧಿಸಿದಂತೆ ಅವಿವಾಹಿತರಿಗೆ ನಿರ್ಬಂಧ ವಿಧಿಸಿ ಹೊಸ ನಿಯಮವನ್ನು ಜಾರಿಗೊಳಿಸಿದೆ. ಅದರಂತೆ ಇನ್ಮುಂದೆ ಅವಿವಾಹಿತ ಪುರುಷ ಮಹಿಳಾ ಜೋಡಿಗೆ ಹೋಟೆಲ್ ಗಳಲ್ಲಿ ಅನುಮತಿ ಇರುವುದಿಲ್ಲ ಎಂದು ಹೇಳಿದೆ. ಹೌದು. ದೇಶದ ಪ್ರಮುಖ ಲಾಡ್ಜ್ ಬುಕ್ಕಿಂಗ್ ಕಂಪನಿಗಳಲ್ಲಿ ಓಯೋ ಕೂಡ ಒಂದಾಗಿದೆ. ದೇಶದ ಎಲ್ಲಾ ನಗರಗಳಲ್ಲಿಯೂ ತನ್ನ ಹೋಟಲ್ ಬುಕ್ಕಿಂಗ್ ಜಾಲವನ್ನು ವಿಸ್ತರಣೆ ಮಾಡಿಕೊಂಡಿದೆ. ಕಡಿಮೆ ದರ, ಗುಣಮಟ್ಟದ ಸೇವೆ, ದೊಡ್ಡ ಜಾಲದಿಂದ ಈ ಓಯೋ ಹೋಟೆಲ್‌ಗಳು ಹೆಸರುವಾಸಿಯಾಗಿವೆ. ಅದರಲ್ಲೂ ಅವಿವಾಹಿತರಿಗೆ ಹೋಟೆಲ್ ಚೆಕ್‌ಇನ್‌ಗೆ ಅವಕಾಶ ನೀಡುವ ಕಾರಣಕ್ಕೆ ಈ ಹೋಟೆಲ್ ಗ್ರಾಹಕರ ನೆಚ್ಚಿನ ಆಯ್ಕೆಯಾಗಿತ್ತು. ಇದೀಗ ಅವಿವಾಹಿತರಿಗೆ ನಿರ್ಬಂಧ ವಿಧಿಸಿ ಹೊಸ ನಿಯಮ ಜಾರಿಗೊಳಿಸಿದೆ.

**ಮೀರತ್‌ನಲ್ಲಿ ಜಾರಿ:** ಓಯೋನ ಈ ಹೊಸ ನಿಯಮವು ಮೀರತ್‌ನಲ್ಲಿ ಪ್ರಾರಂಭವಾಗಿದೆ. ಮುಂದಿನ ದಿನಗಳಲ್ಲಿ ಎಲ್ಲಾ ನಗರಗಳಲ್ಲಿಯೂ ಜಾರಿಗೆ ತರಲಿದೆ.ಓಯೋ ನಾಗರಿಕ ಸಮಾಜದ ಹಲವು ಗುಂಪುಗಳಿಂದ ಪ್ರತಿಕ್ರಿಯೆಯನ್ನು ಸ್ವೀಕರಿಸಲಾಗಿದೆ. ಹಲವು ದೂರುಗಳು ಜನಸಾಮಾನ್ಯರಿಂದ ಬಂದಿವೆ. ಹಲವು ನಗರಗಳ ನಿವಾಸಿಗಳು ಅವಿವಾಹಿತರಿಗೆ ಚೆಕ್ -ಇನ್ ಮಾಡಲು ಅವಕಾಶ ನೀಡದಂತೆ ಅರ್ಜಿ ಸಲ್ಲಿಸಿದ್ದರು. ಹೀಗೆ ಹಲವು ವಿಚಾರವಾಗಿ ದೂರು ಸ್ವೀಕರಿಸಿದ್ದ ಓಯೋ ಹೊಸ ನಿಯಮ ಜಾರಿಗೆ ತಂದಿದೆ ಎನ್ನಲಾಗಿದೆ.

**ಐಡಿ ಪ್ರೂಫ್ ಕಡ್ಡಾಯ:** ಹೊಸ ನಿಯಮದ ಪ್ರಕಾರ, ಹೋಟೇಲ್ ಗೆ ಬರುವ ಜೋಡಿಗಳು ಕಡ್ಡಾಯವಾಗಿ ತಮ್ಮ ಸಂಬಂಧದ ದಾಖಲೆ ತರುವುದು ಕಡ್ಡಾಯವಾಗಿದೆ. ಆನ್‌ಲೈನ್ ಬುಕ್ಕಿಂಗ್ ಗೂ ಕೂಡಾ ಇದು ಕಡ್ಡಾಯವಾಗಿದೆ. ಬೇರೆ ನಗರಗಳಿಗೂ ಇದೆ ನಿಯಮ ವಿಸ್ತರಿಸುವ ಬಗ್ಗೆ ಯೋಚನೆ ಮಾಡಲಾಗುವುದು.




# ಗುಜರಾತ್‌ನ ಪೋರಬಂದರ್‌ನಲ್ಲಿ ಕೋಸ್ಟ್ ಗಾರ್ಡ್ ಹೆಲಿಕಾಪ್ಟರ್ ಪತನ, 3 ಸಾವು

**ಗಾಂಧಿನಗರ:** ಭಾರತೀಯ ಕೋಸ್ಟ್ ಗಾರ್ಡ್‌ನ ಎಎಲ್ ಹೆಚ್ ಧ್ರುವ್ ಹೆಲಿಕಾಪ್ಟರ್ ಗುಜರಾತ್‌ನ ಪೋರಬಂದರ್‌ನಲ್ಲಿ ತರಬೇತಿಯ ವೇಳೆ ಪತನಗೊಂಡು, ಮೂವರು ಸಿಬ್ಬಂದಿ ಸಾವನ್ನಪ್ಪಿದ್ದಾರೆ.ಹೆಲಿಕಾಪ್ಟರ್ ತಾಂತ್ರಿಕ ದೋಷದಿಂದ ಪತನಗೊಂಡಿದೆ. ಅದರಲ್ಲಿ ಇಬ್ಬರು ಪೈಲಟ್‌ಗಳು ಸೇರಿ ಮೂವರು ಇದ್ದರು. ಭಾರತೀಯ ಕೋಸ್ಟ್ ಗಾರ್ಡ್ ಅಧಿಕಾರಿಗಳು ಘಟನೆಯ ಬಗ್ಗೆ ತನಿಖೆ ನಡೆಸುತ್ತಿದ್ದಾರೆ. ಹೆಚ್ಚಿನ ವಿವರಗಳನ್ನು ನಿರೀಕ್ಷಿಸಲಾಗುತ್ತಿದೆ.

# ಸಿಂಧೂ ಕಣಿವೆ ಲಿಪಿಯನ್ನು ಭೇದಿಸುವವರಿಗೆ 10 ಲಕ್ಷ ಡಾಲರ್ ಬಹುಮಾನ ಘೋಷಿಸಿದ ಸ್ಟಾಲಿನ್!



**ಚೆನ್ನೈ:** ಸಿಂಧೂ ಕಣಿವೆಯ ಲಿಪಿ ಕಳೆದೊಂದು ಶತಮಾನದಿಂದಲೂ ಬಿಡಿಸಲಾಗದ ಒಗಟಾಗಿ ಉಳಿದುಕೊಂಡಿದೆ ಎಂದು ರವಿವಾರ ಇಲ್ಲಿ ಹೇಳಿದ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಅವರು,ಈ ಲಿಪಿಯನ್ನು ಭೇದಿಸುವವರಿಗೆ 10 ಲಕ್ಷ ಅಮೆರಿಕನ್ ಡಾಲರ್(8,57,66,500 ರೂ.) ಬಹುಮಾನವನ್ನು ನೀಡುವುದಾಗಿ ಘೋಷಿಸಿದರು. ಸಿಂಧೂ ನಾಗರಿಕತೆಯ ಶೋಧದ ಶತಾಬ್ದಿಯ ಅಂಗವಾಗಿ ಮೂರು ದಿನಗಳ ಅಂತರರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಅವರು, 'ಒಂದು ಕಾಲದಲ್ಲಿ ಪ್ರವರ್ಧಮಾನದಲ್ಲಿದ್ದ ಸಿಂಧೂ ಕಣಿವೆ ನಾಗರಿಕತೆಯ ಲಿಪಿಯನ್ನು ಅರ್ಥೈಸಿಕೊಳ್ಳಲು ನಮಗೆ ಈಗಲೂ ಸಾಧ್ಯವಾಗಿಲ್ಲ. ಈ ಒಗಟನ್ನು ಬಿಡಿಸಲು ವಿದ್ವಾಂಸರು ಇಂದಿಗೂ ಪ್ರಯತ್ನಿಸುತ್ತಿದ್ದಾರೆ. ಇಂತಹ ಪ್ರಯತ್ನಗಳನ್ನು ಉತ್ತೇಜಿಸಲು ಈ ಲಿಪಿಯನ್ನು ಭೇದಿಸುವ ವ್ಯಕ್ತಿಗಳಿಗೆ ಅಥವಾ ಸಂಸ್ಥೆಗಳಿಗೆ ಒಂದು ಲಕ್ಷ ಡಾಲರ್ ಬಹುಮಾನ ನೀಡಲಾಗುವುದು ' ಎಂದು ತಿಳಿಸಿದರು. ಅತ್ಯಂತ ಪ್ರಾಚೀನ ನಾಗರಿಕತೆಗಳಲ್ಲಿ ಒಂದಾದ ಸಿಂಧೂ ನಾಗರಿಕತೆಯು ತನ್ನ ನಗರ ಸಂಸ್ಕೃತಿಗಾಗಿ ಹೆಸರುವಾಸಿಯಾಗಿದ್ದು,ಅದರ ಲಿಪಿಯನ್ನು ಈವರೆಗೆ ಭೇದಿಸಲು ಸಾಧ್ಯವಾಗಿಲ್ಲ. ಇಂತಹ ನಾಗರಿಕತೆಯು ಮರೆಯಾಗಿದ್ದು ಮತ್ತು ಅದರ ಸಂದರ್ಭ ಕೂಡ ಇಂದಿಗೂ ಒಗಟಾಗಿಯೇ ಉಳಿದಿವೆ.

# ದೇವಸ್ಥಾನದ ಲಕ್ಷಾಂತರ ರೂ.ಹಣ, ರಸೀದಿ ಪುಸ್ತಕದೊಂದಿಗೆ ಇಸ್ಕಾನ್ ಸಿಬ್ಬಂದಿ ಪರಾರಿ

**ಮಥುರಾ:** ಇಸ್ಕಾನ್ ದೇವಸ್ಥಾನದ ಸಿಬ್ಬಂದಿಯೋರ್ವರು ಲಕ್ಷಾಂತರ ರೂ.ದೇಣಿಗೆ ಹಣ ಮತ್ತು ರಸೀದಿ ಪುಸ್ತಕದೊಂದಿಗೆ ಪರಾರಿಯಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಕುರಿತು ದೇವಸ್ಥಾನದ ಮುಖ್ಯ ಹಣಕಾಸು ಅಧಿಕಾರಿ ವಿಶ್ವ ನಾಮ ದಾಸ್ ಅವರ ದೂರಿನ ಮೇರೆಗೆ ಇಸ್ಕಾನ್ ದೇವಸ್ಥಾನದ ಸಿಬ್ಬಂದಿ ಮುರಳೀಧರ್ ದಾಸ್ ವಿರುದ್ಧ ಎಫ್ ಐಆರ್ ದಾಖಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಅರವಿಂದ್ ಕುಮಾರ್ ತಿಳಿಸಿದ್ದಾರೆ.

ದೇವಸ್ಥಾನದ ಪಿಆರ್ ಒ ರವಿ ಲೋಚನ್ ದಾಸ್ ಈ ಕುರಿತು ಮಾತನಾಡಿದ್ದು, ಮುರಳೀಧರ್ ದಾಸ್ ಗೆ ಕಾಣಿಕೆಯಾಗಿ ಬಂದ ಹಣವನ್ನು ಸಂಗ್ರಹಿಸಿ ದೇವಾಲಯದ ಖಾತೆಗೆ ಜಮೆ ಮಾಡುವ ಜವಾಬ್ದಾರಿ ನೀಡಲಾಗಿತ್ತು. ಆದರೆ ಆತ ರಶೀದಿ ಸಹಿತ ಲಕ್ಷಾಂತರ ರೂ.ಹಣದೊಂದಿಗೆ ಪರಾರಿಯಾಗಿದ್ದಾನೆ ಎಂದು ಹೇಳಿದ್ದಾರೆ.

ಎಫ್ ಐಆರ್ ಪ್ರಕಾರ, ಮುರಳೀಧರ್ ದಾಸ್ ಮಧ್ಯಪ್ರದೇಶದ ಇಂದೋರ್ ನ ಶ್ರೀರಾಮ್ ಕಾಲೋನಿ ನಿವಾಸಿಯಾಗಿದ್ದಾನೆ. ಈತ ಲಕ್ಷಾಂತರ ರೂ. ನಗದು ಮತ್ತು 32 ಹಾಳೆಗಳಿದ್ದ ರಸೀದಿ ಪುಸ್ತಕದೊಂದಿಗೆ ಪರಾರಿಯಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.




# ದೆಹಲಿಯಲ್ಲಿ ಗಾಳಿಯ ಗುಣಮಟ್ಟ ಸುಧಾರಣೆ

ನವದೆಹಲಿ: ರಾಷ್ಟ್ರ ರಾಜಧಾನಿಯ ಗಾಳಿಯ ಗುಣಮಟ್ಟದಲ್ಲಿ ಸುಧಾರಣೆ ಕಂಡುಬಂದಿದೆ. ಈ ಹಿನ್ನೆಲೆಯಲ್ಲಿ ಗ್ರೇಡೆಡ್ ರೆಸ್ಪಾನ್ಸ್ ಆಕ್ಷನ್ ಪ್ಲಾನ್ ಅಡಿಯಲ್ಲಿ ವಿಧಿಸಲಾಗಿದ್ದ 3ನೇ ಹಂತದ ನಿರ್ಬಂಧಗಳನ್ನು ತೆರವುಗೊಳಿಸಲಾಗಿದೆ. ಜೊತೆಗೆ BS-III ಪೆಟ್ರೋಲ್ ಮತ್ತು BS-IV ಡೀಸೆಲ್ ವಾಹನಗಳ ಓಡಾಟದ ಮೇಲಿನ ನಿರ್ಬಂಧಗಳನ್ನೂ ಸಡಿಲಗೊಳಿಸಲಾಗಿದೆ.

ಭಾನುವಾರ (ಇಂದು) ದೆಹಲಿ ವಾಯು ಗುಣಮಟ್ಟ ಸೂಚ್ಯಂಕದಲ್ಲಿ ಸುಧಾರಣೆ ಕಂಡುಬಂದಿದೆ ಎಂದು ವರದಿಗಳು ತಿಳಿಸಿವೆ. ಕೇಂದ್ರೀಯ ಮಾಲಿನ್ಯ ನಿಯಂತ್ರಣ ಮಂಡಳಿಯ (ಅಕಅಃ) ಅಂಕಿ ಅಂಶಗಳ ಪ್ರಕಾರ, ಮಧ್ಯಾಹ್ನ 2 ಗಂಟೆ ವೇಳೆ ದೆಹಲಿಯ ಎಕ್ಯೂಐ 348 ಆಗಿತ್ತು, ಇದು ಮಧ್ಯಾಹ್ನ 3 ಗಂಟೆ ವೇಳೆಗೆ 343 ಹಾಗೂ ಸಂಜೆ 5 ಗಂಟೆ ಸುಮಾರಿಗೆ 335 ದಾಖಲಾಗಿದೆ. ಇದು ಸುಧಾರಣೆಯ ಸ್ಪಷ್ಟ ಸಂಕೇತ ಎಂದು ವರದಿ ಹೇಳಿದೆ.ಈ ಸಕಾರಾತ್ಮಕ ಬೆಳವಣಿಗೆಯನ್ನು ಗಮನದಲ್ಲಿಟ್ಟುಕೊಂಡು ದೆಹಲಿಯ ಎನ್ಸಿಆರ್ ಮತ್ತು ಅಕ್ಕಪಕ್ಕದ ಪ್ರದೇಶಗಳಲ್ಲಿ ವಿಧಿಸಲಾಗಿದ್ದ 3ನೇ ಹಂತದ ನಿರ್ಬಂಧಗಳನ್ನು ಸರ್ಕಾರ ತೆರವುಗೊಳಿಸಿದೆ.ಹಂತ-1, ಹಂತ 2ರ ನಿರ್ಬಂಧಗಳು ಮುಂದುವರಿಯಲಿವೆ. ಇದರೊಂದಿಗೆ ಕೈಗಾರಿಕಾ ಘಟಕಗಳು ಹಾಗೂ ಕಟ್ಟಡ ತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದಂತೆ ವಿಧಿಸಲಾದ ನಿರ್ಬಂಧಗಳು ಮುಂದಿನ ಆದೇಶದವರೆಗೆ ಮುಂದುವರಿಯಲಿವೆ ಎಂದು ಸರ್ಕಾರ ಹೇಳಿದೆ ಎನ್ನಲಾಗಿದೆ.



# ಅಮೇರಿಕಾದಲ್ಲಿ ಭೀಕರ ಚಂಡಮಾರುತ

**ನ್ಯೂಯಾರ್ಕ್:** ಬೃಹತ್ ಚಳಿಗಾಲದ ಚಂಡಮಾರುತವು ಮಧ್ಯ ಯುನೈಟೆಡ್ ಸ್ಟೇಟ್ಸ್ನಾದ್ಯಂತ ಬೀಸಿದೆ, ಭಾರಿ ಹಿಮ, ಮಂಜುಗಡ್ಡೆ ಮತ್ತು ಅಪಾಯಕಾರಿ ಶೀತ ಗಾಳಿಯನ್ನು ತಂದಿದೆ. ಭಾನುವಾರ ತೀವ್ರಗೊಂಡ ಚಂಡಮಾರುತವು ಹಲವಾರು ರಾಜ್ಯಗಳಲ್ಲಿ ಅಪಾಯಕಾರಿ ಪ್ರಯಾಣದ ಪರಿಸ್ಥಿತಿಗಳಿಗೆ ಕಾರಣವಾಗಿದೆ, ಕೆಲವು ಪ್ರದೇಶಗಳು ದಶಕದಲ್ಲಿ ಭಾರಿ ಹಿಮಪಾತಕ್ಕೆ ಸಜ್ಜಾಗಿವೆ ಕಾನ್ಸಾಸ್, ಪಶ್ಚಿಮ ನೆಬ್ರಾಸ್ಕಾ ಮತ್ತು ಇಂಡಿಯಾನಾದ ಕೆಲವು ಭಾಗಗಳು ಹಿಮ ಮತ್ತು ಮಂಜುಗಡ್ಡೆಯ ಹೊದಿಕೆಯಿಂದ ಹಾನಿಗೊಳಗಾದವು, ಇದು ಪರಿಸ್ಥಿತಿಗಳನ್ನು ಅಪಾಯಕಾರಿಯನ್ನಾಗಿ ಮಾಡಿತು. ಚಂಡಮಾರುತವು ವಿಶೇಷವಾಗಿ ಈ ಪ್ರದೇಶಗಳಲ್ಲಿನ ಪ್ರಮುಖ ರಸ್ತೆಗಳ ಮೇಲೆ ಪರಿಣಾಮ ಬೀರಿದೆ, ಅಲ್ಲಿ ಸಾಧ್ಯವಾದರೆ ಪ್ರಯಾಣವನ್ನು ತಪ್ಪಿಸಲು ಚಾಲಕರಿಗೆ ಎಚ್ಚರಿಕೆ ನೀಡಲಾಗಿದೆ. ಕಾನ್ಸಾಸ್ನಲ್ಲಿ, ಚಳಿಗಾಲದ ಚಂಡಮಾರುತದ ಎಚ್ಚರಿಕೆಗಳನ್ನು ರಾಷ್ಟ್ರೀಯ ಹವಾಮಾನ ಸೇವೆಯು ನೀಡಿತು, ಅನೇಕ ಪ್ರದೇಶಗಳಲ್ಲಿ, ವಿಶೇಷವಾಗಿ ಅಂತರರಾಜ್ಯ 70 ರ ಉತ್ತರಕ್ಕೆ ಹಿಮ ಸಂಗ್ರಹವು 8 ಇಂಚುಗಳನ್ನು ಮೀರುವ ನಿರೀಕ್ಷೆಯಿದೆ. ಇಂಡಿಯಾನಾದಲ್ಲಿನ ನ್ಯಾಷನಲ್ ಗಾರ್ಡ್ ಅನ್ನು ಹಿಮ ಮತ್ತು ಮಂಜುಗಡ್ಡೆಯಿಂದ ಆವೃತವಾದ ರಸ್ತೆಗಳಲ್ಲಿ ಸಿಲುಕಿರುವ ವಾಹನ ಚಾಲಕರಿಗೆ ಸಹಾಯ ಮಾಡಲು, ರಕ್ಷಣೆಗೆ ಸಹಾಯ ಮಾಡಲು ಮತ್ತು ತೀವ್ರ ಹವಾಮಾನ ಪರಿಸ್ಥಿತಿಗಳ ನಡುವೆ ಸಾರ್ವಜನಿಕ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ನಿಯೋಜಿಸಲಾಯಿತು. ಹಿಮ ಮತ್ತು ಮಂಜುಗಡ್ಡೆಯ ಜೊತೆಗೆ, ಚಂಡಮಾರುತವು ಗಾಳಿಯನ್ನು ತಂದಿದೆ, ಅದು ಶೀತವನ್ನು ಇನ್ನಷ್ಟು ಅಸಹನೀಯವಾಗಿಸುತ್ತದೆ. ಕಾನ್ಸಾಸ್ ಮತ್ತು ಮಿಸ್ಸೌರಿಯ ಕೆಲವು ಭಾಗಗಳಲ್ಲಿ ಗಾಳಿಯು ಗಂಟೆಗೆ 45 ಮೈಲಿ (ಗಂಟೆಗೆ 72 ಕಿ.ಮೀ) ವೇಗವನ್ನು ತಲುಪಿತು, ಇದು ಇನ್ನಷ್ಟು ತಂಪಾಗಿದೆ ಮತ್ತು ಗೋಚರತೆಯನ್ನು ಕಡಿಮೆ ಮಾಡುತ್ತದೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಬಾಲಯ್ಯ ನಟನೆಯ 'ಡಾಕು ಮಹಾರಾಜ್' ಟ್ರೈಲರ್ ಔಟ್

ತೆಲುಗು ನಟ ಬಾಲಯ್ಯ ನಟನೆಯ 'ಡಾಕು ಮಹಾರಾಜ್' ಟ್ರೈಲರ್ ರಿಲೀಸ್ ಆಗಿದೆ. ಆಕ್ಷನ್ ಸೀಕ್ವೆನ್ಸ್‌ನಲ್ಲಿ ಬಾಲಯ್ಯ ಅಬ್ಬರಿಸಿದ್ದಾರೆ. ನಟನ ನಯಾ ಖದರ್ ನೋಡಿ ಫ್ಯಾನ್ಸ್ ಫಿದಾ ಆಗಿದ್ದಾರೆ.

ಟ್ರೈಲರ್‌ನಲ್ಲಿ ಖಳನಟ ಬಾಬಿ ಡಿಯೋಲ್‌ಗೆ ಠಕ್ಕರ್ ಕೊಟ್ಟು ಬಾಲಯ್ಯ ಮಾಸ್ ಅವತಾರದಲ್ಲಿ ಮಿಂಚಿದ್ದಾರೆ. ವಿಭಿನ್ನ ಪಾತ್ರದಲ್ಲಿ ನಟ ಕಾಣಿಸಿಕೊಂಡಿದ್ದಾರೆ. ಬಾಲಯ್ಯ ಜೊತೆ ಪ್ರಜ್ಞಾ ಜೈಸ್ವಾಲ್, ಊರ್ವಶಿ ರೌಟೇಲಾ ಸೇರಿದಂತೆ ನಟಿಸಿದ್ದಾರೆ.

ಈ ಚಿತ್ರವನ್ನು ಬಾಬಿ ಕೊಲ್ಲಿ ನಿರ್ದೇಶನ ಮಾಡಿದ್ದಾರೆ. ಈಗಾಗಲೇ ಊರ್ವಶಿ ಜೊತೆಗಿನ ಬಾಲಯ್ಯ ಸಾಂಗ್ ನೋಡುಗರ ಗಮನ ಸೆಳೆದಿದೆ. ಈ ಸಿನಿಮಾಗಾಗಿ ಫ್ಯಾನ್ಸ್ ಎದುರು ನೋಡುತ್ತಿದ್ದಾರೆ.






# ಯಶ್ ಫ್ಯಾನ್ಸ್‌ಗೆ ಗುಡ್ ನ್ಯೂಸ್



ಟಾಕ್ಸಿಕ್ ಚಿತ್ರದ ಬಗ್ಗೆ ಬಿಗ್ ನ್ಯೂಸ್

ನ್ಯಾಷನಲ್ ಸ್ಟಾರ್ ಯಶ್ ನಟನೆಯ 'ಟಾಕ್ಸಿಕ್' ಸಿನಿಮಾಗಾಗಿ ಅಭಿಮಾನಿಗಳು ಎದುರು ನೋಡ್ತಿದ್ದಾರೆ. ಜ.8ರಂದು ಯಶ್ ಹುಟ್ಟುಹಬ್ಬದ ಹಿನ್ನೆಲೆ ಫ್ಯಾನ್ಸ್‌ಗೆ ಗುಡ್ ನ್ಯೂಸ್ ಕೊಡಲು ಮುಂದಾಗಿದ್ದಾರೆ. ಟಾಕ್ಸಿಕ್ ತಂಡದಿಂದ ಇದೀಗ ಬಿಗ್ ಅಪ್‌ಡೇಟ್‌ವೊಂದು ಹೊರಬಿದ್ದಿದೆ.

ಯಶ್ ಮತ್ತು ಕೆವಿನ್ ಸಂಸ್ಥೆಯ ನಿರ್ಮಾಣದಲ್ಲಿ 'ಟಾಕ್ಸಿಕ್' ಸಿನಿಮಾ ಮೂಡಿ ಬರಲಿದೆ. ಈ ಹಿನ್ನೆಲೆ ಕೆವಿಎನ್ ಸಂಸ್ಥೆ ಕಡೆಯಿಂದ ಬಿಗ್ ನ್ಯೂಸ್ ಸಿಕ್ಕಿದೆ. ಟಾಕ್ಸಿಕ್ ಚಿತ್ರದ ಬಗ್ಗೆ ಸದ್ಯದಲ್ಲೇ ಅಪ್‌ಡೇಟ್ ಸಿಗಲಿದೆ ಎಂದು ನಿರ್ಮಾಣ ಸಂಸ್ಥೆ ತಿಳಿಸಿದೆ. ಹಾಗಾಗಿ ಜ.8ರಂದು ಸಿನಿಮಾ ಬಗ್ಗೆ ಅಧಿಕೃತ ಮಾಹಿತಿ ಹೊರಬೀಳಲಿದೆ. ಏನದು ಎಂದು ತಿಳಿದುಕೊಳ್ಳಲು ಯಶ್ ಬರ್ತ್‌ಡೇ ದಿನದವರೆಗೂ ಕಾಯಬೇಕಿದೆ.

ಇನ್ನೂ ಜ.8ರಂದು ಬೆಂಗಳೂರಿನಲ್ಲಿ ಇರುವುದಿಲ್ಲ ಬರ್ತ್‌ಡೇ ಆಚರಣೆ ಮಾಡಲ್ಲ ಎಂದು ಫ್ಯಾನ್ಸ್ ಯಶ್ ಈಗಾಗಲೇ ಮಾಹಿತಿ ನೀಡಿದ್ದಾರೆ. ಪ್ರೀತಿಯ ಅಭಿಮಾನಿಗಳಿಗೆ ನಮಸ್ಕಾರ, ನಿಮ್ಮ ಅಭಿಮಾನದ ಅಪ್ಪುಗೆ ಮತ್ತೊಂದು ವರ್ಷವನ್ನು ಸಾರ್ಥಕಗೊಳಿಸಿದೆ. ಹೊಸ ವರ್ಷ ಹೊಸ ಭರವಸೆಗಳೊಂದಿಗೆ ನಗುನಗುತ್ತಾ ಬದುಕೋಣ. ಬದುಕನ್ನು ಮೆರಗುಗೊಳಿಸುವಂತಹ ಹೊಸ ಯೋಜನೆಗಳೊಂದಿಗೆ ಹೊಸ ವರ್ಷವನ್ನು ಸ್ವಾಗತಿಸೋಣ ಎಂದು ಯಶ್ ಬರೆದುಕೊಂಡಿದ್ದರು.

ಸಿನಿಮಾ ಕೆಲಸದ ನಿಮಿತ್ತ ನಾನು ಹುಟ್ಟುಹಬ್ಬದಂದು (ಜ.8) ಊರಿನಲ್ಲಿ ಇರುವುದಿಲ್ಲ. ನನ್ನ ಹುಟ್ಟುಹಬ್ಬಕ್ಕೆ ನೀವು ತೋರುವ ಅಭಿಮಾನ ಜವಾಬ್ದಾರಿಯುತವಾಗಿರಲಿ ಎಂಬುದು ನನ್ನ ಪ್ರೀತಿಯ ಮನವಿ. ಹಾಗಾಗಿ ಫ್ಲೆಕ್ಸ್, ಬ್ಯಾನರ್‌ಗಳ ಯಾವುದೇ ಆಡಂಬರ ಮಾಡದೆ ನನ್ನ ಮನಸ್ಸಿಗೆ ನೋವಾಗುವ ನಡವಳಿಕೆ ತೋರದೆ, ನೀವು ಇದ್ದಲ್ಲಿಂದಲೇ ನಿಮ್ಮ ಕುಟುಂಬದವರು ಹೆಮ್ಮೆಪಡುವ ಕೆಲಸ ನಿಮ್ಮಿಂದ ಆದರೆ ಅದಕ್ಕಿಂತ ದೊಡ್ಡ ಜನ್ಮದಿನದ ಉಡುಗೊರೆ ನನಗೆ ಮತ್ತೊಂದು ಇಲ್ಲ ಎಂದಿದ್ದಾರೆ. ಆದಷ್ಟು ಬೇಗ ನಿಮ್ಮನ್ನೆಲ್ಲಾ ಭೇಟಿ ಆಗುತ್ತೇನೆ. ಎಲ್ಲರಿಗೂ ಹೊಸ ವರ್ಷ ಒಳಿತನ್ನು ತರಲಿ. ನಿಮ್ಮ ಪ್ರೀತಿಯ ಯಶ್ ಎಂದು ಬರೆದಿದ್ದರು.

ಅಂದಹಾಗೆ, ಕಳೆದ ವರ್ಷ ಯಶ್ ಹುಟ್ಟುಹಬ್ಬದಂದು ಅವರ ಫ್ಲೆಕ್ಸ್ ಕಟ್ಟುವಾಗ ಸಂಭವಿಸಿದ ವಿದ್ಯುತ್ ಅವಘಡದಲ್ಲಿ ಲಕ್ಷ್ಮೇಶ್ವರದ ಸೂರಣಗಿ ಗ್ರಾಮದ ಮೂವರು ಯುವಕರು ಮೃತಪಟ್ಟಿದ್ದರು. ಹಾಗಾಗಿ ಫ್ಲೆಕ್ಸ್, ಬ್ಯಾನರ್‌ಗಳ ಯಾವುದೇ ಆಡಂಬರ ಮಾಡದೆ ನನ್ನ ಮನಸ್ಸಿಗೆ ನೋವಾಗುವ ನಡವಳಿಕೆ ತೋರಬೇಡಿ ಎಂದು ಯಶ್ ಮನವಿ ಮಾಡಿದ್ದಾರೆ.

# ಮಗಳ ಜೊತೆಗಿನ ಮುದ್ದಾದ ವಿಡಿಯೋ ಹಂಚಿಕೊಂಡ ಮಿಲನಾ ನಾಗರಾಜ್



ಕನ್ನಡದ ನಟಿ ಮಿಲನಾ ನಾಗರಾಜ್ ಅವರು ಮಗಳ ಆರೈಕೆಯಲ್ಲಿ ಬ್ಯುಸಿಯಾಗಿದ್ದಾರೆ. ಹಾಗಂತ ಸಿನಿಮಾದಿಂದ ಅವರು ಅಂತರ ಕಾಯ್ದುಕೊಂಡಿಲ್ಲ. ಬದಲಾಗಿ ಎರಡನ್ನು ನಿಭಾಯಿಸುತ್ತಿದ್ದಾರೆ. ಇದೀಗ ಮಗಳ ಜೊತೆಗಿನ ಮುದ್ದಾದ ವಿಡಿಯೋವೊಂದನ್ನು ನಟಿ ಶೇರ್ ಮಾಡಿದ್ದಾರೆ. ಮಿಲನಾ ಮಗಳ ತುಂಟಾಟ ನೋಡಿ ಫ್ಯಾನ್ಸ್ ಕ್ಯೂಟ್ ಎಂದಿದ್ದಾರೆ.

ಇಂದಿಗೆ ಮಿಲನಾ ಪುತ್ರಿ ಜನಿಸಿ 4 ತಿಂಗಳು ಕಳೆದಿದೆ. ಇದೇ ಖುಷಿಯಲ್ಲಿ ಮಗಳ ಕ್ಯೂಟ್ ವಿಡಿಯೋವನ್ನು ಹಂಚಿಕೊಂಡು ನಟಿ ಸಂಭ್ರಮಿಸಿದ್ದಾರೆ. ನಿನ್ನ ನಗುವಿನಿಂದ ನಮ್ಮ ಜಗತ್ತು ಬೆಳಗುತ್ತಿದೆ ಎಂದು ನಟಿ ಅಡಿಬರಹ ನೀಡಿದ್ದಾರೆ.

ಅಂದಹಾಗೆ, ಕಳೆದ ಸೆ.5ರಂದು ನಟಿ ಹೆಣ್ಣು ಮಗುವಿಗೆ ಜನ್ಮ ನೀಡಿದ್ದರು. ಮಗಳಿಗೆ ಡಾರ್ಲಿಂಗ್ ಕೃಷ್ಣ ಗ್ರ್ಯಾಂಡ್ ಆಗಿ ಸ್ವಾಗತಿಸಿದ್ದರು. ಮಗಳಿಗೆ ಪರಿ ಎಂದು ಮಿಲನಾ ದಂಪತಿ ಹೆಸರಿಟ್ಟಿದ್ದಾರೆ.

ಇನ್ನೂ 2021ರಲ್ಲಿ ಫೆ.14ರಂದು ಡಾರ್ಲಿಂಗ್ ಕೃಷ್ಣ ಮತ್ತು ಮಿಲನಾ ಬೆಂಗಳೂರಿನಲ್ಲಿ ಹಸೆಮಣೆ ಏರಿದ್ದರು. ಹಲವು ವರ್ಷಗಳ ಪ್ರೀತಿಗೆ ಮದುವೆಯ ಮುದ್ರೆ ಒತ್ತಿದ್ದರು.

# ವಿಚ್ಛೇದನದ ವದಂತಿಗಳ ನಡುವೆ ಯುಜ್ವೇಂದ್ರ ಚಹಲ್ ಕಂಠಪೂರ್ತಿ ಕುಡಿದ ವಿಡಿಯೋ ವೈರಲ್

ಹೊಸ ವರ್ಷದ ಆರಂಭದಲ್ಲೇ ಯುಜ್ವೇಂದ್ರ ಚಹಲ್ ಸುದ್ದಿಯಲ್ಲಿದ್ದಾರೆ. ಆದರೆ ಈ ಬಾರಿ ಸುದ್ದಿಯಲ್ಲಿರುವುದು ಮೈದಾನದಲ್ಲಿನ ಪ್ರದರ್ಶನದಿಂದಲ್ಲ. ಬದಲಾಗಿ ಕಂಠಪೂರ್ತಿ ಕುಡಿದ ವಿಚಾರದಿಂದಾಗಿ ಹಾಗೂ ವಿಚ್ಛೇದನ ವಿಷಯದಿಂದಾಗಿ. ಕಳೆದ ಒಂದೂವರೆ ವರ್ಷದಿಂದ ಟೀಮ್ ಇಂಡಿಯಾ ಪರ ಒಂದೇ ಒಂದು ಪಂದ್ಯವಾಡದ ಚಹಲ್ ದಾಂಪತ್ಯಕ್ಕೆ ಜೀವನಕ್ಕೆ ಇತಿಶ್ರೀ ಹಾಡಲು ನಿರ್ಧರಿಸಿದ್ದಾರೆ ಎಂಬ ಸುದ್ದಿ ಹರಿದಾಡುತ್ತಿದೆ. ಈ ಸುದ್ದಿಯ ಬೆನ್ನಲ್ಲೇ ಇದೀಗ ಕಂಠಪೂರ್ತಿ ಕುಡಿದು ನಡೆದಾಡಲು ಕಷ್ಟಪಡುತ್ತಿರುವ ಯುಜ್ವೇಂದ್ರ ಚಹಲ್ ಅವರ ವಿಡಿಯೋವೊಂದು ವೈರಲ್ ಆಗಿದೆ.

ಯುಜ್ವೇಂದ್ರ ಚಹಲ್ ಹಾಗೂ ಧನಶ್ರೀ ವರ್ಮಾ ಪ್ರತ್ಯೇಕವಾಗಿ ವಾಸಿಸುತ್ತಿದ್ದಾರೆ ಎಂದು ಅವರ ಆಪ್ತ ಸ್ನೇಹಿತನನ್ನು ಉಲ್ಲೇಖಿಸಿ ಇತ್ತೀಚೆಗೆ ವರದಿಯಾಗಿತ್ತು. ಅಲ್ಲದೆ ಶೀಘ್ರದಲ್ಲೇ ವಿಚ್ಛೇದನ ಪ್ರಕ್ರಿಯೆಯು ಪೂರ್ಣಗೊಳ್ಳಲಿದ್ದು, ಆ ನಂತರ ಈ ಮಾಹಿತಿಯನ್ನು ಅಧಿಕೃತಗೊಳಿಸಲಾಗುತ್ತದದೆ ತಿಳಿಸಲಾಗಿದೆ.

ಈ ಸುದ್ದಿ ಬೆನ್ನಲ್ಲೇ ದಾಂಪತ್ಯ ಜೀವನದ ಬಿರುಕಿನಿಂದಾಗಿ ಯುಜ್ವೇಂದ್ರ ಚಹಲ್ ಕಂಠಪೂರ್ತಿ ಕುಡಿದು ತಿರುಗಾಡುತ್ತಿದ್ದಾರೆ ಎಂಬ ಟ್ಯಾಗ್ ಲೈನ್ ನೊಂದಿಗೆ ಸೋಷಿಯಲ್ ಮೀಡಿಯಾದಲ್ಲಿ ವಿಡಿಯೋ ಹರಿಬಿಡಲಾಗಿದೆ. ಈ ವಿಡಿಯೋದಲ್ಲಿ ಚಹಲ್ ವ್ಯಕ್ತಿಯೊಬ್ಬರ ಸಹಾಯದಿಂದ ಕಾರು ಹತ್ತಲು ಪ್ರಯತ್ನಿಸುತ್ತಿರುವುದು ಕಾಣಬಹುದು.





**ವೈರಲ್ ವೀಡಿಯೋ ಸತ್ಯಾಸತ್ಯಯೇನು?:** ಯುಜ್ವೇಂದ್ರ ಚಹಲ್ ಅವರ ವೈರಲ್ ವೀಡಿಯೊಗೆ ಸಂಬಂಧಿಸಿದಂತೆ, ಅವರು ಕಂಠಪೂರ್ತಿ ಮದ್ಯಪಾನ ಮಾಡಿರುವುದು ನಿಜ. ಹೀಗಾಗಿ ನಡೆಯಲು ಕಷ್ಟಪಡುತ್ತಿದ್ದಾರೆ. ಅಲ್ಲದೆ ಒಬ್ಬ ವ್ಯಕ್ತಿಯೊಬ್ಬರ ಆಸರೆಯೊಂದಿಗೆ ಅವರನ್ನು ಕಾರಿನಲ್ಲಿ ಕೂರಿಸುತ್ತಿರುವುದು ವಿಡಿಯೋದಲ್ಲಿ ಕಾಣಬಹದು.

ಇದೀಗ ಈ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿದೆ. ಆದರೆ ಅದು ಪ್ರಸ್ತುತ ವಿಡಿಯೋ ಎನ್ನುವುದಕ್ಕೆ ಯಾವುದೇ ಪುರಾವೆಯಿಲ್ಲ. ಅಲ್ಲದೆ ವೈಯುಕ್ತಿಕ ಜೀವನದ ಏರಿಳಿತದಿಂದಾಗಿ ಅವರು ಹೀಗೆ ಕಾಣಿಸಿಕೊಂಡಿದ್ದಾರೆ ಎಂಬುದನ್ನು ದೃಢೀಕರಿಸಲಾಗಿಲ್ಲ.

**ಇಬ್ಬರೂ ದೂರ ದೂರ:** ಯುಜ್ವೇಂದ್ರ ಚಹಲ್ ಮತ್ತು ಧನಶ್ರೀ ವರ್ಮಾ ಇನ್ ಸ್ಟಾಗ್ರಾಮ್ ನಲ್ಲಿ ಪರಸ್ಪರ ಅನ್ಫಾಲೋ ಮಾಡಿದ್ದಾರೆ. ಅಲ್ಲದೇ ಫೋಟೋಗಳನ್ನೂ ಡಿಲೀಟ್ ಸಹ ಮಾಡಿದ್ದಾರೆ. ಹೀಗಾಗಿ ಇಬ್ಬರು ದೂರವಾಗಿರುವುದು ಬಹುತೇಕ ಖಚಿತವಾಗಿದೆ.

ಚಹಲ್ ಹಾಗೂ ಧನಶ್ರೀ ವರ್ಮಾ 2020ರಲ್ಲಿ ಪ್ರೀತಿಸಿ ಮದುವೆಯಾಗಿದ್ದರು. ಆದರೆ ಈಗ ಇವರಿಬ್ಬರ ಬಾಂಧವ್ಯದಲ್ಲಿ ಬಿರುಕು ಕಾಣಿಸಿಕೊಂಡಿದ್ದು, ಹೀಗಾಗಿ ಕಳೆದ ಇಬ್ಬರೂ ಎಲ್ಲೂ ಜೊತೆಯಾಗಿ ಕಾಣಿಸಿಕೊಳ್ಳುತ್ತಿಲ್ಲ.

ಅಲ್ಲದೆ ಸೋಷಿಯಲ್ ಮೀಡಿಯಾದಲ್ಲೂ ಜೊತೆಗಿರುವ ಫೋಟೋಗಳನ್ನು ಹಂಚಿಕೊಳ್ಳುತ್ತಿಲ್ಲ. ಹೀಗಾಗಿಯೇ ಯುಜ್ವೇಂದ್ರ ಚಹಲ್ ಹಾಗೂ ಧನಶ್ರೀ ವರ್ಮಾ ಬೇರೆಯಾಗಲಿದ್ದಾರೆ ಎಂಬ ಸುದ್ದಿಯು ಮಹತ್ವ ಪಡೆದುಕೊಂಡಿದೆ. ಇದಾಗ್ಯೂ ಇಬ್ಬರೂ ಕೂಡ ಈ ಬಗ್ಗೆ ಯಾವುದೇ ಸ್ಪಷ್ಟನೆ ನೀಡಿಲ್ಲ ಎಂಬುದು ಇಲ್ಲಿ ಉಲ್ಲೇಖಾರ್ಹ.

ಚಿತ್ರಸಂತೆಗೆ ಸಿಎಂ ಚಾಲನೆ

# ಮನೆಗೊಂದು ಕಲಾಕೃತಿ ಇರಬೇಕು

**ಬೆಂಗಳೂರು:** ಕಲಾಸಕ್ತರು ಚಿತ್ರಸಂತೆಗೆ ಭೇಟಿ ನೀಡಿ ಕಲಾಕೃತಿಯನ್ನು ಕೊಂಡು ಕಲಾವಿದರಿಗೆ ಬೆಂಬಲ ನೀಡಬೇಕು. ಮನೆಯಲ್ಲಿ ಕಲಾಕೃತಿಯಿದ್ದರೆ ಚಿತ್ರಸಂತೆ ಏರ್ಪಾಡು ಮಾಡಿದ್ದಕ್ಕೂ ಸಾರ್ಥಕವಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.

ಅವರು ನಿನ್ನೆ ಬೆಂಗಳೂರಿನ ಕುಮಾರ ಕೃಪಾ ರಸ್ತೆಯಲ್ಲಿ ಚಿತ್ರಕಲಾ ಪರಿಷತ್ತು ಆಯೋಜಿಸಲಾಗಿದ್ದ 22 ನೇ ಚಿತ್ರಸಂತೆಯನ್ನು ಉದ್ಘಾಟನೆ ಮಾಡಿ ನಂತರ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಏಳನೇ ಬಾರಿ ಚಿತ್ರಸಂತೆ ಉದ್ಘಾಟಿಸುತ್ತಿದ್ದು, ರಾಜ್ಯದ ಸಂಸ್ಕೃತಿ, ಪರಂಪರೆ, ಸಂಪ್ರದಾಯವನ್ನು ಚಿತ್ರದ ಮೂಲಕ ರಾಜ್ಯ ಮತ್ತು ಜಗತ್ತಿಗೆ ತಿಳಿಸಬೇಕೆಂಬ ಪ್ರಯತ್ನವನ್ನು ಚಿತ್ರ ಕಲಾ ಪರಿಷತ್ತು ಮಾಡುತ್ತಿದೆ ಎಂದು ತಿಳಿಸಿದ ಮುಖ್ಯಮಂತ್ರಿಗಳು ಚಿತ್ರಸಂತೆ ಆಯೋಜಿಸಿದ್ದ ಎಲ್ಲಾ ಪದಾಧಿಕಾರಿಗಳನ್ನು ಅಭಿನಂದಿಸಿದರು.

ಚಿತ್ರಸಂತೆಯಲ್ಲಿ 22 ರಾಜ್ಯಗಳ ಕಲಾವಿದರು ಪಾಲ್ಗೊಳ್ಳುತ್ತಿರುವುದು ಶ್ಲಾಘನೀಯ. ಜಗತ್ತಿನ ಯಾವ ಭಾಗದಲ್ಲಿಯೂ ಚಿತ್ರಸಂತೆ ನಡೆಯುವುದನ್ನು ನಾನು ನೋಡಿಲ್ಲ. ಕರ್ನಾಟಕದಲ್ಲಿ ಅದರಲ್ಲೂ ಬೆಂಗಳೂರಿನಲ್ಲಿ ಚಿತ್ರನಟ ನಡೆಯುವುದು ಹೆಮ್ಮೆಯ ಸಂಗತಿ ಎಂದರು.

**ಕಲಾವಿದರಿಗೆ ವೇದಿಕೆ:** ಅನೇಕ ಚಿತ್ರಕಲಾವಿದರಿಗೆ ವೇದಿಕೆಯನ್ನು ಕಲ್ಪಿಸಿ ಅವರ ಪ್ರತಿಭೆಯನ್ನು ಪ್ರದರ್ಶಿಸಿ ಆಸಕ್ತರಿಗೆ ಕೊಳ್ಳುವ ಅವಕಾಶವನ್ನೂ ಚಿತ್ರದಂತೆ ಒದಗಿಸುತ್ತಿದೆ. ಒಂದು ದಿನಕ್ಕೆ ನಾಲ್ಕು ಲಕ್ಷ ಜನರು ಭೇಟಿ ನೀಡುತ್ತಾರೆ. ಬೆಂಗಳೂರಿಗೆ ಇದೊಂದು ಸುವರ್ಣಾವಕಾಶ ಎಂದರು.



**ಚಿತ್ರಸಂತೆ ಮಹಿಳೆಯರಿಗೆ ಸಮರ್ಪಿತ:** ಈ ಬಾರಿಯ ಚಿತ್ರಸಂತೆಯನ್ನು ಹೆಣ್ಣುಮಕ್ಕಳಿಗೆ ಸಮರ್ಪಣೆ ಮಾಡಿರುವುದು ವಿಶೇಷ. ಹೆಣ್ಣುಮಕ್ಕಳ ಪರವಾಗಿ ಕೆಲಸ ಮಾಡಿದ ಮಹಾತ್ಮಾ ಗಾಂಧಿ, ಅಂಬೇಡ್ಕರ್, ಸಾವಿತ್ರಿಬಾಯಿ ಫುಲೆ, ಫಾತಿಮಾ ಶೇಖ್, ಕಮಲಾ ಬಾಯಿ ಚಟ್ಟೋಪಾಧ್ಯಾಯ, ಯಶೋಧರಮ್ಮ ದಾಸಪ್ಪ, ದತ್ತಮ್ಮ ಮೊದಲಾದವರ ಚಿತ್ರಗಳನ್ನು ಪ್ರದರ್ಶಿಸಿದ್ದಾರೆ. ಒಬ್ಬ ಪುರುಷನಿಗೆ ಶಿಕ್ಷಣ ನೀಡಿದರೆ ಒಬ್ಬ ವ್ಯಕ್ತಿಗೆ ಶಿಕ್ಷಣ ನೀಡಿದಂತಾಗುತ್ತದೆ. ಒಬ್ಬ ಮಹಿಳೆಗೆ ಶಿಕ್ಷಣ ನೀಡಿದರೆ ಒಂದು ಕುಟುಂಬವೇ ಕಲಿತಂತಾಗುತ್ತದೆ ಎಂದರು.

**ಮಹಿಳಾ ಸಬಲೀಕರಣಕ್ಕಾಗಿ ಶಕ್ತಿ ಹಾಗೂ ಗೃಹಲಕ್ಷ್ಮೀ ಯೋಜನೆ:** ಹೆಣ್ಣುಮಕ್ಕಳು ಶೋಷಣೆ, ತಾರತಮ್ಯ, ಅನ್ಯಾಯಕ್ಕೆ ಒಳಗಾದವರು. ಅವರನ್ನು ಆರ್ಥಿಕವಾಗಿ, ಸಾಮಾಜಿಕವಾಗಿ ಸಬಲರನ್ನಾಗಿಸಲು ಶಕ್ತಿ ಹಾಗೂ ಗೃಹಲಕ್ಷ್ಮಿ ಯೋಜನೆಗಳನ್ನು ಜಾರಿ ಮಾಡಿದ್ದೇವೆ ಎಂದರು.

**ಸಾವಿರ ಪದಗಳಿಗಿಂತಲೂ ಚಿತ್ರವೊಂದು ಪ್ರಭಾವಶಾಲಿ:** ಸಂವಿಧಾನದ ಪೀಠಿಕೆಯನ್ನು ಕೂಡ ಇಲ್ಲಿ ಪ್ರದರ್ಶಿಸಲಾಗಿದ್ದು, ಸಮಾಜದ ಎಲ್ಲಾ ವರ್ಗದ ಜನರನ್ನೂ ಪ್ರತಿನಿಧಿಸುತ್ತಿದೆ. ಒಂದು ಚಿತ್ರ ಸಾವಿರ ಪದಗಳಿಗಿಂತಲೂ ಪ್ರಭಾವಶಾಲಿಯಾಗಿದೆ. ಚಿತ್ರದ ಮೂಲಕ ಜನಜೀವನ, ಸಂಸ್ಕೃತಿ, ಪರಂಪರೆಯನ್ನು ಬಿಂಬಿಸಬಹುದಾಗಿದೆ. ಚಿತ್ರಕಲಾ ಪರಿಷತ್ತು ಉತ್ತಮ ಕೆಲಸ ಮಾಡುತ್ತಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

# ಬ್ಯಾಟಿಂಗ್‌ನಲ್ಲಿ ಧಮ್ ಇಲ್ಲ : ಕೋಚ್‌ಗಳು ಏನ್ ಮಾಡ್ತಿದ್ದಾರೆ?

ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ಬಾರ್ಡರ್-ಗವಾಸ್ಕರ್ ಟ್ರೋಫಿ ಟೆಸ್ಟ್ ಸರಣಿ ಮುಕ್ತಾಯಗೊಂಡಿದ್ದು, ಭಾರತ ಹೀನಾಯ ಸೋಲಿನೊಂದಿಗೆ ಸರಣಿ ಸೋಲುಕಂಡಿದೆ. ಇದರೊಂದಿಗೆ ಟಿ20 ವಿಶ್ವಕಪ್ ಗೆದ್ದ ಬಳಿಕ ಏಕದಿನ ಮತ್ತು ಟೆಸ್ಟ್‌ನಲ್ಲಿ ಸತತ 3ನೇ ಸರಣಿಯಲ್ಲಿ ಭಾರತ ಸೋಲು ಕಂಡಿದೆ. ಟೀಂ ಇಂಡಿಯಾದ ಕಳಪೆ ಬ್ಯಾಟಿಂಗ್ ಪ್ರದರ್ಶನಕ್ಕೆ ಮಾಜಿ ಕ್ರಿಕೆಟಿಗ ಸುನೀಲ್ ಗವಾಸ್ಕರ್ ತೀವ್ರ ಅಸಮಾಧಾನ ಹೊರಹಾಕಿದ್ದಾರೆ. ಬ್ಯಾಟಿಂಗ್ ಕೋಚ್‌ಗಳನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.



ಪಂದ್ಯದ ಬಳಿಕ ಸ್ಟಾರ್‌ಸ್ಪೋರ್ಟ್ಸ್ ಜೊತೆಗೆ ಮಾತನಾಡಿದ ಸುನೀಲ್ ಗವಾಸ್ಕರ್, ನಾನು ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್‌ಬಗ್ಗೆ ಮಾತನಾಡುತ್ತಿಲ್ಲ. ಆದ್ರೆ ಟೀಂ ಇಂಡಿಯಾ ಬ್ಯಾಟಿಂಗ್ ಕೋಚ್‌ಗಳು ಏನ್ ಮಾಡ್ತಿದ್ದಾರೆ? ಎಂದು ಪ್ರಶ್ನೆ ಮಾಡಿದ್ದಾರೆ.

ನ್ಯೂಜಿಲೆಂಡ್ ವಿರುದ್ಧ ಟೆಸ್ಟ್ ಪಂದ್ಯದಲ್ಲಿ ಭಾರತ 46 ರನ್‌ಗಳಿಗೆ ಆಲೌಟ್ ಆಗಿದ್ದನ್ನು ನೋಡಿದ್ದೇವೆ. ಅಲ್ಲದೇ ಆ ಸರಣಿಯಲ್ಲೂ ಭಾರತ ಸೋಲು ಅನುಭವಿಸಿತು. ಬೌಲಿಂಗ್ ಪ್ರದರ್ಶನ ಉತ್ತಮವಾಗಿದೆ. ಆದ್ರೆ, ಬ್ಯಾಟಿಂಗ್‌ನಲ್ಲಿ ಧಮ್ ಇಲ್ಲ. ನಾನೊಬ್ಬ ಟೆಸ್ಟ್ ಪ್ಲೇಯರ್ ಆಗಿ ಇದನ್ನ ಮಾತನಾಡ್ತಿದ್ದೇನೆ. ಇಂಗ್ಲೆಂಡ್ ವಿರುದ್ಧ 5 ಪಂದ್ಯಗಳ ಟೆಸ್ಟ್ ಸರಣಿಗೂ ಮುನ್ನ 2 ತಿಂಗಳ ಅಭ್ಯಾಸ ಇತ್ತು. ಈಗ ಕೋಚ್‌ಗಳು ಬ್ಯಾಟಿಂಗ್‌ನಲ್ಲಿ ಏನ್ ಇಂಪ್ರೂವ್ಮೆಂಟ್ ಆಗಿದೆ ಅಂತ ಹೇಳಲಿ ಎಂದು ಕಿಡಿಕಾರಿದ್ದಾರೆ.

**ಸಿಡ್ನಿಯಲ್ಲಿ ಸುನೀಲ್ ಗವಾಸ್ಕರ್‌ಗೆ ಅಪಮಾನ:** ಇನ್ನೂ ಸರಣಿ ಅಂತ್ಯದಲ್ಲಿ ಭಾರತದ ಕ್ರಿಕೆಟ್ ದಂತಕಥೆ ಸುನಿಲ್ ಗವಾಸ್ಕರ್‌ಗೆ ಆಯೋಜಕರು ಅಪಮಾನ ಮಾಡಿದ್ದಾರೆ ಎನ್ನಲಾಗಿದೆ. ಸಿಡ್ನಿ ಕ್ರಿಕೆಟ್ ಮೈದಾನದಲ್ಲಿ ನಡೆದ ಪ್ರಶಸ್ತಿ ಸಮಾರಂಭದ ವೇಳೆ ಸುನಿಲ್ ಗವಾಸ್ಕರ್ ಅವರಿಗೆ ಆಯೋಜಕರು ಅಪಮಾನ ಮಾಡಿದ್ದು, ಅವರ ಗೈರಿನಲ್ಲೇ ಪ್ರಶಸ್ತಿ ಪ್ರದಾನ ಮಾಡಿರುವ ಘಟನೆ ನಡೆದಿದೆ.

ಆಸ್ಟ್ರೇಲಿಯಾದ ಅಲನ್ ಬಾರ್ಡರ್ ಹಾಗೂ ಭಾರತದ ಸುನಿಲ್ ಗವಾಸ್ಕರ್ ಹೆಸರಿನಲ್ಲಿ ಈ ಸರಣಿ ನಡೆದಿತ್ತು. ಸರಣಿ ಗೆದ್ದ ಆಸ್ಟ್ರೇಲಿಯಾ ತಂಡಕ್ಕೆ ಬಾರ್ಡರ್ ಅವರು ಟ್ರೋಫಿಯನ್ನು ನೀಡಿದರು. ಆದ್ರೆ, ಅದೇ ಸಮಯದಲ್ಲಿ ಗವಾಸ್ಕರ್, ಸ್ಥಳದಲ್ಲಿದ್ದರೂ ಅವರನ್ನು ನಿರ್ಲಕ್ಷಿಸಲಾಗಿತ್ತು. ಆದರೆ ಭಾರತ ವಿರುದ್ಧ ಸರಣಿ ಗೆದ್ದ ಬಳಿಕ ಆಸ್ಟ್ರೇಲಿಯಾ ತಂಡಕ್ಕೆ ಟ್ರೋಫಿ ನೀಡಲು ತಮ್ಮನ್ನು ಆಹ್ವಾನಿಸದಿದ್ದಕ್ಕಾಗಿ ಕ್ರಿಕೆಟ್ ದಂತಕಥೆ ಸುನಿಲ್ ಗವಾಸ್ಕರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಯಾವುದೇ ಮಂತ್ರಿ, ಶಾಸಕರ ಮಕ್ಕಳು ಬಸ್‌ನಲ್ಲಿ ಓಡಾಡಲ್ಲ

# ಟಿಕೆಟ್ ದರ ಏರಿಕೆಗೆ ಹೆಚ್‌ಡಿಕೆ ಕಿಡಿ

**ಮೈಸೂರು:** ಯಾವುದೇ ಮಂತ್ರಿ, ಶಾಸಕರ ಮಕ್ಕಳು ಬಸ್‌ನಲ್ಲಿ ಓಡಾಡುವುದಿಲ್ಲ. ಓಡಾಡುವವರೆಲ್ಲಾ ಜನಸಾಮಾನ್ಯರು. ಸಾರಿಗೆ ದರ ಏರಿಕೆ ಜನಸಾಮನ್ಯರಿಗೆ ಹೊರಯಾಗಲಿದೆ ಎಂದು ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಕಿಡಿಕಾರಿದ್ದಾರೆ.

ಬಸ್ ಟಿಕೆಟ್ ದರ ಏರಿಕೆ ಕುರಿತು ಮೈಸೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸರ್ಕಾರ ಗ್ಯಾರಂಟಿಯನ್ನ ನಿಲ್ಲಿಸಲು ಕಾರಣ ಹುಡುಕುತ್ತಿದೆ. ಹೇಗಾದರು ಮಾಡಿ ಗ್ಯಾರಂಟಿ ನಿಲ್ಲಿಸಲು ನೆಪ ಹುಡುಕುತ್ತಿದ್ದಾರೆ. ಯಾವುದೇ ಕಾರಣಕ್ಕೂ 5 ಗ್ಯಾರಂಟಿ ನಿಲ್ಲಿಸಬೇಡಿ. ಸಾಕಷ್ಟು ಜನರಿಗೆ ಇದರಿಂದ ಅನುಕೂಲ ಆಗಿದೆ ಎಂದು ಹೇಳುತ್ತಿದ್ದಾರೆ. ಆದರೆ ಅವರಿಂದಲೇ ಕಿತ್ತು ಅವರಿಗೆ ಕೊಡುವ ಕೆಲಸವನ್ನ ಸರ್ಕಾರ ಮಾಡಬಾರದು. ಮಧ್ಯಮ ವರ್ಗದ ಜನರ ಬದುಕಿನ ಜೊತೆ ರಾಜ್ಯ ಸರ್ಕಾರ ಚೆಲ್ಲಾಟವಾಡುತ್ತಿದೆ. ಅತ್ತೆದನ್ನ ಅಳಿಯ ದಾನ ಮಾಡಿದ ಅನ್ನೋ ಮಾತಿನಂತೆ ಅವರಿಂದ ಕಿತ್ತು ಅವರಿಗೆ ಕೊಡೋಕೆ ಇವರೇ ಆಗಬೇಕಾ? ಬಸ್‌ನಲ್ಲಿ ಓಡಾಡುವವರೆಲ್ಲಾ ಜನಸಾಮಾನ್ಯರು. ದಿನಕ್ಕೆ 10 ರೂ. ಹೆಚ್ಚಿಗೆಯಾದರೂ ಅದು ಅವರಿಗೆ ಹೊರೆಯಾಗಲಿದೆ ಎಂದು ವಾಗ್ದಾಳಿ ನಡೆಸಿದರು.



ಕಾಂಗ್ರೆಸ್ ಅವಧಿಯಲಿ 60% ಲಂಚ ತಲುಪಿದೆ. ಇದನ್ನು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರೇ ಒಪ್ಪಿಕೊಂಡಿದ್ದಾರೆ. ಮನೆ ಹಂಚಿಕೆಯಲ್ಲೂ ಲಂಚ ಪಡೆಯಲಾಗುತ್ತಿದೆ. ಮೊದಲು ಪಿಡಿಓ ಲಂಚ ಪಡೆಯುತ್ತಿದ್ದ. ಈಗ ವಿಧಾನಸೌಧಲ್ಲಿ ಸಚಿವರೇ ಲಂಚ ಪಡೆಯುತ್ತಿದ್ದಾರೆ. ಸತ್ಯಮೇವಾ ಜಯತೇ ಎನ್ನುವ ಸಿದ್ದರಾಮಯ್ಯ ಆ ರೀತಿ ನಡೆದುಕೊಳ್ಳುತ್ತಿದ್ದಾರಾ? ಅವರ ಆತ್ಮಕ್ಕೆ ಅವರು ಉತ್ತರ ಕೊಟ್ಟುಕೊಳ್ಳಲಿ. ಹಣ ಲೂಟಿ ಮಾಡುವುದಕ್ಕೆ ಇತಿಮಿತಿ ಇಲ್ವಾ? ಇದನ್ನು ನೋಡಿದರೆ ಹಿಂದಿನ ಬಿಜೆಪಿ ಸರ್ಕಾರವೇ ಚೆನ್ನಾಗಿತ್ತು ಎಂದು ಕಾಂಗ್ರೆಸ್ ಪರ ಗುತ್ತಿಗೆದಾರರು ಹೇಳುತ್ತಿದ್ದಾರೆ. ಇದಕ್ಕೆಲ್ಲಾ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಸರ್ಕಾರ ಬೆಲೆ ತೆರಬೇಕಾಗುತ್ತದೆ ಎಂದು ಹರಿಹಾಯ್ದರು. ವಿರೋಧ ಪಕ್ಷವಾಗಿ ಬಿಜೆಪಿ ವಿಫಲ ವಿಚಾರವಾಗಿ ಪ್ರತಿಕ್ರಿಯಿಸಿ, ಇದನ್ನು ಹೇಳೋದು ನಾನಲ್ಲ. ಜನರು ಇದರ ಬಗ್ಗೆ ಸರ್ಟಿಫಿಕೇಟ್ ಕೊಡುತ್ತಾರೆ ಎಂದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com